ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 01 | PAGE- ಪುಟ 8 | ಶನಿವಾರ 01.02.2025 | RS.ಬೆಲೆ 2/-

# ಅಭಿವೃದ್ಧಿ ಹೊಂದಿದ ಭಾರತ ಸಂಕಲ್ಪದ ಬಜೇಟ್:ಪ್ರಧಾನಿ ಮೋದಿ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜ.31: ವಿದೇಶಿ ಹಸ್ತಕ್ಷೇಪವಿಲ್ಲದ ಮೊದಲ ಸಂಸತ್ ಅಧಿವೇಶನ ಇದಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಶುಕ್ರವಾರ ಹೇಳಿದ್ದು, ಈ ಮೂಲಕ ಪ್ರತಿಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಇಂದಿನಿಂದ ಸಂಸತ್ತಿನ ಬಜೆಟ್ ಅಧಿವೇಶನ ಶುರುವಾಗಲಿದ್ದು, ಈ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿಯವರು ಅಧಿವೇಶನ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದರು.

ಯಾವುದೇ ಶುಭ ಫಲಕ್ಕಾಗಿ ನಾವು ಮಹಾಲಕ್ಷ್ಮಿಯನ್ನು ಪ್ರಾರ್ಥಿಸುವುದು ಸಾಮಾನ್ಯ. ಬಜೆಟ್ ಅಧಿವೇಶನ ಆರಂಭಕ್ಕೂ ಮುನ್ನ ಸಂಪತ್ತು ಮತ್ತು ಸಮೃದ್ಧಿಯ ದೇವತೆ ಲಕ್ಷ್ಮಿ ದೇವಿಗೆ ನಮಸ್ಕರಿಸುತ್ತೇನೆ. ಲಕ್ಷ್ಮಿ ದೇವಿ ನಮ್ಮ ದೇಶದ ಬಡ ಮತ್ತು ಮಧ್ಯಮ ವರ್ಗದವರನ್ನು ಆಶೀರ್ವದಿಸಲಿ ಎಂದು ಹೇಳಿದರು.

ಇದು ಮೂರನೇ ಅವಧಿಯ ಮೊದಲ ಪೂರ್ಣ ಬಜೆಟ್ ಆಗಿದೆ. 2047 ರಲ್ಲಿ ಅಭಿವೃದ್ಧಿ ಹೊಂದಿದ ಭಾರತದ ಸಂಕಲ್ಪವನ್ನು ಈಡೇರಿಸುತ್ತದೆ ಎಂದು ನಾನು ವಿಶ್ವಾಸದಿಂದ ಹೇಳಬಲ್ಲೆ ಎಂದು ತಿಳಿಸಿದರು.



ಪ್ರಜಾಪ್ರಭುತ್ವ ರಾಷ್ಟ್ರವಾಗಿ ಭಾರತ 75 ವರ್ಷಗಳನ್ನು ಪೂರ್ಣಗೊಳಿಸಿದೆ ಎಂಬುದು ಬಹಳ ಹೆಮ್ಮೆಯ ವಿಷಯವಾಗಿದೆ. ಭಾರತವು ಜಾಗತಿಕ ವ್ಯವಸ್ಥೆಯಲ್ಲೂ ತನ್ನನ್ನು ತಾನು ಉತ್ತಮವಾಗಿ ಸ್ಥಾಪಿಸಿಕೊಂಡಿದೆ. ಇದು ನನ್ನ ಮೂರನೇ ಅವಧಿಯ ಮೊದಲ ಸಂಪೂರ್ಣ ಬಜೆಟ್. 2047 ರಲ್ಲಿ, ಭಾರತವು 100 ವರ್ಷಗಳ ಸ್ವಾತಂತ್ರ್ಯ ದಿನಾಚರಣೆ ಪೂರ್ಣಗೊಳಿಸಿದಾಗ, ಅದು ವಿಕಸಿತ ಭಾರತವಾಗಿ ದಾಖಲಾಗಬೇಕು. ಆ ಗುರಿಯನ್ನು ಸಾಧಿಸಬೇಕು. ಈ ಹಿನ್ನೆಲೆಯಲ್ಲಿ ಈ ಬಜೆಟ್ ರಾಷ್ಟ್ರಕ್ಕೆ ಹೊಸ ಶಕ್ತಿ ಮತ್ತು ಭರವಸೆಯನ್ನು ನೀಡುತ್ತದೆ ಎಂದು ನಾನು ವಿಶ್ವಾಸದಿಂದ ಹೇಳಬಲ್ಲೆ. 2047ರ ಹೊತ್ತಿಗೆ ದೇಶವನ್ನು ಅಭಿವೃದ್ಧಿಪಡಿಸಲಾಗುವುದು

ನಾವು ಮಿಷನ್ ಮೋಡ್‌ನಲ್ಲಿ ಮುನ್ನಡೆಯುತ್ತಿದ್ದೇವೆ. ನಾವೀನ್ಯತೆ, ಸೇರ್ಪಡೆ ಮತ್ತು ಹೂಡಿಕೆಯಾವಾಗಲೂ ನಮ್ಮ ಆರ್ಥಿಕ ಕಾರ್ಯತಂತ್ರದ ಅಡಿಪಾಯವಾಗಿದೆ. ಈ ಅಧಿವೇಶನದಲ್ಲಿ ಹಿಂದಿನಂತೆ ಅನೇಕ ಮಹತ್ವದ ಮಸೂದೆಗಳನ್ನು ಮಂಡಿಸಿ ಚರ್ಚಿಸಲಾಗುವುದು. ಸಂಪೂರ್ಣ ಚರ್ಚೆಯ ನಂತರ, ದೇಶವನ್ನು ಬಲಪಡಿಸುವುದಕ್ಕಾಗಿ ಈ ಮಸೂದೆಗಳನ್ನು ಜಾರಿಗೆ ತರಲಾಗುವುದು ಎಂದು ಹೇಳಿದರು.

ಇದೇ ವೇಳೆ ವಿರೋಧ ಪಕ್ಷಗಳಿಗೆ ಟಾಂಗ್ ನೀಡಿದ ಮೋದಿಯವರು, 2014 ರಿಂದ ಇದೇ ಮೊದಲ ಬಾರಿಗೆ ವಿದೇಶಿ ಹಸ್ತಕ್ಷೇಪವಿಲ್ಲದ ಸಂಸತ್ ಅಧಿವೇಶ ನಡೆ-ಯುತ್ತಿದೆ. ಯಾವುದೇ ವಿದೇಶಿ ಶಕ್ತಿಗಳು ಅಶಾಂತಿಯನ್ನು ಹುಟ್ಟುಹಾಕಲು ಪ್ರಯತ್ನಿಸುತ್ತಿಲ್ಲ. ಪ್ರತಿ ಬಜೆಟ್ ಅಧಿವೇಶನದಲ್ಲೂ ಇಂತಹ ಹಸ್ತಕ್ಷೇಪವನ್ನು ಗಮನಿಸುತ್ತಿದ್ದೆ. ಯಾವಾಗಲೂ ಅಶಾಂತಿ ಸೃಷ್ಟಿಸುವ ಪ್ರಯತ್ನಗಳು ನಡೆಯುತ್ತಿದ್ದವು. ದುರದೃಷ್ಟವಶಾತ್ ನಮ್ಮಲ್ಲಿನ ನಾಯಕರೂ ಕೂಡ ಅದ-ಕ್ಕೆ ಕುಮ್ಮಕ್ಕು ನೀಡುತ್ತಿದ್ದರು ಎಂದು ಟೀಕಿಸಿದರು.

## ಪಂಢರಪುರದಲ್ಲಿ ಗಮನ ಸೆಳೆದ ಬಳ್ಳಾರಿಯ ನೃತ್ಯ ರೂಪಕ



ಮಲ್ಲಮ್ಮ ನುಡಿ ವಾರ್ತೆ


ಬಳ್ಳಾರಿ:ಕರ್ನಾಟಕ ಹಿಂದೂಸ್ಥಾನಿ ಸಂಗೀತ ಪಿತಾಮಹರೆಂದೇ ಪ್ರಖ್ಯಾತರಾದ ಶ್ರೀಪುರಂದರ ದಾಸರ 461ನೇ ಯ ಆರಾಧನಾ ಮಹೋತ್ಸವ ನಿಮಿತ್ತ ಪಂಢರಪುರದಲ್ಲಿ ಹಮ್ಮಿಕೊಂಡಿದ್ದ ಸಾಂಸ್ಕೃತಿಕ

(2ನೇ ಪುಟ ನೋಡಿ)

## ಕೇಂದ್ರ ಬಜೆಟ್‌ನಲ್ಲಿ 11,495 ಕೋಟಿ ರೂ. ವಿಶೇಷ ಅನುದಾನ ಕೇಳಿದ ರಾಜ್ಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜ.31: ಕಲ್ಯಾಣ ಕರ್ನಾಟಕದ ಹಿಂದುಳಿದ ಪ್ರದೇಶದ ಅಭಿವೃದ್ಧಿಗೆ ವಿಶೇಷ ಅನುದಾನ, ಮೇಕೆದಾಟು ಯೋಜನೆಗೆ ಅನುಮೋದನೆ ಮತ್ತು 15ನೇ ಹಣಕಾಸು ಆಯೋಗ ಶಿಫಾರಸು ಮಾಡಿದ ವಿಶೇಷ ಅನುದಾನದ 11,495 ಕೋಟಿ ರೂ. ಬಿಡುಗಡೆ ಸೇರಿದಂತೆ ಹಲವು ಬೇಡಿಕೆಗಳನ್ನು ಕರ್ನಾಟಕ ಸರ್ಕಾರ ಕೇಂದ್ರದೊಂದಿಗೆ ನಡೆದ ಬಜೆಟ್ ಪೂರ್ವ ಸಮಾಲೋಚನೆಯ ಸಭೆಯಲ್ಲಿ ಮುಂದಿಟ್ಟಿದೆ.



ಕಳೆದ ತಿಂಗಳು, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಫೆಬ್ರವರಿ 1 ರಂದು ಮಂಡಿಸಲಿರುವ 2025-26ನೇ ಸಾಲಿನ ಕೇಂದ್ರ ಬಜೆಟ್‌ಗಾಗಿ ಬೇಡಿಕೆಗಳು ಮತ್ತು ಸಲಹೆಗಳನ್ನು ಪಡೆದುಕೊಳ್ಳಲು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ(ಯುಟಿ) ಹಣಕಾಸು ಸಚಿವರ ಸಭೆ ನಡೆಸಿದ್ದರು.

ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರದ ಪರವಾಗಿ

(2ನೇ ಪುಟ ನೋಡಿ)

## ಆರ್ಥಿಕ ಸಮೀಕ್ಷೆ:2025-26 ಜಿಡಿಪಿ ಬೆಳವಣಿಗೆ ಶೇ.6.3 ರಿಂದ 6.8 ಇರುವ ಅಂದಾಜು

ನವದೆಹಲಿ:ಜ.31: ಸಂಸತ್ತಿನ ಬಜೆಟ್ ಅಧಿವೇಶನ ಆರಂಭ ದಿನವಾದ ಇಂದು ಶುಕ್ರವಾರ ರಾಷ್ಟ್ರಪತಿಗಳ ಭಾಷಣ ನಂತರ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಂಸತ್ತಿನ ಉಭಯ ಸದನಗಳಲ್ಲಿ



2024-25ರ ಆರ್ಥಿಕ ಸಮೀಕ್ಷೆಯನ್ನು ಮಂಡಿಸಿದರು, ಈ ಸಮೀಕ್ಷೆಯು 2025-26ರ ಹಣಕಾಸು ವರ್ಷದ ಜಿಡಿಪಿ ಬೆಳವಣಿಗೆಯನ್ನು ಶೇಕಡಾ 6.3 ಮತ್ತು ಶೇಕಡಾ 6.8ರ ನಡುವೆ ಇರಬಹುದೆಂದು

(2ನೇ ಪುಟ ನೋಡಿ)

## ಎರಡನೇ ಬಾರಿ ಮತ್ತೆ ಅಧ್ಯಕ್ಷನಾಗುವ ವಿಶ್ವಾಸ ವ್ಯಕ್ತಪಡಿಸಿದ ವಿಜಯೇಂದ್ರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.31: ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ತಾವೇ ಎರಡನೇ ಬಾರಿ ಆಯ್ಕೆ ಆಗುವುದು ಬಹುತೇಕ ಖಚಿತ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸೇಡಂನಲ್ಲಿ ನಡೆಯುತ್ತಿರವು ಭಾರತೀಯ ಸಂಸ್ಕೃತಿ ಉತ್ಸವದಲ್ಲಿ ಪಾಲ್ಗೊಂಡ ಬಳಿಕ ಗಾಣಗಾಪುರದ ಶ್ರೀಗುರು ದತ್ತನ ದರ್ಶನ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯಾಧ್ಯಕ್ಷ ಸ್ಥಾನಕ್ಕೆ ತಾವು ಎರಡನೇ ಬಾರಿ ಸ್ಪರ್ಧಿಸುತ್ತಿರುವುದಾಗಿ



ತಿಳಿಸಿದರು.

ಯತ್ನಾಳ ಮತ್ತು ರೆಬೆಲ್ಸ್ ತಂಡ ಪ್ರತ್ಯೇಕವಾಗಿ ಸಭೆ ನಡೆಸಿರುವ ಕುರಿತು ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು,

ಗಾಣಗಾಪುರ ದತ್ತಾತ್ರೇಯ ಅವರಿಗೆ ಒಳ್ಳೆಯದು ಮಾಡಲಿ ಎಂದರು.

ಎರಡನೇ ಬಾರಿ ರಾಜ್ಯಾಧ್ಯಕ್ಷನಾಗಿ ಮುಂದುವರೆಯುವುದರಲ್ಲಿ ತಮಗೆ ಯಾವುದೇ ಅನುಮಾನವಿಲ್ಲ ಎಂದರು.

ರಾಜಕೀಯ ಪಕ್ಷ ಅಂದಮೇಲೆ ಕಷ್ಟ ಸಂಕಷ್ಟ ಎರಡೂ ಇರುತ್ತದೆ. ಒಂದಂತು ಸತ್ಯ; ಐದಾರು ಜನ ಹಿರಿಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವುದು ಆಗಿಲ್ಲ ಎಂದರೆ ನನ್ನ ಬಳಿ ಸಹ ಕೆಲವು ನ್ಯೂನತೆಗಳು ಇರಬಹುದು ಎಂದರು.

'ನನ್ನ ಕಡೆಯಿಂದ ತಿದ್ದಿಕೊಳ್ಳುವ ಪ್ರಯತ್ನ ಮಾಡುತ್ತಿದ್ದೇನೆ.

ಎಲ್ಲರನ್ನೂ ಜೊತೆಯಲ್ಲಿ ಕರೆದುಕೊಂಡು ಹೋಗುವ ವಿಶ್ವಾಸವಿದೆ ಎಂದರು.

## ಪತ್ರಿಕೆ ಓದುವ ಸಂಸ್ಕೃತಿ ಬೆಳೆಸಿಕೊಳ್ಳಿ:ಡಾ.ಲಕ್ಷ್ಮೀ ಪಾಟೀಲ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.31:ವಿಶ್ವದಾದ್ಯಂತ ನಡೆಯುವ ನೈಜ ಘಟನೆಗಳನ್ನು ಪತ್ರಿಕೆ ನಮಗೆ ಮಾಹಿತಿ ನೀಡುವುದರ ಜೊತೆಗೆ ಕಲೆ, ಸಂಸ್ಕೃತಿ, ವಾಣಿಜ್ಯ, ವ್ಯವಹಾರ, ಆಡಳಿತ, ರಾಜಕೀಯ ಜ್ಞಾನವನ್ನು ನೀಡುವ ಭಂಡಾರವಾಗಿದೆ. ಹೀಗಾಗಿ ವಿದ್ಯಾರ್ಥಿ ಸಮುದಾಯ ಮೋಬೈಲ್ ಗೀಳಿನಿಂದ ಹೊರಬಂದು ಪತ್ರಿಕೆ ಓದುವ ಸಂಸ್ಕೃತಿ ಬೆಳೆಸಿಕೊಳ್ಳಬೇಕೆಂದು ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯದ ಡೀನ್ ಡಾ. ಲಕ್ಷ್ಮೀ ಪಾಟೀಲ ಕರೆ ನೀಡಿದರು.

ಶುಕ್ರವಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ, ಶರಣಬಸವ ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಜಿಲ್ಲಾ ಘಟಕ ಕಲಬುರಗಿ ಇವುಗಳ ಸಂಯುಕ್ತಾಶಯದಲ್ಲಿ ಶರಣಬಸವ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ವಿಭಾಗದ ಅನುಭವ ಮಂಟಪದಲ್ಲಿ ಆಯೋಜಿಸಿದ ಪತ್ರಿಕಾ ದಿನಾಚರಣೆ ಮತ್ತು ಭಾರತದಲ್ಲಿ ಪ್ರಸಕ್ತ ಮಾಧ್ಯಮ ಸ್ಥಿತಿಗತಿ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಮಾಧ್ಯಮವನ್ನು ಸರ್ಕಾರದ ನಾಲ್ಕನೇ ಅಂಗವೆಂದೆ ಭಾವಿಸಲಾಗಿದೆ. ಪ್ರಜಾಪ್ರಭುತ್ವದ ಉಳಿವಿನಲ್ಲಿ ಮಾಧ್ಯಮ ಪಾತ್ರ ದೊಡ್ಡದಾಗಿದ್ದು, ಸಾರ್ವಜನಿಕರ ಸಂಕಷ್ಟಕ್ಕೆ ಸ್ಪಂದಿಸುವ ಮತ್ತು ಆಳುವ ಸರ್ಕಾರಕ್ಕೆ ಎಚ್ಚರಿಸುವ ಕೆಲಸ ಪತ್ರಿಕೆ ಮತ್ತು ಮಾಧ್ಯಮಗಳು ಮಾಡುತ್ತಿವೆ. ವಿದ್ಯಾರ್ಥಿಗಳು ಪ್ರತಿ ದಿನ ಪತ್ರಿಕೆ ಮತ್ತು ಪುಸ್ತಕ ಓದುವ ರೂಢಿ ಹಾಕಿಕೊಂಡಲ್ಲಿ ನಿಮ್ಮ ಓದುವ ಕೌಶಲ್ಯ ಸಹ ಹೆಚ್ಚಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ನ್ಯೂಸ್ ಪ್ರಿಂಟ್ ಅಮದು ಸುಂಕ ನಿಲ್ಲಿಸಿ: ಭಾರತದಲ್ಲಿ ಪ್ರಸಕ್ತ ಮಾಧ್ಯಮ ಸ್ಥಿತಿಗತಿ ಕುರಿತು ವಿಶೇಷ ಉಪನ್ಯಾಸದಲ್ಲಿ ಶರಣಬಸವ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಡೀನ್ ಟಿ.ವಿ.ಶಿವಾನಂದನ್ ಮಾತನಾಡಿ, ಕೋವಿಡ್ ನಂತರ ಪತ್ರಿಕೆಗಳ ಪ್ರಸಾರದಲ್ಲಿ ಗಣನೀಯ ಇಳಿಕೆ ನಡುವೆಯೂ ಪ್ರಜಾಪ್ರಭುತ್ವದ ಮೌಲ್ಯ ಎತ್ತಿ ಹಿಡಿಯುವ ಕೆಲಸ ಮಾಡುತ್ತಿರುವ ಪತ್ರಿಕಾ ಉದ್ಯಮ ಇಂದು ಸಂಕಷ್ಟದ ಸ್ಥಿತಿ ಎದುರಿಸುತ್ತಿದೆ. ಕೇಂದ್ರ ಸರ್ಕಾರ ಕೂಡಲೆ ನ್ಯೂಸ್ ಪ್ರಿಂಟ್ ಅಮದಿಗೆ ಸುಂಕ ಹೇರಿಕೆ ನಿಲ್ಲಿಸುವುದರ ಜೊತೆಗೆ ಮಾಧ್ಯಮವನ್ನು ಜಿ.ಎಸ್.ಟಿ. ವ್ಯಾಪ್ತಿಯಿಂದ ಹೊರತುರುವ ಮೂಲಕ ನಾಲ್ಕನೇ ಅಂಗದ ನೆರವಿಗೆ ಬರಬೇಕಿದೆ ಎಂದರು.

ಹಿಂದೆಲ್ಲ ಕೇಂದ್ರ ಸರ್ಕಾರ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು ನೀಡುತ್ತಿತ್ತು. ಆದರೆ ಇತ್ತೀಚೆಗೆ ಶೇ.60ರಷ್ಟು ಜಾಹೀರಾತು ನೀಡುವದನ್ನು ನಿಲ್ಲಿಸಿದ್ದರಿಂದ ಪತ್ರಿಕೆಗಳಿಗೆ ಆದಾಯ ಮೂಲವೆ ಇಲ್ಲದಂತಾಗಿದೆ. ಹೀಗಾಗಿ ಪತ್ರಿಕೆಗಳು ಆದಾಯ ಮೂಲ ಹುಡುಕುತ್ತಾ ಹೊರಟಿರುವುದು ದುರಾದೃಷ್ಟ. ಇನ್ನು ಸ್ಥಳೀಯ, ಪ್ರದೇಶದ ಸುದ್ದಿಗೆ ಮಹತ್ವ ನೀಡುವ ಸಣ್ಣ ಮತ್ತು ಪ್ರಾದೇಶಿಕ ಪತ್ರಿಕೆಗಳ ಸ್ಥಿತಿ ಸಹ ಹೇಳತೀರದು. ರಾಜ್ಯ ಸರ್ಕಾರದ ಜಾಹೀರಾತುಗಳೆ ಇವರ ಮೂಲ ಆದಾಯವಾಗಿದ್ದರಿಂದ, ಅಷ್ಟರ ಮಟ್ಟಿಗೆ ರಾಜ್ಯ ಸರ್ಕಾರ ಇವರ ನೆರವಿಗೆ ಬಂದಿರುವುದು ಸಂತಸದ ವಿಚಾರವಾಗಿದೆ. ಕೋವಿಡ್ ಸಂಕಷ್ಟ ಕಾಲದಲ್ಲಿ 2 ವರ್ಷಗಳ ಕಾಲ ವರದಿಗಾರರಿಗೆ ಶೇ.10 ರಿಂದ 30ರ ವರೆಗೆ ಕಡಿಮೆ ಸಂಬಳ ನೀಡಿದ್ದು, ಇದೀಗ

(2ನೇ ಪುಟ ನೋಡಿ)

## ಬಾಗಲಕೋಟೆ: ಪಿಡಿಓ ಹಿರೇಮಠ ನಿವಾಸದ ಮೇಲೆ ಲೋಕಾಯುಕ್ತ ದಾಳಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.31-ಅಕ್ರಮ ಆಸ್ತಿ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ಜಿಲ್ಲೆಯ ಬಾದಾಮಿ ತಾಲೂಕಿನ ಹೂಲಗೇರಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಎಸ್.ಪಿ.ಹಿರೇಮಠ ಅವರ ನಿವಾಸ ಹಾಗೂ ಕಚೇರಿ ಮೇಲೆ ಶುಕ್ರವಾರ ಬೆಳ್ಳಂಬೆಳಿಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ದಾಖಲೆ ಪರಿಶೀಲನೆ ನಡೆಸಿದರು.

ಬಾಗಲಕೋಟೆ ಹಾಗೂ ನರಗುಂದ ನಿವಾಸಗಳ ಮೇಲೆ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಪತ್ರಿಕೆ ಓದುವ ಸಂಸ್ಕೃತಿ ಬೆಳೆಸಿಕೊಳ್ಳಿ:ಡಾ.ಲಕ್ಷ್ಮೀ ಪಾಟೀಲ

ನಿಧಾನಗತಿಯಲ್ಲಿ ಪ್ರಸಾರ ಸಂಖ್ಯೆ ಹೆಚ್ಚಳವಾಗುತ್ತಿರುವುದರಿಂದ ಬಾಕಿ ಸಂಬಳ ಮಾಧ್ಯಮ ಸಂಸ್ಥೆಗಳು ನೌಕರರಿಗೆ ಪಾವತಿಸಬೇಕು ಎಂದು ಅವರು ಒತ್ತಾಯ ಮಾಡಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ನಡೆದ ಸ್ವಾತಂತ್ರ್ಯ ಚಳುವಳಿ, ಜನರ ಅಭಿಪ್ರಾಯ ಸಂಗ್ರಹಣೆ, ಸ್ವಾತಂತ್ರ್ಯ ಹೋರಾಟಕ್ಕೆ ಬಲ ನೀಡುವಲ್ಲಿ ಪತ್ರಿಕೆಗಳ ಪಾತ್ರ ಅಪಾರವಾಗಿದೆ. ಪ್ರಜಾಪ್ರಭುತ್ವಕ್ಕೆ ಆಪತ್ತು ಬಂದಾಗಲೆಲ್ಲ ಅದನ್ನು ರಕ್ಷಿಸುವ ಕೆಲಸ ಪತ್ರಿಕೆಗಳು ಮಾಡಿವೆ. 1975–77ರ ಅವಧಿಯ ತುರ್ತು ಪರಿಸ್ಥಿತಿ ಇದಕ್ಕೆ ಉತ್ತಮ ಉದಾಹರಣೆಯಾಗಿದೆ ಎಂದ ಅವರು ಭಾರತದಲ್ಲಿ ಮಾಧ್ಯಮ ಒಂದು ದೊಡ್ಡ ಉದ್ಯಮವಾಗಿ ಹೊರಹೊಮ್ಮಿದೆ ಎಂದರು.

ಪತ್ರಿಕೆ ಓದುವ ಖುಷಿ ಬೇರೊಂದರಲ್ಲಿಲ್ಲ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕ ಅಧ್ಯಕ್ಷ ಬಾಬುರಾವ ಯಡ್ರಾಮಿ ಮಾತನಾಡಿ, ಕೋವಿಡ್ ಕಾರಣ ಪ್ರತಿಷ್ಠಿತ ದೈನಿಕಗಳಾದ ಡೆಕ್ಕನ್ ಕ್ರೋನಿಕಲ್, ಡಿ.ಎನ್.ಎ., ಏಶಿಯನ್ ಏಜ್ ಮತ್ತು ಟೈಮ್ಸ್ ಗ್ರೂಪ್‌ನ ಮಹಾರಾಷ್ಟ್ರ ಟೈಮ್ಸ್ ಪತ್ರಿಕೆ ಮುಚ್ಚಲ್ಪಟ್ಟಿವೆ. ಕೋವಿಡ್ ಹೊಡೆತದಿಂದ ಹೆಚ್ಚು ತೊಂದರೆ ಅನುಭವಿಸಿರುವುದೇ ಪತ್ರಿಕೆಗಳು. ಆದರೆ ಇಂದು ನಿಧಾನತಿಯಲ್ಲಿ ಚೇತರಿಕೆ ಕಾಣುತ್ತಿರುವುದೇ ನಮಗೆ ಸಮಾಧಾನಕರ ಸಂಗತಿ ಎಂದರು.

ಪತ್ರಿಕೆ ನಿಂತ ನೀರಲ್ಲ, ಹರಿಯುವ ನದಿ ಇದ್ದಂತೆ. ಎಷ್ಟೆ ತಂತ್ರಜ್ಞಾನ ಬಂದರೂ ಪತ್ರಿಕೆ ಓದುವಲ್ಲಿ ನೀಡುವ ಖುಷಿ ಬೇರೊಂದಲ್ಲಿ ಸಿಗದು ಎಂದ ಅವರು ಪತ್ರಿಕೆ ಮತ್ತು ಪುಸ್ತಕ ಓದುವ ಅಭ್ಯಾಸ ವಿದ್ಯಾರ್ಥಿಗಳು ರೂಢಿಸಿಕೊಳ್ಳಬೇಕು. ಮುದ್ರಣ, ವಿದ್ಯುನ್ಮಾನ, ಡಿಜಿಟಲ್ ಮೀಡಿಯಾ ಜೊತೆಗೆ ಎಲ್ಲಾ ಕಾರ್ಪೋರೇಟ್ ಕಂಪನಿಗಳು ಸಹ ತಮ್ಮ ಉತ್ಪನ್ನದ ಪ್ರಚಾರ ಅಥವಾ ಸಂವಹನಕ್ಕಾಗಿ ಪತ್ರಿಕೋದ್ಯಮದ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳುತ್ತಿದ್ದು, ಪತ್ರಿಕೋದ್ಯಮದಲ್ಲಿ ವಿಪುಲ ಅವಕಾಶಗಳಿವೆ. ಪತ್ರಿಕೋದ್ಯಮದ ಕುರಿತು ಮುಂದಿನ ಭವಿಷ್ಯದ ಬಗ್ಗೆ ವಿದ್ಯಾರ್ಥಿಗಳಲ್ಲಿ ಚಿಂತೆ ಬೇಡ ಎಂದರು.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಭವಾನಿ ಸಿಂಗ್ ಅವರು ಸಹ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ದಿನಪತ್ರಿಕೆಗಳ ಸಂಪಾದಕರ ಸಂಘದ ಅಧ್ಯಕ್ಷ ಸಿದ್ರಾಮಪ್ಪ ಬಿರಾದರ, ಹಿರಿಯ ಪತ್ರಕರ್ತ ರಾಮೃಷ್ಣ ಬಡಶೇಷಿ ಸೇರಿದಂತೆ ವಾರ್ತಾ ಇಲಾಖೆಯ ಸಿಬ್ಬಂದಿಗಳು ಮತ್ತು ಪತ್ರಿಕೋದ್ಯಮ ವಿಭಾಗದ ಬೋಧಕ, ಬೋಧಕೇತರ ವೃಂದ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಜಡಿಯಪ್ಪ ಗೆದ್ಲಗಟ್ಟಿ ಸರ್ವರನ್ನು ಸ್ವಾಗತಿಸಿ ಪ್ರಸ್ತಾವಿಕವಾಗಿ ಮಾತನಾಡಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಸಂಗಮನಾಥ ರೇವತಗಾಂವ ನಿರೂಪಿಸಿದರು. ವಿದ್ಯಾರ್ಥಿನಿ ಯಶಸ್ವಿನಿ ವಂದಿಸಿದರು. ರಂಜಿತಾ ಮತ್ತು ತಂಡ ಪ್ರಾರ್ಥನೆ ಗೀತೆ ಹಾಡಿದರು.

## ಬಳ್ಳಾರಿಯ ನೃತ್ಯ ರೂಪಕ

ಕಾರ್ಯಕ್ರಮದಲ್ಲಿ ಬಳ್ಳಾರಿಯ ರೇಡಿಯೋ ಪಾರ್ಕ್ನ ಶ್ರೀ ವ್ಯಾಸರಾಜ ಮಹಿಳಾ ಭಜನಾ ಮಂಡಳಿ ಅಭಿನಯಿಸಿದ 'ಪಾಂಡುರಂಗ ತ್ವತ್ಪಾದ ಪಾಲಿಸಯ್ಯ' ನೃತ್ಯ ರೂಪಕ ಗಮನ ಸೆಳೆಯಿತು. ಭೂಲೋಕದ ವೈಕುಂಠವೆಂದೇ ಕರೆಯಲ್ಪಡುವ ಮಹಾರಾಷ್ಟ್ರದ ಶ್ರೀಕ್ಷೇತ್ರ ಪಂಢರಪುರದಲ್ಲಿ ಪುಣೆಯ ಶ್ರೀಹರಿದಾಸ ಸೇವಾಸಂಘ ಹಾಗೂ ಲಿಂಗಸೂಗೂರಿನ ಶ್ರೀ ಶ್ರೀಶದಾಸ ಭಜನೆ ಮಂಡಳಿ ಇವರು ಆಯೋಜಿಸಿದ್ದ ಸಾಂಸ್ಕೃತಿಕ ಕಾಯ9ಕ್ರಮ ದಲ್ಲಿ ಮಹಿಳಾ ಮಂಡಳಿಯವರು ಅತ್ಯಂತ ಮನಮೋಹಕವಗಿ ಅಭಿನಯಿಸಿ, ನೆರೆದವರು ಮತ್ತು ಅಪಾರ ಭಕ್ತಾಧಿಗಳ ಮನ ಸೂರೆಗೊಂಡರು. ಶ್ರೀ ಪಾಂಡುರಂಗನ ಮಹಿಮೆ ಕುರಿತು ಹಲವು ಯತಿವರೇಣ್ಯರು ಹಾಗೂ ದಾಸ ಶ್ರೇಷ್ಠರು ರಚಿಸಿದ ಕೃತಿಗಳಿಗೆ ಅಮೋಘ ನೃತ್ಯ ಪ್ರದಶ9ನ ಮಾಡಿ ಸಾವಿರಾರು ಭಕ್ತಾಧಿಗಳ ಪ್ರಶಂಸೆಗೆ ಪಾತ್ರರಾದರು. ಈ ನೃತ್ಯ ರೂಪಕದಲ್ಲಿ ಬಾಲಕರು, ಪುರುಷರು, ಮಹಿಳಾ ಸದಸ್ಯರು ಸೇರಿದಂತೆ ಐವತ್ತೂ ಹೆಚ್ಚಿನ ಸಃಖ್ಯೆಯಲ್ಲ ಭಾಗವಹಿಸಿದ್ದು ವಿಶೇಷ ವಾಗಿತ್ತು. ಈ ಕಾಯ9ಕ್ರಮದ ರುವಾರಿಯಾದ ವಿಜಯಲಕ್ಷ್ಮಿ ಸತ್ಯನಾರಾಯಣ ಅವರನ್ನು ಕಾಯ9 ಕ್ರಮದ ಆಯೋಜಕರು ಫಲ ಮಂತ್ರಾಕ್ಷತೆ ನೀಡಿ ಸನ್ಮಾನಿಸಿ ಗೌರವಿಸಿದರು. ಈ ಅಮೋಘ ನೃತ್ಯ ರೂಪಕದ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಎಲ್ಲ ಕಲಾವಿದರಿಗೆ ಫಲ ಮಂತ್ರಾಕ್ಷತೆ ನೀಡಿ ಶುಭ ಹಾರೈಸಲಾಯಿತು.

## ಲೋಕಾಯುಕ್ತ ದಾಳಿ

ಮತ್ತು ಹೂಲಗೇರಿಯ ಗ್ರಾಪಂ ಕಚೇರಿ ಮೇಲೆ ಏಕಕಾಲಕ್ಕೆ ಲೋಕಾಯುಕ್ತದಾಳಿ ನಡೆಸಿದ್ದು ಹಲವು ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದಿದ್ದಾರೆ ಎನ್ನಲಾಗಿದೆ.

ದೊರೆತ ಮಾಹಿತಿಯಂತೆ ಪಿಡಿಓ ಎಸ್.ಪಿ.ಹಿರೇಮಠಗೆ ಸಂಬಂಧಿಸಿದಂತೆ ಒಟ್ಟು 1 ಕೋಟಿ 43 ಲಕ್ಷ ರೂ.ಗಳ ಮೌಲ್ಯದ ಆಸ್ತಿ ಪಾಸ್ತಿಯ ದಾಖಲೆಗಳನ್ನು ಲೋಕಾಯುಕ್ತ ಅಧಿಕಾರಿಗಳು ಪಡೆದಿದ್ದಾರೆ ಎನ್ನಲಾಗಿದ್ದು, ಪಿಡಿಓ ಐಶಾರಾಮಿ ಮನೆ ಹೊಂದಿದ್ದಾರೆನ್ನಲಾಗಿದೆ.

ಬಾಗಲಕೋಟೆ ಲೋಕಾಯುಕ್ತ ಡಿವಾಯ್‌ಎಸ್ ಪಿ ಸಿದ್ದೇಶ ನೇತೃತ್ವದಲ್ಲಿ ದಾಳಿ ನಡೆದಿದ್ದು, ಸ್ಥಿರಾಸ್ತಿ, ಚರಾಸ್ತಿ, ವಾಹನ, ಆಭರಣ, ಮನೆ ಮತ್ತು ಸೈಟ್ ಸೇರಿ ಒಟ್ಟು 1 ಕೋಟಿ, 43 ಲಕ್ಷ ರೂ. ಮೌಲ್ಯದ ಆಸ್ತಿ ಹಿರೇಮಠ ಹೆಸರಿನಲ್ಲಿ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಶೇ.6.3 ರಿಂದ 6.8 ಇರುವ ಅಂದಾಜು

ಅಂದಾಜಿಸಿದೆ.ಸರ್ಕಾರದ ಮುಖ್ಯ ಆರ್ಥಿಕ ಸಲಹೆಗಾರರ ಮಾರ್ಗದರ್ಶನದಲ್ಲಿ ಹಣಕಾಸು ಸಚಿವಾಲಯ ಸಿದ್ಧಪಡಿಸಿದ ವಾರ್ಷಿಕ ವರದಿಯಾದ ಈ ಸಮೀಕ್ಷೆಯು, ಪ್ರಸಕ್ತ ವರ್ಷದ ಭಾರತದ ಆರ್ಥಿಕತೆಯ ಒಳನೋಟ ನೀಡುತ್ತದೆ ಮತ್ತು ಕೇಂದ್ರ ಬಜೆಟ್‌ಗೆ ಮುಂಚಿತವಾಗಿ ನೀತಿ ನಿರೂಪಕರಿಗೆ ಒಂದು ದಿಕ್ಸೂಚಿ ನೀಡುತ್ತದೆ.

ನಿಧಾನಗತಿಯ ಜಿಡಿಪಿ ಬೆಳವಣಿಗೆ, ದುರ್ಬಲ ಬಳಕೆ ಮತ್ತು ಖಾಸಗಿ ಹೂಡಿಕೆ ಮತ್ತು ಎಐ ಮತ್ತು ಆಟೋಮೇಶನ್ ಏರಿಕೆಯ ನಡುವೆ ಉದ್ಯೋಗ ಸೃಷ್ಟಿಯಲ್ಲಿನ ತೊಂದರೆಗಳು ಇತ್ಯಾದಿ ಆರ್ಥಿಕತೆ ಸವಾಲುಗಳನ್ನು ಎದುರಿಸುತ್ತಿರುವುದರಿಂದ– ಆರ್ಥಿಕ ಸಮೀಕ್ಷೆಯು ಈ ಕೆಲವು ಸಮಸ್ಯೆಗಳನ್ನು ಪರಿಹರಿಸುವ ನಿರೀಕ್ಷೆಯಿದೆ.

ಹಣಕಾಸು ಸಚಿವಾಲಯ ಮತ್ತು ಅದರ ಅಧಿಕಾರಿಗಳು ಆರ್ಥಿಕ ಸಮೀಕ್ಷೆಯನ್ನು ಸ್ವತಂತ್ರವಾಗಿ ತಯಾರಿಸುತ್ತಾರೆ. ಅದು ಬಜೆಟ್ ಮೇಲೆ ಪ್ರಭಾವ ಬೀರುವುದಿಲ್ಲ ಎಂದು ಹೇಳಿಕೊಂಡರೂ, ಮುಂಬರುವ ಸಂಭಾವ್ಯ ಬೆಳವಣಿಗೆಗಳ ಬಗ್ಗೆ ಒಳನೋಟಗಳನ್ನು ನೀಡುತ್ತದೆ.

ಮೊದಲ ಆರ್ಥಿಕ ಸಮೀಕ್ಷೆಯು 1950–51ರಲ್ಲಿ ಅಸ್ತಿತ್ವಕ್ಕೆ ಬಂದಿತು, ಅದು ಬಜೆಟ್ ದಾಖಲೆಗಳ ಭಾಗವಾಗಿತ್ತು. 1960 ರ ದಶಕದಲ್ಲಿ, ಇದನ್ನು ಕೇಂದ್ರ ಬಜೆಟ್‌ನಿಂದ ಬೇರ್ಪಡಿಸಿ ಬಜೆಟ್ ಮಂಡನೆಗೆ ಒಂದು ದಿನ ಮೊದಲು ಮಂಡಿಸಲಾಯಿತು. 2025–26 ರ ಕೇಂದ್ರ ಬಜೆಟ್ ನ್ನು ಹಣಕಾಸು ಸಚಿವರು ನಾಳೆ ಮಂಡಿಸಲಿದ್ದಾರೆ.

2024–25ನೇ ಸಾಲಿನ ಆರ್ಥಿಕ ಸಮೀಕ್ಷೆ ಮಂಡಿಸಿದ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್; ಶೇ.6.3 ರಿಂದ ಶೇ.6.8 ಉಆಕ ಬೆಳವಣಿಗೆ ಅಂದಾಜು

ಭಾರತ ಶೀಘ್ರದಲ್ಲೇ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕ ದೇಶವಾಗಲಿದೆ: ರಾಷ್ಟ್ರಪತಿ ದ್ರೌಪದಿ ಮುರ್ಮು

ಕಳೆದ ವರ್ಷ, ಆರ್ಥಿಕ ಸಮೀಕ್ಷೆಯು ಶೇಕಡಾ 6.5ರಿಂದ ಶೇಕಡಾ 7ರಷ್ಟು ಕಡಿಮೆ ಬೆಳವಣಿಗೆಯ ದರವನ್ನು ಮುನ್ಸೂಚಿಸಿತ್ತು, ಇದು ಆರ್ ಬಿಐ ಯೋಜಿಸಿದ ಶೇಕಡಾ 7.2ಕ್ಕಿಂತ ಕಡಿಮೆಯಾಗಿದೆ. ಸಮೀಕ್ಷೆಯ ವಿಷಯ ಆರ್ಥಿಕ ಸ್ಥಿತಿಸ್ಥಾಪಕತ್ವ ಮತ್ತು 2024 ರ ಕೇಂದ್ರ ಬಜೆಟ್‌ನಲ್ಲಿ ಪ್ರಸ್ತಾಪಿಸಲಾದ ನೀತಿಗಳಿಗೆ ಅನ್ವಯಿಸಿತ್ತು.

## ಎಂಬಿಬಿಎಸ್ ನಲ್ಲಿ ಅತ್ಯುತ್ತಮ ಫಲಿತಾಂಶ ಗಿಟ್ಟಿಸಿ ಸಾಧನೆ ತೋರಿದ ರಾಯಚೂರ ರಿಮ್ಸ್ ಸಂಸ್ಥೆಯ ವಿದ್ಯಾರ್ಥಿಗಳು





ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜ.31: ರಾಯಚೂರಿನ ಸರ್ಕಾರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಎಂ.ಬಿ.ಬಿ.ಎಸ್ ಮೊದಲ ಹಾಗೂ ಎರಡನೇ ವರ್ಷದ ವಿದ್ಯಾರ್ಥಿಗಳು ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದಿಂದ ಡಿಸೆಂಬರ್ ತಿಂಗಳಲ್ಲಿ ನಡೆದ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ತೋರಿದ್ದಾರೆ.

ನಾಲ್ವರಿಗೆ ಡಿಸ್ಟಿಂಕ್ಷನ್: ರಾಯಚೂರಿನ ರಿಮ್ಸ್ ವೈದ್ಯಕೀಯ ಸಂಸ್ಥೆಯಲ್ಲಿ 2023–24ನೇ ಸಾಲಿನ ವೈದ್ಯಕೀಯ ಪ್ರಥಮ ವರ್ಷದ ಪರೀಕ್ಷೆ ಬರೆದ ಎಲ್ಲ 150 ವಿದ್ಯಾರ್ಥಿಗಳೂ ತೇರ್ಗಡೆ–ಯಾಗಿ ಶೇ.100 ಫಲಿತಾಂಶ ಗಿಟ್ಟಿಸಿದ್ದಾರೆ. ಈ ಪೈಕಿ 4 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 80 ವಿದ್ಯಾರ್ಥಿಗಳು ಪ್ರಥಮ ದರ್ಜೆ, 57 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಸೇರಿದಂತೆ ಇತರೆ ವಿಭಾಗದಲ್ಲಿ ತೆ–ೕರ್ಗಡೆಯಾಗಿದ್ದಾರೆ.

ಮೊದಲ ವರ್ಷದ ಟಾಪರ್‌ಗಳು: ಮೊದಲ ವರ್ಷದ ಎಂ.ಬಿ.ಬಿ.ಎಸ್. ಪರೀಕ್ಷೆಯಲ್ಲಿ ಅಭಿಜ್ಞಾರಾವ್ ವಿ ಶೇ.79.78, ಸುಪ್ರಿಯಾ ಶೇ.78.67, ವರ್ಷ ಜಿ ಶೇ.77.78 ಮತ್ತು ಶ್ರುತಿ ಶೇ.77.56 ಅಂಕಗಳನ್ನು ಪಡೆದು ಮೊದಲ ವರ್ಷದ ಟಾಪರ್ ಆಗಿ ಹೊರಹೊಮ್ಮಿದ್ದಾರೆ. ಒಟ್ಟು 150 ವಿದ್ಯಾರ್ಥಿಗಳಲ್ಲಿ ಎಲ್ಲರೂ ತೇರ್ಗಡೆಯಾಗಿದ್ದಾರೆ. ಈ ಪೈಕಿ 18 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 107 ವಿದ್ಯಾರ್ಥಿಗಳು ಪ್ರಥಮ ದರ್ಜೆ, 57 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ.

ಎರಡನೇ ವರ್ಷದ ಟಾಪರ್‌ಗಳು: ಎರಡನೇ ವರ್ಷದ ಪರೀಕ್ಷೆಯಲ್ಲಿ ಪಾರ್ವತಿ ಪಾಟೀಲ್ ಶೇ.81, ಲಕ್ಷ್ಮಿಕಾಂತ ಶೇ.80, ಹರ್ಷಿತಾ ಜಿ.ಎ. ಶೇ.80, ರಾಜಶೇಖರ್ ಶೇ.80, ಬುಶ್ರಾ ಮೆಹಕ್ ಶೇ.79 ಪಡೆದು ಟಾಪರ್ ಆಗಿ ಹೊರಹೊಮ್ಮಿದ್ದಾರೆ.

ವೈದ್ಯಶಾಸ್ತ್ರ ವಿಭಾಗದಲ್ಲಿ ಡಾ.ಮೇರಿ ಪ್ರಿಯಾಗೆ ಡಿಸ್ಟಿಂಕ್ಷನ್: ವೈದ್ಯಶಾಸ್ತ್ರ ವಿಭಾಗದ ಸ್ನಾತ–ಕೋತ್ತರ ವಿಭಾಗದಲ್ಲಿ ಪರೀ–ಕ್ಷೆಗೆ ಹಾಜರಾಗಿದ್ದ ಒಟ್ಟು 4 ವಿದ್ಯಾರ್ಥಿಗಳಲ್ಲಿ ಡಾ.ಮೇರಿ ಪ್ರಿಯಾ ಶೇ.77ರಷ್ಟು ಅಂಕಗಳನ್ನು ಪಡೆದು ಡಿಸ್ಟಿಂಕ್ಷನ್‌ನಲ್ಲಿ ತೇರ್ಗಡೆಯಾಗಿದ್ದಾಳೆ. ಮೂವರು ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

ಶಸ್ತ್ರ ಚಿಕಿತ್ಸಾ ಶಾಸ್ತ್ರ ವಿಭಾಗದಲ್ಲಿ ಡಾ.ಐಶ್ವರ್ಯ ಪ್ರಥಮ: ಶಸ್ತ್ರಚಿಕಿತ್ಸಾ ಶಾಸ್ತ್ರ ವಿಭಾಗದಲ್ಲಿ ಒಟ್ಟು ನಾಲ್ವರು ವಿದ್ಯಾರ್ಥಿಗಳಲ್ಲಿ ಡಾ.ಐಶ್ವರ್ಯ ಕುಲಕರ್ಣಿ ಅವರು ಪ್ರಥಮ ಸ್ಥಾನ ಪಡೆದಿದ್ದು, ಇನ್ನುಳಿದ ಮೂವರು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಮಕ್ಕಳ ಚಿಕಿತ್ಸಾ ವಿಭಾಗದಲ್ಲಿ ಇಬ್ಬರು ಹಾಗೂ ನೇತ್ರಚಿಕಿತ್ಸಾ ವಿಭಾಗದಲ್ಲಿ ಇಬ್ಬರು ವಿದ್ಯಾರ್ಥಿಗಳು ತೆ–ೕರ್ಗಡೆಯಾಗಿದ್ದಾರೆ. ಕಿವಿ ಮೂಗು ಗಂಟಲು ವಿಭಾಗದಲ್ಲಿ ಒಬ್ಬರು, ಸಮುದಾಯ ಆರೋಗ್ಯ ಶಾಸ್ತ್ರ ವಿಭಾಗದಲ್ಲಿ ಒಬ್ಬರು, ಮಿಣಜೀವಶಾಸ್ತ್ರ ವಿಭಾಗದಲ್ಲಿ ಒಬ್ಬರು ತೇರ್ಗಡೆಯಾಗಿದ್ದಾರೆ.

ವಿದ್ಯಾರ್ಥಿಗಳಿಗೆ ಅಭಿನಂದನೆ: ರಿಮ್ಸ್ ಸಂಸ್ಥೆಯ ವೈದ್ಯಕೀಯ ವಿದ್ಯಾರ್ಥಿಗಳ ಅಭೂತಪೂರ್ವ ಸಾಧನೆಗೆ ಸಂಸ್ಥೆಯ ನಿರ್ದೇಶಕರಾದ ಡಾ.ರಮೇಶ್ ಬಿ.ಹೆಚ್., ಪ್ರಾಂಶುಪಾಲರಾದ ಡಾ.ಬಸವರಾಜ್ ಎಂ.ಪಾಟೀಲ್, ಮುಖ್ಯ ಆಡಳಿತಾಧಿಕಾರಿಗಳಾದ ಡಾ.ಕೆ.ಆರ್.ದುರುಗೇಶ್, ಆರ್ಥಿಕ ಸಲಹೆಗಾರರಾದ ಹನುಮೇಶ ನಾಯಕ, ವೈದ್ಯಕೀಯ ಅಧೀಕ್ಷಕರಾದ ಡಾ.ಭಾಸ್ಕರ್ ಕೆ., ನೋಡಲ್ ಅಧಿಕಾರಿಯಾದ ಡಾ.ಅರವಿಂದ ಕುಮಾರ ಬಿ. ಸಂಗಾವಿ ಸೇರಿದಂತೆ ಎಲ್ಲಾ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.

ಕಲ್ಯಾಣ ಕರ್ನಾಟಕಕ್ಕೆ ಹೆಮ್ಮೆಯ ಸಂಗತಿ: ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲೆ, ಕಾಲೇಜು, ಶಿಕ್ಷಣ ಸಂಸ್ಥೆಗಳೆಂದರೆ ನಾಗರೀಕರು ಗುಣಮಟ್ಟದ ವಿಷಯದ ಬಗ್ಗೆ ಅನುಮಾನಪಡುತ್ತಾ ಸರ್ಕಾರಿ ಸೇವೆಯ ಬಗ್ಗೆ ಮೂಗು ಮುರಿದು ಖಾಸಗಿ ಕಾಲೇಜುಗಳತ್ತ ಹೊರಳುತ್ತಿರುವ ದಿನಮಾನಗಳಲ್ಲಿ ಹಿಂದುಳಿದ ಜಿಲ್ಲೆ ಎಂಬ ಹಣೆಪಟ್ಟಿ ಹೊತ್ತಿರುವ ಕಲ್ಯಾಣ ಕರ್ನಾಟಕ ಭಾಗದ ರಾಯಚೂರಿನ ಸರ್ಕಾರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಾಗಿರುವ ರಿಮ್ಸ್ ಖಾಸಗಿ ಕಾಲೇಜುಗಳಿಗೆ ಸೆಡ್ಡು ಹೊಡೆಯುವಂತೆ ವೈದ್ಯಕೀಯ ಶಿಕ್ಷಣದ ಗುಣಮಟ್ಟದಲ್ಲಿ ರಾಜಿಯಿಲ್ಲದೇ ನಿರ್ವಹಣೆ ಮಾಡಿರುವುದನ್ನು ಇಲ್ಲಿನ ವಿದ್ಯಾರ್ಥಿಗಳು ಮಾಡಿರುವ ಸಾಧನೆಯು ಸಾಕ್ಷೀಕರಿಸುವಂತೆ ಮಾಡಿದೆ ಎಂದು ಆಡಳಿತ ಮಂಡಳಿ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಸಂತಷ ವ್ಯಕ್ತಪಡಿಸಿದ್ದಾರೆ.

## ವಿಶೇಷ ಅನುದಾನ ಕೇಳಿದ ರಾಜ್ಯ

ಕರ್ನಾಟಕದ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಬರಪೀಡಿತ ಮಧ್ಯ ಕರ್ನಾಟಕಕ್ಕೆ ನೀರು ಒದಗಿಸಲು ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಬಜೆಟ್‌ನಲ್ಲಿ ಭರವಸೆ ನೀಡಿದ್ದ 5,300 ಕೋಟಿ ರೂ.ಗಳನ್ನು ಮತ್ತು ಕಲ್ಯಾಣ

ಕರ್ನಾಟಕದ ಹಿಂದುಳಿದ ಪ್ರದೇಶ ಮತ್ತು ಜಾಗತಿಕ ಪರಿಸರ ಸೂಕ್ಷ್ಮ ಪಶ್ಚಿಮ ಘಟ್ಟಗಳ ಅಭಿವೃದ್ಧಿಗೆ ವಿಶೇಷ ಹೊಂದಾಣಿಕೆ ಅನುದಾನ ಬಿಡುಗಡೆ ಮಾಡುವಂತೆ ಕೋರಿದರು.ಕೇಂದ್ರ ಪ್ರಾಯೋಜಿತ ಯೋಜನೆಗಳ ಅನುಷ್ಠಾನಕ್ಕಾಗಿ "ಮರುಪಾವತಿ ಆಧಾರಿತ" ವ್ಯವಸ್ಥೆಯಿಂದ "ಮುಂಗಡ–ಬಿಡುಗಡೆ" ಮಾದರಿಗೆ ಬದಲಾಯಿಸುವಂತೆ ರಾಜ್ಯ ಸರ್ಕಾರ, ಕೇಂದ್ರ ಸರ್ಕಾರವನ್ನು ಒತ್ತಾಯಿಸಿತು ಮತ್ತು ಆಶಾ ಕಾರ್ಯಕರ್ತರಿಗೆ ಅವರ ಗೌರವಧನದ ಕೇಂದ್ರ ಪಾಲನ್ನು ತಿಂಗಳಿಗೆ 5,000 ರೂ.

ಮತ್ತು ಅಂಗನವಾಡಿ ಸಹಾಯಕಿಯರ ಗೌರವಧನವನ್ನು 2,000 ರೂ.ಗೆ ಹೆಚ್ಚಿಸುವಂತೆ ಮನವಿ ಮಾಡಿದರು.ಕೃಷ್ಣ ಬೈರೇಗೌಡ ಅವರ ಕಚೇರಿ ಶುಕ್ರವಾರ ಹಂಚಿಕೊಂಡ ಪ್ರಕಟಣೆಯ ಪ್ರಕಾರ, ನಗರದ ಮನೆಗಳಿಗೆ

ಪ್ರಧಾನ ಮಂತ್ರಿ ಆವಾಸ್ ಯೋಜನೆಯ ಸಹಾಯಧನವನ್ನು 1.5 ಲಕ್ಷ ರೂ.ಗಳಿಂದ ಐದು ಲಕ್ಷ ರೂ.ಗಳಿಗೆ ಮತ್ತು ಗ್ರಾಮೀಣ ಮನೆಗಳಿಗೆ 72,000 ರೂ.ಗಳಿಂದ ಮೂರು ಲಕ್ಷ ರೂ.ಗಳಿಗೆ ಹೆಚ್ಚಿಸುವಂತೆ ಕೋರಿದ್ದಾರೆ.ಹೊಸ ರಿಂಗ್ ರಸ್ತೆಗಳು ಮತ್ತು ರಾಷ್ಟ್ರೀಯ ಹೆದ್ದಾರಿಗಳ ನವೀಕರಣ ಸೇರಿದಂತೆ ರಸ್ತೆ ಮೂಲಸೌಕರ್ಯ ಪ್ರಸ್ತಾವನೆಗಳಿಗೆ ಅನುಮೋದನೆ ನೀಡುವಂತೆ ರಾಜ್ಯ ಸರ್ಕಾರ ಒತ್ತಾಯಿಸಿದೆ.

## ಹತ್ತಿಕುಣಿ ಪಿಕೆಪಿಎಸ್‌ಗೆ ಅಧ್ಯಕ್ಷರಾಗಿ ಮಾಲಿ ಪಾಟೀಲ್, ಉಪಾಧ್ಯಕ್ಷರಾಗಿ ಖಂಡಪ್ಪನೋರ ಅವಿರೋಧವಾಗಿ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ.31: ತಾಲ್ಲೂಕಿನ ಹತ್ತಿಕುಣಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ.ದ ಅಧ್ಯಕ್ಷರಾಗಿ ಶರಣಪ್ಪಗೌಡ ಮಾಲಿ ಪಾಟೀಲ್, ಉಪಾಧ್ಯಕ್ಷರಾಗಿ ಮಲ್ಲಿಕಾರ್ಜುನ ಖಂಡಪ್ಪನೋರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ,

ಸಂಘದ ಕಛೇರಿಯಲ್ಲಿ ನಡೆದ ಅಧ್ಯಕ್ಷ–ಉಪಾಧ್ಯಕ್ಷ ಆಯ್ಕೆ ಚುನಾವಣೆಗೆ ಶರಣಪ್ಪಗೌಡ ಮಾಲಿ ಪಾಟೀಲ್ ಅಧ್ಯಕ್ಷ ಸ್ಥಾನಕ್ಕೆ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಮಲ್ಲಿಕಾರ್ಜುನ ಖಂಡಪ್ಪನೋರ ಮಾತ್ರ ಏಕೈಕ ಅಭ್ಯರ್ಥಿಗಳಾಗಿ ಚುನಾವಣಾಧಿಕಾರಿ ಮಲ್ಲಿಕಾರ್ಜುನ ಅಲ್ಲೂರ ಅವರಿಗೆ ನಾಮಪತ್ರ ಸಲ್ಲಿಸಿದರು.

ಸ್ವಲ್ಪ ಸಮಯದ ನಂತರ ನಾಮಪತ್ರ ಪರಿಶೀಲನೆ ಮಾಡಿದ ಅಲ್ಲೂರ, ಉಭಯ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಿಸಿದರು. ಸಭೆಯಲ್ಲಿ ಸಂಘದ ಆಡಳಿತ ಮಂಡಳಿಯ 12 ಜನ ನಿರ್ದೇಶಕರು ಹಾಜರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ನೂತನ ಅಧ್ಯಕ್ಷ ಶರಣಪ್ಪಗೌಡ ಮಾಲಿ ಪಾಟೀಲ್, ನಮ್ಮ ಸಂಘವು ಉತ್ತಮವಾಗಿ ಕೆಲಸ ಮಾಡಿ ಜಿಲ್ಲೆಯಲ್ಲಿಯೇ ಉನ್ನತ ಸ್ಥಾನದಲ್ಲಿದೆ, ನಾನು ಕೂಡ ಎಲ್ಲರ ಸಹಕಾರದಿಂದ ಸರ್ಕಾರದ ಯೋಜನೆಗಳ ಲಾಭ ರೈತರಿಗೆ ಹಾಗೂ ಮಹಿಳಾ ಸ್ವ–ಸಹಾಯ ಸಂಘಗಳಿಗೆ ತಲುಪಿಸುವ ಮೂಲಕ ಸಂಘವನ್ನು ಆರ್ಥಿಕವಾಗಿ ಸದೃಢವಾಗಿ ಬಲಪಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಮಲ್ಲಣಗೌಡ ಮಾಲಿ ಪಾಟೀಲ್, ಮಹಿಪಾಲರಡ್ಡಿ ಪಾಟೀಲ್, ವೀರಭದ್ರಪ್ಪ ಯಡ್ಡಳ್ಳಿ, ಕೆಓಎಫ್ ಅಧ್ಯಕ್ಷ ಶರಣಪ್ಪ ಸೋಮಣ್ಣೋರ, ಸಾಬಣ್ಣ ತಮ್ಮಣ್ಣೋರ, ಅಮೀನರಡ್ಡಿ ಬಿಳ್ಹಾರ, ಭೋಜನಗೌಡ ಯಡ್ಡಳ್ಳಿ. ಬಸವರಾಜಪ್ಪ ನಾಯಕ, ಅಮೃತರಡ್ಡಿ ಪಾಟೀಲ್, ಮಲ್ಲಾರಡ್ಡಿ ಮಾಲಿ ಪಾಟೀಲ್, ನರಸಪ್ಪ ಇದ್ಲಿ, ಬಸವರಾಜ ಕೋಡ್ಲಾ, ಖಾಜಾ ಮೈನೋದ್ದಿನ್, ರವಿ ಪಾಟೀಲ್, ನರಸಪ್ಪ ಭೀಮನಳ್ಳಿ, ಶರಣಪ್ಪ ಮೋಟ್ನಳ್ಳಿ ಹೊನಗೇರಾ, ಶರಣಪ್ಪ ಶಂಕ್ರಪ್ಪನೋರ, ಚಂದ್ರಾರಡ್ಡಿ ಬಂದಳ್ಳಿ, ಹಣಮಂತ ನಾಯಕ, ಕೆವೈಡಿಸಿಸಿ ಬ್ಯಾಂಕ್ ಯಾದಗಿರಿ ವ್ಯವಸ್ಥಾಪಕ ಮಹ್ಮದ್ ರಫಿ, ಮೇಲ್ವಿಚಾರಕ ಶಿವರಾಜ ಪಾಟೀಲ್, ಕಾರ್ಯದರ್ಶಿಗಳಾದ ವಿಶ್ವನಾಥ, ರಾಘವೇಂದ್ರ, ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಂಜೀವಕುಮಾರ ಪುಟಗಿ ಸೇರಿದಂತೆ ಗ್ರಾಮದ ಜನರು ಉಪಸ್ಥಿತರಿದ್ದರು.

## ಕುಷ್ಟರೋಗದ ಬಗ್ಗೆ ಜನರಲ್ಲಿ ಪರಿಣಾಮಕಾರಿಯಾಗಿ ಜಾಗೃತಿ ಮೂಡಿಸುವುದು ಅಗತ್ಯ : ಅಂಕಲಗಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಜ.31: ಪ್ರಸಕ್ತ ದಿನಗಳಲ್ಲಿ ಸಮಾಜದಲ್ಲಿ ಜನರನ್ನು ಕಾಡುತ್ತಿರುವ ಕುಷ್ಟರೋಗದ ಬಗ್ಗೆ ಆರೋಗ್ಯ ಇಲಾಖೆ ಹಾಗೂ ಸಂಬಂಧಿಸಿದ ಇತರ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂಧಿಗಳು ಪರಿಣಾಮಕಾರಿಯಾಗಿ ಜನರಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ತಹಸೀಲ್ದಾರ ಸುರೇಶ ಅಂಕಲಗಿ ತಿಳಿಸಿದರು.

ನಗರದ ತಹಸೀಲ್ದಾರ ಕಛೇರಿಯಲ್ಲಿ ಜ. 30ರಿಂದ ಫೆ.13ರ ವರೆಗೆ ನಡೆಯುವ ರಾಷ್ಟ್ರೀಯ ಕುಷ್ಟರೋಗ ಅರಿವು ಆಂದೋಲನದ ಕಾರ್ಯಕ್ರಮದ ಪ್ರಯುಕ್ತ ಹಮ್ಮಿಕೊಂಡಿದ್ದ ತಾಲೂಕಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ, ಬಿತ್ತಿಪತ್ರಗಳನ್ನು ಬಿಡುಗಡೆ ಮಾಡಿ, ಮಾತನಾಡಿದ ಅವರು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಆರೋಗ್ಯ ಇಲಾಖೆಗೆ ಸಾಕಷ್ಟು ಅನುದಾನ ನೀಡುವ ಮೂಲಕ ಜನರನ್ನು ಕಾಡುತ್ತಿರುವ ಪ್ರಮುಖ ರೋಗಗಳನ್ನು ನಿಯಂತ್ರಿಸಲು ಶ್ರಮಿಸುತ್ತಿದೆ, ಜನರು ಕೂಡ ಅದರ ಲಾಭ ಪಡೆದು ಆರೋಗ್ಯದಿಂದ ಬಾಳಬೇಕು ಎಂದು ಹೇಳಿದರು.

ತಾಲ್ಲೂಕಾ ಆರೋಗ್ಯಾಧಿಕಾರಿ ಡಾ. ಹಣಮಂತರಡ್ಡಿ ಮದ್ನಿ ಮಾತನಾಡಿ, ಕುಷ್ಟರೋಗವು ಒಬ್ಬರಿಂದ–ಇನ್ನೋಬ್ಬರಿಗೆ ಹರಡುವ ಸಾಂಕ್ರಾಮಿಕ ರೋಗವಾಗಿದ್ದು, ಸೊಂಕಿತ ವ್ಯಕ್ತಿಗಳು ಕೆಮ್ಮಿದಾಗ–ಸೀನಿದಾಗ ಮೈಕ್ರೋ ಬ್ಯಾಕ್ಟರಿಯಂ ಲೆಪ್ರೆ ಎಂಬ ರೋಗಾಣು ಗಾಳಿ ಮುಖಾಂತರ ಸಮೀಪದಲ್ಲಿರುವ ವ್ಯಕ್ತಿಗೆ ಹರಡುತ್ತದೆ, ವ್ಯಕ್ತಿಯ ದೇಹದ ಮೇಲೆ ತಿಳಿ, ಬಿಳಿ ತಾಮ್ರವರ್ಣದ ಮಚ್ಚೆ, ಸ್ಪರ್ಶ ಜ್ಞಾನವಿಲ್ಲದಿರುವುದು ಕಂಡು ಬಂದಲ್ಲಿ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗಳಿಗೆ ಭೇಟಿ ನೀಡಿ, ಪರಿಕ್ಷೆ ಮಾಡಿಸಬೇಕು, ವೈದ್ಯರು ಕೂಡ ಉಚಿತವಾಗಿ ಈ ರೋಗಕ್ಕೆ ಚಿಕಿತ್ಸೆ ನೀಡುತ್ತಾರೆ, ರೋಗದ ನಿರ್ಮೂಲನೆಗೆ ಇತರ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಸಹಕಾರಿಸಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

CITATION
IN THE COURT OF THE PRI. CIVIL JUDGE AND JMFC AT HUMNABAD
CRL. MISC. NO.2338/2024

Petitioners:-
1) Anita W/o Veershetty Kandugol Age 38 Years Occu Household
2) Amba Bai W/o Mahadev Kandugul Age 65 Yrs Occu Household Both R/o Dhumansur Tq Humnabad Dist Bidar.
3) Sangeeta D/o Mahadev Kandugul W/o Sanju Kumar Age 44 Years Occu Household R/o Dhumansur Now at Sindhankera Tq Humnabad.
4) Rukmini D/o Mahadev Kandugul W/o Santosh Kumar Age 43 Years Occu Household R/o Dhumansur Now at Sriram Colony Balapur Mandal jalpally K.V. Rangareddy Hyderabad.
5) Ravi S/o Mahadev Kandugul Age 37 Yrs Occu Agriculture R/o Dhumansur Tq Humnabad Dist Bidar.
6) Soundarya D/o Veershetty Kandugol W/o Nagesh Age 24 Years Occu Household R/o Dhumansur Now at Chambool Tq & Dist Bidar.
7) Sanjana D/o Veershetty Kandugol Age 20 Years Occu Student R/o Dhumansur Tq Humnabad Dist Bidar.

Respondent:-
The Registrar of Birth and Death through The Tahasildar Humnabad.

Sub: Petition U/Sec 13(3) of Birth and Death Registration Act 1969

Whereas the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate Wife of Petitioner No.1 and mother of Petitioner No.2 and sisters of Petitioner No.3 & 4 and brother of petitioner No.5 and daughters of petitioner No.6 & 7 namely; Veershetty S/o Mahadev Kandugol who died on 26-10-2004 at Village Dhumansoor Tq Humnabad Dist Bidar. The petitioners claiming the death certificate of said Veershetty for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 05-03-2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 21-01-2025.

//By order of the court//
sd/
Chief Ministerial Officer,
Prl. Civil Judge and JMFC Court
Humnabad

# ಫೆ. 7, 8 ಮತ್ತು 9 ರಂದು ಮಕ್ಕಳ ಸರ್ವತೋಮುಖ ಬೆಳವಣಿಗೆಗಾಗಿ ಶೈಕ್ಷಣಿಕ ಪ್ರದರ್ಶನ: ಶರಣಪ್ಪ ಸಿಕೆನ್‌ಪುರೆ




ಮಲ್ಲಮ್ಮ ನುಡಿ ವಾರ್ತೆ ಬೀದರ.ಜ.31:ವಿದ್ಯಾರ್ಥಿಗಳ ಆಸಕ್ತಿ, ಅಭಿರುಚಿ ಮತ್ತು ಸ್ವತಂತ್ರ ವಿಚಾರಗಳನ್ನು ಅರಿತು ಅವರ ಭವಿಷ್ಯದ ಸದುಪಯೋಗಲಿ ಎನ್ನುವ ದೃಷ್ಟಿಕೋನದಿಂದ ಫೆ. 7, 8 ಮತ್ತು 9 ರಂದು ಬೆನಕನಳ್ಳಿ ರಸ್ತೆಯಲ್ಲಿರುವ ಗ್ಲೋಬಲ್ ಸೈನಿಕ ಅಕಾಡೆಮಿ ಶಾಲೆಯ ಆವರಣದಲ್ಲಿಶೈಕ್ಷಣಿಕಪ್ರದರ್ಶನ 2025 ಹಮ್ಮಿಕೊಳ್ಳಲಾಗಿದೆ ಎಂದು ದಿವ್ಯ ಸಂಕಲ್ಪ ಫೌಂಡೇಶನ್ ಅಡಿಯಲ್ಲಿನ ಗ್ಲೋಬಲ್ ಸೈನಿಕ ಅಕಾಡೆಮಿ ಅಧ್ಯಕ್ಷರಾದ ಕರ್ನಲ್ ಶರಣಪ್ಪ ಸಿಕೆನಪುರೆ ತಿಳಿಸಿದರು.

ಗ್ಲೋಬಲ್ ಸೈನಿಕ್ ಅಕಾಡೆಮಿ ಶಾಲಾ ಸಭಾಂಗಣದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಪ್ರತಿಯೊಬ್ಬರೂ ಸಾಂಪ್ರದಾಯಿಕವಾಗಿ ಶಾಲಾ ವಾರ್ಷಿಕೋತ್ಸವ ಆಚರಣೆ ಮಾಡುತ್ತಾರೆ. ಆದರೆ ನಾವು ಈ ಬಾರಿ ವಿಭಿನ್ನವಾಗಿ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗುವ ನಿಟ್ಟಿನಲ್ಲಿ ಪಾಲಕರ, ಶಿಕ್ಷಕರ ಮತ್ತು ಹಿತೈಷಿಗಳ ಸಹಭಾಗಿತ್ವದಲ್ಲಿ ಶೈಕ್ಷಣಿಕ ಪ್ರದರ್ಶನ ಏರ್ಪಡಿಸಿದ್ದೇವೆ. ಇದರಲ್ಲಿ ಮಕ್ಕಳು ತಮ್ಮ ಆಸಕ್ತಿ ಇರುವ ವಿಷಯದ ಮೇಲೆ ಮಾದರಿಗಳನ್ನು ತಯಾರಿ ಮಾಡಿಕೊಂಡು ಅದರ ವಿವರಣೆ ನೀಡುತ್ತಾರೆ. ಇದು ಮಕ್ಕಳ ಜ್ಞಾನಾರ್ಜನೆ, ಸ್ಮರಣೆ ಮತ್ತು ಪ್ರಾಯೋಗಿಕತೆಗೆ ಸ್ಫೂರ್ತಿ ನೀಡುತ್ತದೆ ಎಂದರು.

ನಮ್ಮಲ್ಲಿ ತರಬೇತಿ ಪಡೆದು ಇದುವರೆಗೆ 471 ಅಭ್ಯರ್ಥಿಗಳು ಭಾರತೀಯ ಸಶಸ್ತ್ರ ಪಡೆಗಳು ಮತ್ತು ಅರೆಸೈನಿಕ ಸೇವೆಗಳಿಗೆ ಆಯ್ಕೆಯಾಗಿದ್ದಾರೆ. ಹೀಗಾಗಿ ಈ ಬಾರಿ ಸಾಂಪ್ರದಾಯಿಕ ವಾರ್ಷಿಕೋತ್ಸವದ ಬದಲಾಗಿ ಶೈಕ್ಷಣಿಕಪ್ರದರ್ಶನ ನಡೆಸಲಾಗುತ್ತಿದೆ. ಇದರ ಮೂಲ ಉದ್ದೇಶ ವಿದ್ಯಾರ್ಥಿಗಳಿಗೆ ತಮ್ಮ ಕಲಿಕೆ ಮತ್ತು ಶೈಕ್ಷಣಿಕ ಸಾಧನೆಗಳನ್ನು ಪ್ರದರ್ಶಿಸಲು ಅವಕಾಶ ಒದಗಿಸುತ್ತದೆ. ಈ ಪ್ರದರ್ಶನವು ವಿಮರ್ಶಾತ್ಮಕ ಚಿಂತನೆ, ಸಂಶೋಧನೆ, ಮತ್ತು ಪ್ರಸ್ತುತಿ ಕೌಶಲ್ಯಗಳನ್ನು ಉತ್ತೇಜಿಸುತ್ತದೆ. ಪೋಷಕರಿಗೆ ಮತ್ತು ಸಹವರ್ತಿಗಳಿಗೆ ಮಕ್ಕಳ ಸೃಜನಶೀಲತೆ ಮತ್ತು ಪ್ರಯತ್ನಗಳನ್ನು ತೊಡಗಿಸಿಕೊಳ್ಳಲು ಮತ್ತು ಮೆಚ್ಚಿಸಲು ಅನುಮತಿಸುತ್ತದೆ. ಹೀಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಸಿಕೆನಪುರೆ ತಿಳಿಸಿದರು.

ಗ್ಲೋಬಲ್ ಸೈನಿಕ್ ಅಕಾಡೆಮಿ ಶಾಲೆಯ ಪ್ರಾಚಾರ್ಯರಾದ ಸಮೋದ್ ಮೋಹನನ್ ಅವರು ಮಾತನಾಡಿ ಈ ಶೈಕ್ಷಣಿಕ ಪ್ರದರ್ಶನದಲ್ಲಿ ಎಲ್ಲಾ ವಿಷಯಗಳು ಒಳಗೊಂಡಂತೆ ವಿವಿಧ ವಿಷಯಗಳ ಗುಂಪುಗಳನ್ನಾಗಿ ವಿಂಗಡಣೆ ಮಾಡಲಾಗಿದೆ. ತನಗೆ ಏನು ಬೇಕು? ತಾನು ಯಾವ ವಿಷಯದಲ್ಲಿ ಪರಿಪಕ್ವ ಆಗಿದ್ದೇನೆ ಎಂಬುದನ್ನು ಮಕ್ಕಳು ತನ್ನ ತಾ ಅರಿಯಲು ಇದು ಸಹಕಾರಿಯಾಗಿದೆ. ಮಕ್ಕಳಲ್ಲಿ ಆತ್ಮವಿಶ್ವಾಸ, ಜವಾಬ್ದಾರಿತನ ಮತ್ತು ಸಾಮರ್ಥ್ಯದ ಅರಿವು ಮೂಡಿಸುವುದರ ಜೊತೆಗೆ ಸಮಾಜ ಮತ್ತು ರಾಷ್ಟ್ರಕ್ಕೆ ವಿನೂತನ ಕೊಡುಗೆ ನೀಡಲು ನಮ್ಮ ಅಕಾಡೆಮಿ ಸಜ್ಜಾಗಿದೆ ಎಂದರು.

3 ರಿಂದ 5ನೇ ತರಗತಿಯ ಶೈಕ್ಷಣಿಕ ಪ್ರದರ್ಶನದ ಸಂಯೋಜಕಿ ಶಾಲು ಚೌಧರಿ ಮಾತನಾಡಿ ಮಕ್ಕಳು ವಿವಿಧ ಮಾದರಿಗಳನ್ನು ಸ್ವತಃ ತಾವೇ ತಯಾರಿಸುತ್ತಾರೆ. ಸ್ವತಃ ಅವರೇ ವಿವರಣೆ ನೀಡುತ್ತಾರೆ. ಇದ–ರಿಂದ ಅವರ ಭವಿಷ್ಯದಲ್ಲಿ ಸದುಪಯೋಗವಾಗುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿದ್ದೇವೆ ಎಂದು ತಿಳಿಸಿದರು. 6 ರಿಂದ 9ನೇ ತರಗತಿಯ ಶೈಕ್ಷಣಿಕ ಪ್ರದರ್ಶನದ ಸಂಯೋಜಕಿ ಅಮನ್‌ಪ್ರೀತ್ ಬೇದಿ ಮಾತನಾಡಿ ಫೆ. 3 ರಂದು ಶಿವನಗರ ಶಾಖೆಯಲ್ಲಿ ಎಲ್‌ಕೆಜಿ ಮತ್ತು ನರ್ಸರಿ ವಿದ್ಯಾರ್ಥಿಗಳು, ಫೆ. 5 ರಂದು ಕುಂಬಾರವಾಡಾ ಶಾಖೆಯ ಶಾಲೆಯಲ್ಲಿ ಶೈಕ್ಷಣಿಕ ಪ್ರದರ್ಶನ ನಡೆಯಲಿದೆ. ಫೆ. 7, 8 ಮತ್ತು 9 ರಂದು ಬೆನಕನಳ್ಳಿ ರಸ್ತೆಯಲ್ಲಿರುವ ಪ್ರಮುಖ ಶಾಖೆ–ಯ ಶಾಲೆಯಲ್ಲಿ ಜರುಗಲಿದೆ. ಶಿಕ್ಷಣ ಎಂದರೇನು? ಅದರ ಮಹತ್ವ ಏನು? ಎಂಬುದನ್ನು ಪಾಲಕರು ಅರಿಯಬೇಕು. ಒತ್ತಡದ ಬದುಕಿನಿಂದ ಹೊರತರಬೇಕು. ಈ ನಿಟ್ಟಿನಲ್ಲಿ ಶಿಕ್ಷಣದ ಜೊತೆಗೆ ಅದಕ್ಕೆ ಸಂಬಂಧಿಸಿದ ಶೈಕ್ಷಣಿಕ ಪ್ರದರ್ಶನ ಮಾಡಲಾಗುತ್ತಿದೆ. ಮಕ್ಕಳನ್ನು ಅಕಾಡೆಮಿ ವತಿಯಿಂದ ಶಾರಿರಿಕ, ಮಾನಸಿಕ, ಶೈಕ್ಷಣಿಕ ಹಾಗೂ ನೈತಿಕವಾಗಿ ಬೆಳೆಸಲಾಗುತ್ತಿದೆ ಎಂದರು.

ಶಾಲೆಯ ನಿರ್ದೇಶಕರಾದ ರಮೇಶ ಪಾಟೀಲ ಸೋಲಪುರ, ಹಾವಶೆಟ್ಟಿ ಪಾಟೀಲ ಸೇರಿದಂತೆ ಶಾಲಾ ಸಿಬ್ಬಂದಿಗಳಾದ ಕು. ಜ್ಯೋತಿ ರಾಗಾ, ಹರ್ಷವರ್ಧನ ಸ್ವಾಮಿ, ಶ್ರೀಮತಿ ಗೀತಾ ಉಪ್ಪಿನ್ ಸೇರಿದಂತೆ ಹಲವರಿದ್ದರು.

# ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಸೋಮನಾಥ್ ಪಾಟೀಲ್ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 31 : ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಸೋಮನಾಥ್ ಪಾಟೀಲ್ ಅವರು ಅವಿರೋಧವಾಗಿ ಪುನರ್ ಆಯ್ಕೆಯಾಗಿದ್ದಾರೆ.

ಇಂದು ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ನಡೆಯಿತು. ಜಿಲ್ಲಾ ಚುನಾವಣಾ ಅಧಿಕಾರಿಗಳಾಗಿ ಶಿವರಾಜ್ ಗಂದಿಗೆ ಅವರು ಭಾಗವಹಿಸಿ ಅಧ್ಯಕ್ಷರ ನಾಮಪತ್ರ ಸ್ವೀಕರಿಸಿದರು.

ನಂತರ ನೂತನ ಜಿಲ್ಲಾಧ್ಯಕ್ಷರಾಗಿ ಸೋಮನಾಥ ಪಾಟೀಲ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಘೋಷಣೆ ಮಾಡಿದರು.

ಈ ಸಂದರ್ಭದಲ್ಲಿ ಶಾಸಕರಾದ ಪ್ರಭು ಚೌವ್ಹಾಣ, ಶೈಲೇಂದ್ರ ಬೆಲ್ದಾಳೆ, ಈಶ್ವರ್ ಸಿಂಗ್ ಠಾ–ಕುರ್, ರಾಮಶೇಟ್ಟಿ ಪನಾಳೆ, ರಘುನಾಥ್ ಮಲ್ಕಾಪುರೆ ಹಾಗೂ ಬಾಬು ವಾಲಿ ಸೇರಿದಂತೆ ಅನೇಕ ಬಿಜೆಪಿ ಕಾರ್ಯಕರ್ತರು ಭಾಗವಹಿಸಿದ್ದರು.

## ತೆರೆದ ವಾಹನದಲ್ಲಿ ವಿದ್ಯಾರ್ಥಿ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರ ಮೆರವಣಿಗೆ

# ಜೈ ಬಾಪೂ, ಜೈ ಸಂವಿಧಾನ, ಜೈ ಭೀಮ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 31 : ರಾಷ್ಟ್ರೀಯ ವಿದ್ಯಾರ್ಥಿ ಕಾಂಗ್ರೆಸ್(ಎನಎಸಯುಐ) ವತಿಯಿಂದ ಮಹಾತ್ಮ ಗಾಂಧಿಜಿ ಹುತಾತ್ಮರಾದ ದಿನದ ಪ್ರಯುಕ್ತ ನಗರದ ಅಂಬೇಡ್ಕರ್ ವೃತ್ತದಲ್ಲಿ ಗುರುವಾರ ಜೈ ಬಾಪೂ, ಜೈ ಸಂವಿಧಾನ, ಜೈ ಭೀಮ ಕಾರ್ಯಕ್ರಮ ನಡೆಯಿತು.

ರಾಷ್ಟ್ರೀಯ ವಿದ್ಯಾರ್ಥಿ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ವರುಣ್ ಚೌಧರಿ ಮಾತನಾಡಿ, ಮಹಾತ್ಮಗಾಂಧಿಜಿ ಅವರನ್ನು ಹತ್ಯೆ ಮಾಡಿದ್ದೇ ರಾಷ್ಟ್ರೀಯ ಸ್ವಯಂ ಸೇವಕ ಸಂಘ. ಗಾಂಧಿಜಿ ಅವರ ವಿಚಾರಗಳನ್ನು ಹತ್ಯೆ ಮಾಡುವ ಕೆಲಸವೂ ಸಂಘ ಹಾಗೂ ಬಿಜೆಪಿಯಿಂದ ನಡೆಯುತ್ತಿದೆ ಎಂದು ಆರೋಪಿಸಿದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ನಿಷೇಧಿಸಬೇಕು. ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರನ್ನು ಬಂಧಿಸಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ಸರ್ಕಾರ ಮಹಾತ್ಮ ಗಾಂಧಿಜಿ ಅವರ ವಿಚಾರಗಳ ಮೇಲೆ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ನಿಷೇಧಕ್ಕೆ ಒತ್ತಾಯಿಸಿ ಇದೇ ವೇಳೆ ಬೀದರ್ ಉಪವಿಭಾಗಾಧಿಕಾರಿ ಮಹಮ್ಮದ್ ಶಕೀಲ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ವಿದ್ಯಾರ್ಥಿ ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯೂ ಆದ ಸಂಸದ ಸಾಗರ್ ಖಂಡ್ರೆ, ರಾಷ್ಟ್ರೀಯ ಸಂಯೋಜಕ ಮಹಮ್ಮದ್ ಫಿರೋಜ್ ಖಾನ್, ರಾಜ್ಯ ಘಟಕದ ಅಧ್ಯಕ್ಷ ಕೀರ್ತಿ ಗಣೇಶ್, ಬೀದರ್ ಜಿಲ್ಲಾ ಘಟಕದ ಅಧ್ಯಕ್ಷ ಸಚಿನ್ ಮಲ್ಕಾಪುರ, ಪಶು ವೈದ್ಯಕೀಯ ವಿಶ್ವವಿದ್ಯಾಲಯ ಘಟಕದ ಅಧ್ಯಕ್ಷ ಇಮ್ರಾನ್ ಖಾನ್, ಪಕ್ಷದ ಮುಖಂಡರು ಪಾಲ್ಗೊಂಡಿದ್ದರು.

ಇದಕ್ಕೂ ಮುನ್ನ ನಗರದ ನೂರ್ ಪದವಿಪೂರ್ವ ಕಾಲೇಜು ಬಳಿ ಫಿರೋಜ್ ಖಾನ್ ಅವರು ತಮ್ಮ ನೂರಾರು ಬೆಂಬಲಿಗರೊಂದಿಗೆ ವರುಣ್ ಚೌಧರಿ ಅವರನ್ನು ಸ್ವಾಗತಿಸಿ ಬರಮಾಡಿಕೊಂಡರು. ಅಲ್ಲಿಂದ ಅವರನ್ನು ತೆರೆದ ವಾಹನದಲ್ಲಿ ಬಸವೇಶ್ವರ ವೃತ್ತಕ್ಕೆ ಕರೆ ತರಲಾಯಿತು. ಬಸವೇಶ್ವರ ವೃತ್ತದಿಂದ ಮಹಾವೀರ ವೃತ್ತ, ಭಗತಸಿಂಗ್ ವೃತ್ತ, ಶಿವಾಜಿ ವೃತ್ತದ ಮಾರ್ಗವಾಗಿ ಅಂಬೇಡ್ಕರ್ ವೃತ್ತದವರೆಗೆ ಕೈಯಲ್ಲಿ ಮಹಾತ್ಮಗಾಂಧಿಜಿ, ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರ, ದೀವಟಿಗೆಯೊಂದಿಗೆ ಮೆರವಣಿಗೆ ಜರುಗಿತು.

# ರಸ್ತೆಯ ಮೇಲೆ ಅತಿ ಹೆಚ್ಚು ನಿಗಾವಹಿಸಿ ಚಾಲನೆ ಮಾಡಬೇಕು: ನ್ಯಾ. ಪ್ರಕಾಶ ಬನಸೋಡೆ




ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 31 : ಚಾಲಕರು ತಮ್ಮ ಕರ್ತವ್ಯ ತುಂಬ ಜವಬ್ದಾರಿಯಿಂದ ಎಚ್ಚರಿಕೆಯಿಂದ ನಿಭಾಯಸಬೇಕಾಗುತದೆ ಎಂದು ಹಿರಿಯ ಸಿವಿಲ್ ನ್ಯಾಯಧಿಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾದಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೊಡೆ ಹೇಳಿದ್ದರು

ಅವರು ಬೀದರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಹಾಗು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬೀದರ್ (ಘಟಕ1) ಸಹೋಯೊಗದಲಿ ರಾಷ್ತೀಯ ರಸ್ತೆ ಸುರಕ್ಷತಾ ಸಪ್ತಹ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮ ಉಧ್ಘಾಟಿಸಲಾಯಿತು

ಬಳಿಕ ಮಾತನಾಡುತ್ತ. ಬಸ್ಸು ಚಾಲನೆ ಮಾಡುವಾಗ ಪ್ರಯಾಣಿಕರ ಜೊತೆ ಮಾತನಾಡುವದು. ಮೊಬೈಲ ಫೋನ ಉಪಯೊಗಿಸಬಾರದು. ರಸ್ತೆಯ ಮೇಲೆ ಅತಿ ಹೆಚ್ಚು ನಿಗಾವಹಿಸಿ ಚಾಲನೆ ಮಾಡಬೆಕು. ಸಾರ್ವಜನಿಕರು ರಸ್ತೆ ಸಾರಿಗೆ ನಿಗಮದ ಮೇಲೆ ವಿಶ್ವಾಸ ವಿಟ್ಟು ದಿನ ನಿತ್ಯ ಸಂಚರಿಸುತ್ತಾರೆ ಅವರ ವಿಶ್ವಾಸ ಉಳಿಸಿಕೊಳ್ಳಬೇಕು ಮತ್ತು ನಿಗದಿತ ಸ್ಥಳದಲ್ಲಿ ನಿಲ್ಲಿಸಬೇಕು. ಚಾಲಕರು ಮನೆಯಿಂದ ಬರುವಾಗ ನಿಮ್ಮ ಕುಟುಂಬದ ಜೊತೆ ಯಾವುದೇ ತಕರಾರು ಕೋಪ್ಪ ಮಾಡಿಕೊಳ್ಳದೇ ಚಾಲನೆಗಾಗಿ ಬರಬೇಕು ಎಂದು ನುಡಿದರು

ಪ್ರಾದಶೀಕ ಸಾರಿಗೆ ಅಧಿಕಾರಿಗಳಾದ ಜಿ. ಕೆ. ಬೀರಾದರ ಅವರು ಮಾತನಾಡಿ. ಸಾವಿರಾರು ಕಿಲೋ ಮೀಟರ ಬಸ್ಸು ಸಂಚರಿಸ ಬೇಕಾದರೆ. ಅದರ ಹಿಂದೆ ಮೆಕ್ಯಾನಿಕರು ಕೂಡಾ 100% ಬಸ್ಸು ಯಾವುದೇ ದೋಷ ಇರದಂತೆ ನೋಡಿಕೊಳ್ಳಬೇಕು. ಬಸ್ಸಿನಲ್ಲಿನ ಪ್ರಯಾಣಿಕರು ಮತ್ತು ಅವರ ಅವಲಂಬಿತರು ಬಸ ಅಪಘಾತವಾದರೆ ತುಂಬಾ ತೊಂದರೆ ಅನುಭವಿಸುತ್ತಾರೆ. ಚಾಲಕರು ಕೂಡಾ ತೊಂದರೆ ಅನುಭವಿಸುತ್ತಾರೆ ಹಾಗಾಗಿ ಮಧ್ಯಪಾನ ಮಾಡಿ ವಾಹನ ಚಾಲನೆ ಮಾಡಬಾರದು. ಚಾಲಕರು ತಮ್ಮ ಆರೋಗ್ಯ ಕಡೆ ಗಮನ ಕೊಡಬೇಕು ಎಂದು ನುಡಿದರು

ಬೀದರ್ ವಿಭಾಗಿಯ ನಿಯಂತ್ರಣಾಧಿಕಾರಿ ಚಂದ್ರಕಾಂತ ಫುಲೇಕರ ಅವರು ಮಾತನಾಡಿ. ವಯಸ್ಸಾದವರು ಮಕ್ಕಳು ಕಾಲೇಜಿನ ವಿಧ್ಯಾರ್ಥಿಗಳು ಅಂಗವಿಕಲರು ಕುರಡರು ಹೆಣ್ಣುಮಕ್ಕಳು ಇವರುಗಳಿಗೆ ಚಾಲಕರು ನಿರ್ವಾಹಕರು ಇವರಿಗೆ ಸೌಜನ್ಯದಿಂದ ವರ್ತಿಸಿ ಅವರ ಸುಗಮ ಪ್ರಯಾಣಕ್ಕೆ ಅನುಕೂಲ ಮಾಡಿಕೊಡಬೇಕು. ಮತ್ತು ಅವರಿಗೆ ಬಸ್ಸಿನಲ್ಲಿ ಏರಲು ಇಳಿಯಲು ಸಹಾಯ ಮಾಡಬೇಕೆಂದು ನುಡಿದರು. ಮತ್ತು ರಸ್ತೆ ಮೇಲೆ ಬರುವ ಎಲ್ಲಾ ಸಂಚಾರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿದರೆ ಅಪಘಾತ ತಪ್ಪಸಲು ಸಾಧ್ಯವಾಗುತ್ತದೆ ಎಂದರು .

ಈ ಕಾರ್ಯಕ್ರಮದಲಿ ಅಪಘಾತ ರಹಿತ ಚಾಲಕರಿಗೆ ಸಾರಿಗೆ ಇಲಾಖೆ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು

ಈ ಕಾರ್ಯಕ್ರಮದಲ್ಲಿ ವೇದಿಕೆಯ ಮೇಲೆ ಹಿರಿಯ ಮೋಟಾರವಾಹನ ನಿರೀಕ್ಷಕರಾದ ಎಮ. ಎಸ. ಬೀರಾದರ. ಹಿರಿಯ ನ್ಯಾಯವಾದಿಗಳಾದ ಬಿ. ಎಸ. ಪಾಟೀಲ

ಮೋಟಾರ ವಾಹನ ತರಬೇತಿ ಶಾಲೆಯ ಸಂಘಟನಾ ಕಾರ್ಯದರ್ಶಿ ಶಿವರಾಜ ಜಮಾದರ ಖಾಜಾಪುರ. ಬೀದರ ಮೋಟಾರ ವಾಹನ ತರಬೇತಿ ಶಾಲೆಯ ಅಧ್ಯಕ್ಷರಾದ ಪ್ರಕಾಶ ಗುಮ್ಮೆ. ಸಾರಿಗೆ ನಿಗಮದ ಅಧಿಕಾರಿಗಳಾದ ಮಾಹಾದೇವಪ್ಪಾ ಉಪ್ಪಿನ. ಇಂದ್ರಶೇನ ಬೀರಾದರ. ಗೊವಿಂದ ಮೆಕಾಲೆ. ಶ್ರೀಕಾಂತ ಪತ್ತಾರ. ರಾಜಶೇಖರ ತಳಘಟಕರ. ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬೀದರ್‌ನ ಸಬ್ಬಂದಿ ಹಾಜರಿದ್ದರು

# ಶಾಲಾ ವಾರ್ಷಿಕೋತ್ಸವದಲ್ಲಿ ಮಕ್ಕಳ ಕಲರವ



ಬೀದರ. ಜ. 31 : ಇಲ್ಲಿಯ ಕುಂಬಾರವಾಡ ಕಮಾನ್ ಎದುರಿನ ಬಸವೇಶ್ವರ ಫಂಕ್ಷನ್ ಹಾ???ನಲ್ಲಿ ಗುರುವಾರ ನಡೆದ ಶ್ರೀ ಗುರು ಪಬ್ಲಿಕ್ ಸ್ಕೂಲ್ ವಾರ್ಷಿಕೋತ್ಸವದಲ್ಲಿ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ಸಭಿಕರ ಮೆಚ್ಚುಗೆ ಗಳಿಸಿತು.

ನರ್ಸರಿಯಿಂದ 2ನೇ ತರಗತಿ ವರೆಗಿನ ಮಕ್ಕಳು ಭರತನಾಟ್ಯ, ಪಂಜಾಬಿ ನೃತ್ಯ, ಜಾನಪದ ನೃತ್ಯ ಪ್ರದರ್ಶಿಸಿ ಗಮನ ಸೆಳೆದರು. ಭಾರತೀಯ ಸಂಸ್ಕೃತಿ ಕುರಿತ ಹಾಡು ಸುಮಧುರವಾಗಿ ಹಾಡಿದರು. ಶಿಕ್ಷಕ ಹಾಗೂ ವಿದ್ಯಾರ್ಥಿ ಕುರಿತು ನೃತ್ಯ ರೂಪಕವನ್ನೂ ಪ್ರದರ್ಶಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಮಾತೆ ಮಾಣಿಕೇಶ್ವರಿ ಪದವಿಪೂರ್ವ ಕಾಲೇಜು ಅಧ್ಯಕ್ಷ ರಮೇಶ ಕುಲಕರ್ಣಿ ಮಾತನಾಡಿ, ಮಕ್ಕಳಿಗೆ ಭಾರತೀಯ ಸಂಸ್ಕೃತಿ ಆಧಾರಿತ ಶಿಕ್ಷಣದ ಅವಶ್ಯಕತೆ ಇದೆ. ಶಿಕ್ಷಣದ ಜತೆಗೆ ಅವರಿಗೆ ಉತ್ತಮ ಸಂಸ್ಕಾರವನ್ನೂ ಹೇಳಿಕೊಡಬೇಕಿದೆ ಎಂದು ನುಡಿದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಅಧ್ಯಕ್ಷ ನರಸಾರೆಡ್ಡಿ ಮಾತನಾಡಿ, ಸಂಸ್ಕಾರಯುತ ಗುಣಮಟ್ಟದ ಶಿಕ್ಷಣದಿಂದಾಗಿ ಶಾಲೆ ಕಡಿಮೆ ಅವಧಿಯಲ್ಲೇ ವಿದ್ಯಾರ್ಥಿಗಳು ಹಾಗೂ ಪಾಲಕರ ವಿಶ್ವಾಸ ಗಳಿಸಿದೆ ಎಂದು ತಿಳಿಸಿದರು.

ರಾಜೀವ್ ಗಾಂಧಿ ಬಿ.ಎಡ್. ಕಾಲೇಜು ಅಧ್ಯಕ್ಷ ರೋಹಿದಾಸ್ ಘೋಡೆ, ದಿ. ಗಾಂಧಿಗಂಜ್ ಸಹಕಾರ ಬ್ಯಾಂಕ್ ನಿರ್ದೇಶಕಿ ಪ್ರವೀಣಾ ರಾಜೇಂದ್ರ ರೆಡ್ಡಿ ಶೇರಿಕಾರ್, ಪ್ರಧಾನ ಅಂಚೆ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಗಲಾ ಭಾಗವತ್ ಮಾತನಾಡಿದರು.

ವಿವಿಧ ಸ್ಪರ್ಧೆಗಳು, ವಸ್ತು ಪ್ರದರ್ಶನ, ಕಳೆದ ಸಾಲಿನಲ್ಲಿ ಶಾಲೆಗೆ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಗಳಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಜೀಜಾಮಾತಾ ಕನ್ಯಾ ಪ್ರೌಢಶಾಲೆಯ ಮುಖ್ಯಶಿಕ್ಷಕ ಪರಮೇಶ್ವರ ಬಿರಾದಾರ, ರಾಜೀವ್ ಗಾಂಧಿ ಬಿ.ಎಡ್. ಕಾಲೇಜು ಪ್ರಾಚಾರ್ಯ ಡಾ. ಕೆ. ಝರೆಪ್ಪ, ಅರುಣೋದಯ ಶಾಲೆಯ ಆಡಳಿತಾಧಿಕಾರಿ ಸಂತೋಷಕುಮಾರ ಮಂಗಳೂರೆ, ಉದ್ಯಮಿ ರಾಜೇಂದ್ರ ರೆಡ್ಡಿ ಶೇರಿಕಾರ್, ಸಂಜೀವರೆಡ್ಡಿ, ಶಾಲೆಯ ಖಜಾಂಚಿ ಮಹಾನಂದಾ ಮತ್ತಿತರರು ಇದ್ದರು.

# ಬೊಮ್ಮಗೊಂಡೇಶ್ವರ ಉತ್ಸವ: ಪೂರ್ವಭಾವಿ ಸಭೆ ನಾಳೆ



ಮಲ್ಲಮ್ಮ ನುಡಿ ವಾರ್ತೆ ಬೀದರ.ಜ.31: ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದಿಂದ ನಗರದ ಗಾಂಧಿಗಂ???ನ ಕನಕಭವನದಲ್ಲಿ ಫೆ. 2 ರಂದು ಬೆಳಿಗ್ಗೆ 11ಕ್ಕೆ ಮಹಾತ್ಮ ಬೊಮ್ಮಗೊಂಡೇಶ್ವರ ಉತ್ಸವದ ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಭೆಯಲ್ಲಿ ಬೊಮ್ಮಗೊಂಡೇಶ್ವರ ಉತ್ಸವದ ಅರ್ಥಪೂರ್ಣ ಆಯೋಜನೆ ಕುರಿತು ಚರ್ಚೆ ನಡೆಸಲಾಗುವುದು. ಉತ್ಸವದ ದಿನಾಂಕ ಪ್ರಕಟಿಸಲಾಗುವುದು ಎಂದು ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ಅಧ್ಯಕ್ಷ ಸಂತೋಷಕುಮಾರ ಜೋಳದಾಪಕೆ ತಿಳಿಸಿದ್ದಾರೆ.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಖಜಾಂಚಿಯಾಗಿ ಆಯ್ಕೆಯಾದ ದೇವಪ್ಪ ಎಂ. ಚಾಂಬೋಳೆ ಅವರನ್ನು ಅಭಿನಂದಿಸಲಾಗುವುದು ಎಂದು ಹೇಳಿದ್ದಾರೆ.

ಗೊಂಡ ಸಮಾಜದ ಮುಖಂಡರು, ಗೊಂಡ ಪರ ಸಂಘಟನೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಕಾರ್ಯಕರ್ತರು ಸಭೆಯಲ್ಲಿ ಪಾಲ್ಗೊಂಡು, ಉತ್ಸವದ ಯಶಸ್ವಿಗೆ ಸಲಹೆ ನೀಡಬೇಕು ಎಂದು ಮನವಿ ಮಾಡಿದ್ದಾರೆ.

# 'ಜೀವನ್ ಧಾರ ಯೋಜನೆ' ಪ್ರಾರಂಭಿಸಲು ಸಹಿ ಹಾಕಿದ ಟೊಯೋಟಾ ಕಿರ್ಲೋಸ್ಕರ್ ಮೋಟಾರ್

ಮಲ್ಲಮ ನುಡಿ ವಾರ್ತೆ

ಬೀದರ. ಜ. 31: ಸಮಾಜದ ಅಭಿವೃದ್ಧಿಗೆ ಶ್ರಮಿಸುತ್ತಿರುವ ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಸಂಸ್ಥೆಯು ಇದೀಗ ಬೀದರ್ ನ ಔರಾದ್ ತಾಲೂಕಿನ ರೈತರಿಗೆ ನೆರವಾಗಲು ಜೀವನ್ ಧಾರಾ ಯೋಜನೆಯನ್ನು ಆರಂಭಿಸಲು ವಾಟರ್ ಶೆಡ್ ಆರ್ಗನೈಸೇಷನ್ ಟ್ರಸ್ಟ್ (ಡಬ್ಲ್ಯೂಓಟಿಆರ್) ಜೊತೆಗೆ ತಿಳುವಳಿಕೆ ಒಪ್ಪಂದಕ್ಕೆ (ಎಂಓಯು) ಸಹಿ ಹಾಕಿದೆ.

ಬೀದರ್ ಜಿಲ್ಲೆಯ ಬರಪೀಡಿತ ಔರಾದ್ ತಾಲೂಕನ್ನು ಪುನರುಜ್ಜೀವನಗೊಳಿಸುವ ಗುರಿಯನ್ನು ಹೊಂದಿರುವ ಟಿಕೆಎಂನ ಮಹತ್ವದ ಯೋಜನೆ ಇದಾಗಿದ್ದು, ಸಾಮಾಜಿಕ-ಆರ್ಥಿಕ ಮತ್ತು ಪರಿಸರ ಸವಾಲುಗಳನ್ನು ಸೂಕ್ತ ರೀತಿಯಲ್ಲಿ ನಿಭಾಯಿಸುವ ಗುರಿಯನ್ನು ಈ ಯೋಜನೆ ಹೊಂದಿದೆ.




ಔರಾದ್ ತಾಲೂಕಿನಲ್ಲಿ ನಡೆದ ಔಪಚಾರಿಕ ಸಮಾರಂಭದಲ್ಲಿ ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ನ ಮುಖ್ಯ ಸಂವಹನ ಅಧಿಕಾರಿ, ಹಿರಿಯ ಉಪಾಧ್ಯಕ್ಷ ಮತ್ತು ರಾಜ್ಯ ವ್ಯವಹಾರಗಳ ಮುಖ್ಯಸ್ಥ ಸುದೀಪ್ ದಳವಿ ಮತ್ತು ಟಿಕೆಎಂ ಆಡಳಿತ ಮಂಡಳಿಯ ಪ್ರತಿನಿಧಿ ಜನರಲ್ ಮ್ಯಾನೇಜರ್ ರೋಶನ್ ಅವರು ತಿಳಿವಳಿಕೆ ಪತ್ರಕ್ಕೆ ಸಹಿ ಹಾಕಿದರು.

9 ಗ್ರಾಮಗಳು ಮತ್ತು 5,322.34 ಹೆಕ್ಟೇರ್ ಪ್ರದೇಶಗಳಿಗೆ ವ್ಯಾಪಿಸಿರುವ ಈ ಯೋಜನೆಯು 2,063 ಕುಟುಂಬಗಳ 11,026 ಸಮುದಾಯದ ಸದಸ್ಯರಿಗೆ ನೇರ ಪ್ರಯೋಜನ ಒದಗಿಸಲಿದ್ದು, ಈ ಪ್ರದೇಶದಲ್ಲಿನ ಸಾಮಾಜಿಕ-ಆರ್ಥಿಕ ಮತ್ತು ಪರಿಸರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲಿದೆ.

ಟೊಯೋಟಾ ಕಿರ್ಲೋಸ್ಕರ್ ಮೋಟಾರ್ನ ಹಿರಿಯ ಉಪಾಧ್ಯಕ್ಷ ಮತ್ತು ರಾಜ್ಯ ವ್ಯವಹಾರಗಳ ಮುಖ್ಯಸ್ಥ ಸುದೀಪ್ ದಳವಿ ಮಾತನಾಡಿ, 'ಸುಸ್ಥಿರ ಸಮಾಜಗಳ ನಿರ್ಮಾಣ' ಎಂಬ ನಮ್ಮ ಜಾಗತಿಕ ಫಿಲಾಸಫಿಗೆ ಅನುಗುಣವಾಗಿ ಸಮಾಜದಲ್ಲಿ ಸುಸ್ಥಿರ ಬದಲಾವಣೆಯನ್ನು ತರಲು ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಬದ್ಧವಾಗಿದೆ. ಎಲ್ಲರಿಗೂ ಉತ್ತಮವಾದ ಮತ್ತು ಒಳಗೊಳ್ಳುವಿಕೆಯ ಸಮಾಜ ನಿರ್ಮಾಣ ಮಾಡುವ ಈ ಪ್ರಯಾಣದ ಭಾಗವಾಗಿರಲು ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಹೆಮ್ಮೆ ಪಡುತ್ತದೆ ಎಂದು ಹೇಳಿದರು.

ಜೀವನ್ ಧಾರಾ ಯೋಜನೆಯು ಈ ಪ್ರದೇಶದ ಪರಿಸರ ವ್ಯವಸ್ಥೆಯನ್ನು ಪುನರುಜ್ಜೀವನಗೊಳಿಸುವ, ಕೃಷಿ ಕ್ಷೇತ್ರ ಸುಧಾರಿಸುವ ಮತ್ತು ಸ್ಥಳೀಯ ಜನರ ಜೀವನದ ಗುಣಮಟ್ಟವನ್ನು ಹೆಚ್ಚಿಸುವ ನಿರೀಕ್ಷೆಯನ್ನು ಹೊಂದಲಾಗಿದೆ.

## ಫೆ. 2 ರಂದು ಪದ್ಮಶಾಲಿ ಸಮಾಜದ ಬೃಹತ್ ಸಮಾವೇಶ: ಪಾಲ್ಗೊಳ್ಳಲು ಪುನೀತ್ ಸಾಳೆ ಕರೆ



ಮಲ್ಲಮನುಡಿವಾರ್ತೆ ಬೀದರ. ಜ. 31: ಪದ್ಮಶಾಲಿ ಸಮಾಜ ಸಮಿತಿ ಮತ್ತು ಚಾರಿಟೇಬಲ್ ಟ್ರಸ್ಟ್ ವತಿಯಿಂದ ನಗರದ ರಾಂಪೂರೆ ಕಾಲೋನಿಯಲ್ಲಿರುವ ಶ್ರೀಗುರುದತ್ತಧ್ಯಾನಮಂದಿರದಲ್ಲಿ ಪದ್ಮಶಾಲಿ ಸಮಾಜದ ಬೃಹತ್ ಸಮಾವೇಶ ಫೆ. 2 ರಂದು ಬೆ. 10 ಗಂಟೆಗೆ ಜರುಗಲಿದೆ. ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಟ್ರಸ್ಟ್ ನಿರ್ದೇಶಕ ಪುನೀತ್ ಸಾಳೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಸಮಾಜದ ಜಿಲ್ಲಾಧ್ಯಕ್ಷ ಮೋಹನ ಬಾಚಾ ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಪದ್ಮಶಾಲಿ ಸಮಾಜ ಸಮಿತಿ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ರಾಜಕುಮಾರ ಬಿಜ್ಜಾ ವಹಿಸಲಿದ್ದು, ಉದ್ಘಾಟನೆಯನ್ನು ಪದ್ಮಶಾಲಿ ಸಮಾಜ ಸಮಿತಿಯ ಗೌರವಾಧ್ಯಕ್ಷ ರಾಮಕೃಷ್ಣನ್ ಸಾಳೆ ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹೈದರಾಬಾದಿನ ಪದ್ಮಶಾಲಿ ಸಂಘದ ಅಧ್ಯಕ್ಷ ಕಂದಗಟ್ಲ ಸ್ವಾಮಿ, ಉ.ಕ. ಪ್ರಾಂತೀಯ ಪದ್ಮಶಾಲಿ ಸಮಾಜ ಸಂಘದ ಅಧ್ಯಕ್ಷ ಕಾಳಪ್ಪ ಕೊಂಗತಿ, ಅತಿಥಿಗಳಾಗಿ ಗಡ್ಡಮ್ ಜಗನ್ನಾಥಮ್, ರವೀಂದ್ರ ಡಿ. ಸಗ್ಗಂ, ರುಕ್ಮಿಣಿ ಗಣೇಶ, ಪ್ರದೀಪ್ ಸಂಗಾ, ವೀರಪ್ಪ ಜಟ್ಲಾ, ಗಡ್ಡಮ್ ಜನಾರ್ದನ, ಸೇರಿದಂತೆ ರಾಜ್ಯ ಹಾಗೂ ವಿವಿಧ ರಾಜ್ಯಗಳ ಸಮಾಜದ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ. ಟ್ರಸ್ಟ್ ಕಾರ್ಯದರ್ಶಿ ಕಿರಣಕುಮಾರ ದೋಮಲ್ ಪ್ರಾಸ್ತಾವಿಕವಾಗಿ ಮಾತನಾಡಲಿದ್ದಾರೆ. ಸಮಾಜದ ಬಂಧುಗಳ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ನಿರ್ದೇಶಕ ಪುನೀತ್ ಸಾಳೆ ತಿಳಿಸಿದ್ದಾರೆ.

## ಫೆ. 3 ಶಂಕರಲಿಂಗ ದೇವಸ್ಥಾನದ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.31- ನವನಗರದ 5ನೇ ಸೆಕ್ಟರ್‌ನಲ್ಲಿ ನೂತನವಾಗಿ ನಿರ್ಮಾಣವಾಗಿರುವ ಶಂಕರಲಿಂಗ ದೇವಸ್ಥಾನದ ಉದ್ಘಾಟನಾ ಸಮಾರಂಭ ಫೆ. 3 ಜರುಗಲಿದೆ.

ಸೋಮವಾರ ಬೆಳಿಗ್ಗೆ 10 ಗಂಟೆಗೆ ಶಂಕರಲಿಂಗ, ವೀರಭದ್ರೇಶ್ವರ, ದಾನಮ್ಮದೇವಿ ಮತ್ತು ಬಸವಣ್ಣ ದೇವರುಗಳ ಮೂರ್ತಿ ಪ್ರತಿಷ್ಠಾಪನೆ ನಡೆಯಲಿದ್ದು, ನಂತರ ನಡೆಯುವ ಸಮಾರಂಭದ ದಿವ್ಯಸಾನಿಧ್ಯವನ್ನು ಕಮತಗಿಯ ಹುಚ್ಚೇಶ್ವರ ಸಂಸ್ಥಾನಮಠದ ಪೂಜ್ಯ ಹೊಳೆ ಹುಚ್ಚೇಶ್ವರ ಮಹಾಸ್ವಾಮಿಗಳು ವಹಿಸುವರು. ಮೂರ್ತಿಗಳ ಪ್ರತಿಷ್ಠಾಪನೆ ಗುಳೇದಗುಡ್ಡ ಮರಡಿಮಠದ ಪೂಜ್ಯ ಅಭಿನವ ಕಾಡಸಿದ್ದೇಶ್ವರ ಮಹಾಸ್ವಾಮಿಗಳ ಅಮೃತ ಹಸ್ತದಿಂದ ನೆರವೇರಲಿದೆ.

ಫೆ.1 ಶನಿವಾರ ಬೆಳಿಗ್ಗೆ 8 ಗಂಟೆಗೆ ಮೂರ್ತಿಗಳ ಧಾನ್ಯವಾಸ, 2 ರವಿವಾರ ಪುಷ್ಪವಾಸ ಹಾಗೂ ವಸ್ತ್ರವಾಸ, 3 ಸೋಮವಾರ ಬೆಳಿಗ್ಗೆ 7 ಗಂಟೆಗೆ ದೇವರ ಮೂರ್ತಿಗಳ ಪ್ರಾಣಪ್ರತಿಷ್ಠಾಪನೆ ಹಾಗೂ ದೇವಸ್ಥಾನ ಕಳಸಾರೋಹಣ ನಡೆಯಲಿದೆ.

ಈ ಎಲ್ಲ ಕಾರ್ಯಕ್ರಮಗಳಿಗೆ ಬಣಗಾರ ಸಮಾಜ ಹಾಗೂ ಶಂಕರಲಿಂಗ ದೇವಸ್ಥಾನ ಕಮೀಟಿಯ ಭಾಂದವರು, ಸಮಾಜದ ಗುರು ಹಿರಿಯರು ಸಾರ್ವಜನಿಕರು ಆಗಮಿಸಿ ಯಶಸ್ವಿಗೊಳಿಸಬೇಕೆಂದು ದೇವಸ್ಥಾನ ಕಮೀಟಿಯ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವಮಾನವ ಸಂದೇಶ ಸಾರಿದ ಕುವೆಂಪು ಜಗದ ಕವಿ: ಅಶೋಕ ಸಜ್ಜನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.31:ಕುವೆಂಪು ಕನ್ನಡನಾಡು ಕಂಡ ಶ್ರೇಷ್ಠ ಬರಹಗಾರ. ತಮ್ಮ ಸಾಹಿತ್ಯದ ಮೂಲಕ ಕನ್ನಡಕ್ಕೆ ಅನೇಕ ಪ್ರಥಮ ಪ್ರಶಸ್ತಿ ಮತ್ತು ಪುರಸ್ಕಾರಗಳನ್ನು ತಂದುಕೊಟ್ಟವರು. ಅವರ ವಿಶ್ವಮಾನವ ಸಂದೇಶ ಕನ್ನಡ ಮಾತ್ರವಲ್ಲದೆ ದೇಶದ ಎಲ್ಲ ಭಾಷೆಗಳಿಗೆ ಮುಟ್ಟಿದೆ. ಹೀಗಾಗಿ ಕುವೆಂಪು ಜಗದಕವಿ ಎಂದು ಬಿ.ವಿ.ವಿ ಸಂಘದ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ) ಹೇಳಿದರು.

ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಜೀವರಸಾಯನಶಾಸ್ತ್ರ ವಿಭಾಗ, ಎನ್.ಎಸ್.ಎಸ್ ಘಟಕ ಮತ್ತು ಕನ್ನಡ ಬಳಗದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವಮಾನವ ದಿನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕುವೆಂಪು ಬದುಕು ಮತ್ತು ಬರಹ ಮಾದರಿಯಾಗಿದೆ. ತಮ್ಮ ಬರವಣಿಗೆ ಹಾಗೂ ವ್ಯಕ್ತಿತ್ವದಿಂದ ಕನ್ನಡ ಸಾಹಿತ್ಯದ ಮೇರು ಪರ್ವತವಾಗಿ ಅವರು ಬೆಳೆದು ನಿಂತರು ಎಂದರು.

ರಾಮಾಯಣ ದರ್ಶನಂ ಕೃತಿಯ ಮೂಲಕ ಕನ್ನಡಕ್ಕೆ ಪ್ರಥಮ ಜ್ಞಾನಪೀಠ ತಂದು-ಕೊಟ್ಟ ಹಿರಿಮೆ ಅವರದು. ಮಂತ್ರಮಾಂಗಲ್ಯದಂತಹ ಸರಳ ವಿವಾಹಪದ್ಧತಿಯನ್ನು ಪರಿಚಯಿಸಿದ ಕುವೆಂಪು ಬರೆದಂತೆ ಬದುಕಿದ ಮಹಾನ್ ಚೇತನ. ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಇಂತಹ ಕನ್ನಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಹೆಮ್ಮೆಯ ಸಂಗತಿ. ಮುಂದಿನ ದಿನಗಳಲ್ಲಿ ಇನ್ನಷ್ಟು ಕನ್ನಡ ಕಾರ್ಯಕ್ರಮಗಳು ಆಯೋಜನೆಗೊಳ್ಳಲಿ ಎಂದು ಸಜ್ಜನ ಹೇಳಿದರು.

ಪಶ್ಚಿಮ ಬಂಗಾಳ ಮೂಲದ ವಿದ್ಯಾರ್ಥಿನಿ ರಚಿಸಿದ ಕುವೆಂಪು ಭಾವಚಿತ್ರದ ಅನಾವರಣದೊಂದಿಗೆ ಕಾರ್ಯಕ್ರಮ ಆರಂಭಗೊಂಡಿತು. ಡಾ.ಸಂಗಮೇಶ ಕಾಶಿನಕುಂಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಲೇಜಿನ ಕನ್ನಡ ಬಳಗದ ಅಧ್ಯಕ್ಷ ಡಾ.ಸಿ.ಎಸ್.ಹಿರೇಮಠ ಕುವೆಂಪು ಅವರ ಮಲೆಗಳಲ್ಲಿ ಮದುಮಗಳು ಕಾದಂಬರಿಯ ವಿಶೇಷತೆಯನ್ನು ಹೇಳಿದರು. ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ಮತ್ತು ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ ಅತಿಥಿಗಳಾಗಿ ಉಪಸ್ಥಿತರಿದ್ದರು.

ವಿಶ್ವಮಾನವ ದಿನದ ನಿಮಿತ್ಯ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಡಾ.ನೀಲಾ ಮನ್ನಂಗಿ ಸ್ವಾಗತಿಸಿದರು. ಡಾ.ಮಹಾಂತೇಶ ಭೂತಾಳ ವಂದಿಸಿದರು. ಡಾ.ಕವಿತಾ ಹಿರೇಮಠ ನಿರೂಪಿಸಿದರು.

## ದ.ರಾ. ಬೇಂದ್ರೆಯವರ ಜನ್ಮ ದಿನಾಚರಣೆ



ಮಲ್ಲಮ ನುಡಿ ವಾರ್ತೆ

ಬೀದರ:ಜ.31: ನಗರದ ಬಿ.ವಿ. ಭೂಮರಡ್ಡ ಮಹಾವಿದ್ಯಾಲಯಲದಲ್ಲಿ ಕನ್ನಡ ವಿಭಾಗದಿಂದ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ದ.ರಾ. ಬೇಂದ್ರೇಯವರ ಜನ್ಮ ದಿನ ಆಚರಿಸಲಾಯಿತು, ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಬೇಂದ್ರೆಯವರ ಭಾವಚಿತ್ರಕ್ಕೆ ಪೂಜೆಸಲ್ಲಿಸುವುದರ ಮುಖಾಂತರ ಮಾತನಾಡುತ್ತಾ ಬೇಂದ್ರೆಯವರು ಕನ್ನಡ ಸಾಹಿತ್ಯದ ಮೇರು ವ್ಯಕ್ತಿತ್ವ ಅವರ ಸಾಹಿತ್ಯ ಶ್ರೀಮಂತಿಕೆ ಕನ್ನಡ ನಾಡಿನ ಹೆಮ್ಮೆ, ಕನ್ನಡ ಕಾವ್ಯಕ್ಕೊಂದು ಹೊಸ ಶೋಭೆ ತಂದುಕೊಟ್ಟ ಶಬ್ದಗಾರುಡಿಗ ಎಂದು ನುಡಿದರು.

ವಿಶೇಷ ಉಪನ್ಯಾಸ ನೀಡಿದ ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಅಂಬಿಕಾತನಯದತ್ತ ಕಾವ್ಯನಾಮದಿಂದ ಪ್ರಖ್ಯಾತರಾದ ಬೇಂದ್ರೇಯವರು ಕಾಲೇಜು ಹಂತದಲ್ಲಿಯೇ ಕವಿತೆಗಳನ್ನು ಬರೆಯುತ್ತಿದ್ದರು. ಅವರ ಸಾಹಿತ್ಯದಲ್ಲಿ ಉತ್ಸಾಹದ ಚಿಲುಮೆಯನುಕ್ಕಿಸಬಲ್ಲ, ನೊಂದಜೀವಕ್ಕೆ ಸಾಂತ್ವನ ನೀಡಬಲ್ಲ ಪ್ರೀತಿಪ್ರೇಮಗಳನ್ನು ಮೂಡಿಸಬಲ್ಲ ಕವಿತೆಗಳನ್ನು ರಚಿಸಿಕೊಟ್ಟ ಕನ್ನಡ ಸಾಹಿತ್ಯಕ್ಕೆ ವರವಾದ ವರಕವಿಯವರು ಸಾಹಿತಿ ಮಾತ್ರವಲ್ಲದೆ ಅಪ್ಪಟ ದೇಶಭಕ್ತರು ಅವರ ನರಬಲಿ ಕವನಸಂಕಲನದಿಂದ ಬ್ರಿಟಿಷ್‌ರ ಕೆಂಗಿಣ್ಣಿಗೆ ಗುರಿಯಾಗಿ ಸೆರೆಮನೆ ವಾಸುವು ಅನುಭವಿಸಿದರು ಎಂದು ನುಡಿದರು.

ಕನ್ನಡ ವಿಭಾಗದ ಮುಖ್ಯಸ್ಥೆಯಾದ ಶ್ರೀಮತಿ ರೇಣುಕಾದೇವಿ ಮಳ್ಳಿಸ್ವಾಮಿ ಪ್ರಾಸ್ತವಿಕವಾಗಿ ಮಾತನಾಡುತ್ತಾ ನಮ್ಮ ಹಿರಿಯ ಸಾಹಿತಿಗಳ ಸಾಹಿತ್ಯ ನಮಗೆ ಪ್ರತಿ ಹೆಜ್ಜೆಗೂ ಮಾದರಿ, ರಸಋಷಿ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಬೇಂದ್ರೆ ಅಜ್ಜನವರು ರಸವೇ ಜನನ, ವಿರಸವೇ ಮರಣ, ಸಮರಸವೇ ಜೀವನವೆಂದು ಜೀವನವನ್ನು ಪ್ರತಿಕ್ಷಣವು ಖುಷಿಯಿಂದ ಆಸ್ವಾದಿಸುವ ಪರಿಯನ್ನು ತಿಳಿಸಿದ ಅವರ ಸಾಹಿತ್ಯಕ್ಕೆ ಅವರೇ ಸಾಟಿ ಎಂದು ನುಡಿದರು.

ಕಾರ್ಯಕ್ರಮದ ಮೊದಲಿಗೆ ಪ್ರಾರ್ಥನೆಗೀತೆ ಕನ್ನಡ ವಿಭಾಗದ ಪ್ರಾಧ್ಯಾಪಕಿಯಾದ ಶ್ರೀಮತಿ ರತಿದೇವಿ ನಡೆಸಿಕೊಟ್ಟರೆ, ಕನ್ನಡ ವಿಭಾಗದ ಪ್ರಾಧ್ಯಾಪಕಿಯಾದ ಶ್ರೀಮತಿ ಕಾವೇರಿ ಖಂಡ್ರೆಯವರು ವಂದಿಸಿದರು ಡಾ.ಮಲ್ಲಿಕಾರ್ಜುನ ಕೋಟೆಯವರು ಸ್ವಾಗತಿಸಿದರು, ಕಛೇರಿಯ ಅಧೀಕ್ಷರಾದ ಶ್ರೀ ಸುಜೀತಕುಮಾರ ಬಿ. ಮಹಾವಿದ್ಯಾಲಯದ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಮೆಡಿಕಲ್ ಕಾಲೇಜ್ ವಿದ್ಯಾರ್ಥಿನಿಯ ಸಾಧನೆ ರಾಷ್ಟ್ರೀಯ ಯುವಜನೋತ್ಸವದಲ್ಲಿ ಪ್ರಬಂಧ ಮಂಡನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.31-ನಗರದ ಬಿ.ವಿ.ವಿ.ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಎಮ್.ಬಿ.ಬಿ.ಎಸ್ ಪ್ರಥಮ ವರ್ಷದ ವಿದ್ಯಾರ್ಥಿನಿ ಸಿಂಚನಾ ಕಟಗಿ ರಾಷ್ಟ್ರೀಯ ಯುವಜನೋತ್ಸವದಲ್ಲಿ ಪ್ರಬಂಧ ಮಂಡಿಸಿ ಸಾಧನೆ ಮಾಡಿದ್ದಾರೆ.

ಜನೆವರಿ ತಿಂಗಳಲ್ಲಿ ನವದೆಹಲಿಯಲ್ಲಿ ವಿಕಸಿತ ಭಾರತದಡಿ ಆಯೋಜಿಸಿದ್ದ 2025 ನೇ ಸಾಲಿನ ರಾಷ್ಟ್ರೀಯ ಯುವಜನೋತ್ಸವದಲ್ಲಿ ಸಿಂಚನಾ ವೈದ್ಯಕೀಯ ವಿಷಯಾಧಾರಿತ ಪ್ರಬಂಧ ಮಂಡಿಸಿ ಕಾಲೇಜಿನ ಹಿರಿಮೆಯನ್ನು ಹೆಚ್ಚಿಸಿದ್ದಾರೆ.

ಪ್ರತಿವರ್ಷ ದೇಶದ ವಿವಿಧ ರಾಜ್ಯಗಳಿಂದ ಯುವ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ರಾಷ್ಟ್ರೀಯ ಯುವಜನೋತ್ಸವದಲ್ಲಿ ವಿವಿಧ ವಿಷಯಗಳ ಪ್ರಬಂಧ ಮಂಡನೆಗೆ ಅವಕಾಶ ನೀಡಲಾಗುತ್ತದೆ. ಇದಕ್ಕೆ ಪೂರ್ವಭಾವಿಯಾಗಿ ರಾಜ್ಯಮಟ್ಟದಲ್ಲಿ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸ್ವಯಂ ಸೇವಾ ಘಟಕ ಹಾಗೂ ಯುವ ಸಬಲೀಕರಣ ಇಲಾಖೆ ಇವುಗಳ ಸಹಯೋಗದಲ್ಲಿ ವಿದ್ಯಾರ್ಥಿಗಳನ್ನು ರಾಷ್ಟ್ರೀಯ ಯುವಜನೋತ್ಸವದಲ್ಲಿ ಪ್ರಬಂಧ ಮಂಡಿಸಲು ಕರ್ನಾಟಕದಿಂದ ಒಟ್ಟು 45 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿತ್ತು.

ಈ ಆಯ್ಕೆಯ ಸಂದರ್ಭ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹವಿದ್ಯಾಲಯದ ವಿದ್ಯಾರ್ಥಿನಿ ಸಿಂಚನಾ ಕಟಗಿ 'ಪರಿಸರದ ಸ್ಥಿರತೆ' ಕುರಿತು ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರೀಯ ಯುವಜನೋತ್ಸವದಲ್ಲಿ ಪಾಲ್ಗೊಳ್ಳಲು ಅರ್ಹತೆ ಪಡೆದರು. ನವದೆಹಲಿಯಲ್ಲಿ ಆಯೋಜಿಸಿದ್ದ ಯುವಜನೋತ್ಸವದಲ್ಲಿ ವಿದ್ಯಾರ್ಥಿನಿ ಮಂಡಿಸಿದ 'ವಿಕಸಿತ ಭಾರತಕ್ಕಾಗಿ ವೈದ್ಯಕೀಯದಲ್ಲಿ ಸುಸ್ಥಿರತೆ' ಪ್ರಬಂಧ ಕುರಿತು ತೀರ್ಪುಗಾರರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ರಾಜ್ಯಮಟ್ಟದಲ್ಲಿ ಪ್ರಥಮ ಬಹುಮಾನ ಮತ್ತು ರಾಷ್ಟ್ರಮಟ್ಟದಲ್ಲಿ ಮೆಚ್ಚುಗೆ ಪಡೆದ ವಿದ್ಯಾರ್ಥಿನಿ ಸಿಂಚನಾ ಕಟಗಿ ಅವರನ್ನು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ ಹಾಗೂ ಎಲ್ಲ ವಿಭಾಗಗಳ ವೈದ್ಯರು ಮತ್ತು ಸಿಬ್ಬಂದಿ ಅಭಿನಂದಿಸಿದ್ದಾರೆ.

## ಫೆ.2 'ಹವೇಲಿ ದೊರೆಸಾನಿ' ಕಥಾ ಸಂಕಲನ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.31-ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಕೃಷ್ಣರಾಜ ಪರಿಷನ್ಮಂದಿರದಲ್ಲಿ ಫೆ.2 ರವಿವಾರ ಮುಂಜಾನೆ 10:30 ಗಂಟೆಗೆ ಬಾಗಲಕೊಟೆ ಜಿಲ್ಲೆಯ ಯಂಡಿಗೇರಿಯ ತ್ರಿವೇಣಿ ಶೆಲ್ಲಿಕೇರಿ ಪ್ರತಿಷ್ಠಾನ, ಅಮೂಲ್ಯ ಪ್ರಕಾಶನ ಬೆಂಗಳೂರು ಮತ್ತು ಓದು ಗೆಳೆಯರ ಬಳಗ ಬಾಗಲಕೋಟೆ ಇವರ ಸಹಯೋಗದಲ್ಲಿ ಕತೆಗಾರ ಮಲ್ಲಿಕಾರ್ಜುನ ಶೆಲ್ಲಿಕೇರಿ ಅವರ 'ಹವೇಲಿ ದೊರೆಸಾನಿ' ಕಥಾ ಸಂಕಲನ ಲೋಕಾರ್ಪಣೆ ಕಾರ್ಯಕ್ರಮ ನಡೆಯಲಿದೆ.

ತ್ರಿವೇಣಿ ಶೆಲ್ಲಿಕೇರಿ ಪ್ರತಿಷ್ಠಾನದ ಅಧ್ಯಕ್ಷ ಮಲ್ಲಿಕಾರ್ಜುನ ಶೆಲ್ಲಿಕೇರಿ ಪತ್ರಿಕಾ ಪ್ರಕಟನೆಯಲ್ಲಿ ಈ ವಿಷಯ ತಿಳಿಸಿದ್ದು, ಕಾರ್ಯಕ್ರಮದಲ್ಲಿ ಖ್ಯಾತ ಬರಹಗಾರರು ಮತ್ತು ಚಿಂತಕರಾದ ಪ್ರೊ.ಬರಗೂರು ರಾಮಚಂದ್ರಪ್ಪ ಅವರು 'ಹವೇಲಿ ದೊರೆಸಾನಿ' ಕಥಾ ಸಂಕಲನ ಲೋಕಾರ್ಪಣೆ ಮಾಡುವರು.

ಖ್ಯಾತ ಕತೆಗಾರ ಎಸ್.ದಿವಾಕರ್ ಅಧ್ಯಕ್ಷತೆ ವಹಿಸುವರು. ಖ್ಯಾತ ಲೇಖಕರು, ಪತ್ರಕರ್ತರಾದ ರಘುನಾಥ ಚ.ಹ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕವಿಯತ್ರಿ ಶ್ರುತಿ ಬಿ.ಆರ್ ಕೃತಿ ಪರಿಚಯ ಮಾಡುವರು ಎಂದು ಶೆಲ್ಲಿಕೇರಿ ತಿಳಿಸಿದ್ದಾರೆ.

## ಬೆನಕಟ್ಟಿ ಗ್ರಾಪಂಗೆ ಪಾರ್ವತೆವ್ವ ಅಧ್ಯಕ್ಷೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.31- ತಾಲೂಕಿನ ಬೆನಕಟ್ಟಿ ಗ್ರಾಮ ಪಂಚಾಯತಿಯ ಎರಡನೇ ಅವಧಿಗೆ ಅಧ್ಯಕ್ಷರಾಗಿ ಪಾರ್ವತೆವ್ವ ಮರಗಪ್ಪ ಮಾದರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಹಾಲಿ ಅಧ್ಯಕ್ಷೆ ಬಾಲವ್ವ ಮಾದರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ (ಅನುಸೂಚಿತ ಜಾತಿ ಮೀಸಲಾತಿ) ಸ್ಥಾನಕ್ಕೆ ಈಚೆಗೆ ನಡೆದ ಚುನಾವಣೆಗೆ ಮನ್ನಿಕಟ್ಟಿ ಗ್ರಾಮದ ಪಾರ್ವತೆವ್ವ ಮಾದರ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದಾಗಿ ಅವರೇ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿ ಸುಭಾಸ ಸಂಪಗಾವಿ ತಿಳಿಸಿದ್ದಾರೆ. ಮನ್ನಿಕಟ್ಟಿ, ಬೆನಕಟ್ಟಿ ಹಾಗೂ ಇಂಗಳಗಿ ಗ್ರಾಮಗಳನ್ನೊಳಗೊಂಡಿರುವ ಬೆನಕಟ್ಟಿ ಗ್ರಾಮಪಂಚಾಯತಿಯ ನೂತನ ಅಧ್ಯಕ್ಷರ ಆಯ್ಕೆ ಸಭೆಯಲ್ಲಿ ಉಪಾಧ್ಯಕ್ಷ ವೆಂಕಟೇಶ ದಾಸಪ್ಪನವರ, ವೇಮರಡ್ಡಿ ಯಡಹಳ್ಳಿ, ರೇಣುಕಾ ಪಾದನಕಟ್ಟಿ, ವಿನೋದ ನಾಯಕ, ಬಾಲವ್ವ ಮಾದರ, ರೇಣವ್ವ ಆಲೂರ, ಲಕ್ಷ್ಮವ್ವ ಗೊರಜನಾಳ, ಯಲ್ಲಪ್ಪ ಚಲವಾದಿ, ಫಾತಿಮಾ ನದಾಫ, ಗುರುನಾಥ ತುಗಲಗಟ್ಟಿ, ಹನಮಂತ ಪಲ್ಲೇದ, ಮಲ್ಲಮ್ಮ ಜುಮನಾಳ, ಮುತ್ತಪ್ಪ ಹುಣಸೀಕಟ್ಟಿ ಪಾಲ್ಗೊಂಡಿದ್ದರು ಎಂದು ಪಿಡಿಓ ಜ್ಯೋತಿ ಪಾಟೀಲ ತಿಳಿಸಿದ್ದಾರೆ.

## ಕಿತ್ತೂರ ರಾಣಿ ಚೆನ್ನಮ್ಮ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಮಲ್ಲಮ ನುಡಿ ವಾರ್ತೆ

ಬೀದರ. ಜ.31: ಜಿಲ್ಲೆಯಲ್ಲಿ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅರ್ಹ ಸಂಸ್ಥೆಗಳಿಗೆ ಹಾಗೂ ವ್ಯಕ್ತಿಗಳನ್ನೊಳಗೊಂಡಂತೆ, ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರು ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವನಾಪಾಯದಿಂದ ಪಾರು ಮಾಡಿದಂತಹ ಮಹಿಳೆಯರನ್ನು ಗುರುತಿಸಿ, ಅವರಿಗೆ ಕಿತ್ತೂರ ರಾಣಿ ಚೆನ್ನಮ್ಮ ರಾಜ್ಯ ಮಟ್ಟದ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. 2024-25ನೇ ಸಾಲಿನ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಪ್ರತಿ ವರ್ಷವು ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಯಲ್ಲಿ ಪ್ರತಿಬಿಂಬಿಸಲು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಅವರ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ದಿನದಂದು ಇಲಾಖೆಯ ವತಿಯಿಂದ ಕಿತ್ತೂರ ರಾಣಿ ಚೆನ್ನಮ್ಮ ಇವರ ಹೆಸರಿನಲ್ಲಿ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗಿರುತ್ತದೆ. ಅರ್ಹರು ದಿನಾಂಕ:01-02-2025 ರಿಂದ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮೈಲೂರ ಬೀದರದಿಂದ ಅರ್ಜಿಯನ್ನು ಪಡೆದು ಭರ್ತಿ ಮಾಡಿ ಎಲ್ಲಾ ದಾಖಲಾತಿಗಳನ್ನು ದೃಢೀಕರಿಸಿ ದ್ವಿ-ಪ್ರತಿಯಲ್ಲಿ ದಿನಾಂಕ:15-02-2025 ರ ಸಾಯಂಕಾಲ 5-30 ಗಂಟೆಯೊಳಗಾಗಿ ಸಲ್ಲಿಸಲು ಸೂಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಮಕ್ಕಳ ರಕ್ಷಣಾ ಕಾಯ್ದೆ ಸಮರ್ಪಕ ಅನುಷ್ಠಾನಕ್ಕೆ ರಾಮತ್ನಾಳ ಕರೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.31– ಜಿಲ್ಲೆಯ ಪ್ರತಿಯೊಂದು ಶಾಲೆಗಳಲ್ಲಿ ಮಕ್ಕಳ ರಕ್ಷಣಾ ಕಾಯ್ದೆಯನ್ನುಸಮರ್ಪಕವಾಗಿ ಅನುಷ್ಠಾನಗೊಳಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಗೂ ಶಿಕ್ಷಕರಿಗೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಕರೆ ನೀಡಿದರು.

ಜಿಲ್ಲಾಡಳಿತ ಭವನದಲ್ಲಿರುವ ಆಡಿಟೋರಿಯಂ ಹಾಲ್‌ನಲ್ಲಿ ಶುಕ್ರವಾರ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ಆಯೋಗ,ಜಿಲ್ಲಾಡಳಿತ,ಜಿ.ಪಂ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಸಹಯೋಗದಲ್ಲಿ ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ ಕುರಿತು ಒಂದು ದಿನದ ಕಾರ್ಯಾಗಾರವನ್ನುಉದ್ಘಾಟಿಸಿ ಅವರು ಮಾತನಾಡಿದರು.

ಶಾಲೆಗಳಲ್ಲಿ ಶಿಕ್ಷಣದ ಜೊತೆಗೆ ಮಕ್ಕಳ ರಕ್ಷಣೆ ಕೂಡಾ ಕಡ್ಡಾಯವಾಗಬೇಕಿದೆ. ಈ ನಿಟ್ಟಿನಲ್ಲಿ ಶಿಕ್ಷಕರು ಸೇರಿದಂತೆ ಅಧಿಕಾರಿಗಳು ತಮ್ಮ ಕರ್ತವ್ಯವನ್ನುಜವಾಬ್ದಾರಿಯಿಂದ ನಿರ್ವಹಿಸಬೇಕು. ಶಾಲೆಯಿಂದ ಅಂದರೆ ಶಿಕ್ಷಣದಿಂದ ಮಕ್ಕಳು ಹೊರಗೆ ಉಳಿದಲ್ಲಿ ಮಾತ್ರ ಅಂತಹ ಮಕ್ಕಳ ಮೇಲೆ ದೌರ್ಜನ್ಯಗಳು ಹೆಚ್ಚಾಗಿ ಕಂಡುಬರುತ್ತಿವೆ. ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವ ಕೆಲಸವಾಗಬೇಕು. ಅಲ್ಲದೇ ಅಂತಹ ಮಕ್ಕಳ ಅಂಕಿ ಅಂಶಗಳ ಮಾಹಿತಿ ಸಹ ಸರಿಯಾಗಿ ದೊರೆಯುತ್ತಿಲ್ಲ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಅವರ ರಕ್ಷಣೆ ಸಹ



ಮುಖ್ಯವಾಗಿದೆ ಎಂದು ತಿಳಿಸಿದರು.

ಈಗಾಗಲೇ ಕೆಲವೊಂದು ಶಾಲೆಗಳಿಗೆ ಭೇಟಿ ನೀಡಲಾಗಿದ್ದು,ಮಕ್ಕಳ ಹಕ್ಕುಗಳ ಕಾಯ್ದೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳದಿರುವುದು ಕಂಡು ಬಂದಿದೆ ಎಂದು ಕಳವಳ ವ್ಯಕ್ತಪಡಿಸಿದ ರಾಮತ್ನಾಳ, ಮುಂದಿನ 15 ದಿನಗಳಲ್ಲಿ ಪ್ರತಿಯೊಬ್ಬರೂ ಮಕ್ಕಳ ರಕ್ಷಣಾ ಕಾಯ್ದೆ ಸಮರ್ಪಕವಾಗಿ ಅನುಷ್ಠಾನಗೊಳಿಸುವಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳಿಂದ ಹಿಡಿದು ಶಿಕ್ಷಕರ ವರೆಗೆ ಕೆಲಸ ಮಾಡಬೇಕು. ನಂತರದಲ್ಲಿ ಕಾಯ್ದೆ ಅನುಷ್ಠಾನದ ಬಗ್ಗೆ ಪ್ರಗತಿ ಪರಿಶೀಲನೆ ಸಹ ನಡೆಸಲಾಗುವುದೆಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ಜಿದ್ದಿ ಮಾತನಾಡಿ, ಜಿಲ್ಲೆಯಲ್ಲಿರುವ ಪ್ರತಿಯೊಂದು ಶಾಲೆಗಳಲ್ಲಿ ಮಕ್ಕಳ ರಕ್ಷಣಾ ಕಾಯೆಜಾರಿಯಾಗಬೇಕು.ಶಾಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅದು ಕಂಡುಬಂದಿಲ್ಲ. ಮಕ್ಕಳಿಗೆ ಶಿಕ್ಷಣ ನೀಡುವದರ ಜೊತೆಗೆ ಅವರ ರಕ್ಷಣೆ ಸಹ ಮುಖ್ಯವಾಗಿದೆ. ಈ ಬಗ್ಗೆ ಶಿಕ್ಷಕರು ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯವಿದೆ. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಕರೆತಂದು ಮಕ್ಕಳ ಹಕ್ಕುಗಳ ಮೇಲಾಗುವ ಪರಿಣಾಮವನ್ನು ತಡೆಯಲು ಸಾಧ್ಯವಾಗುತ್ತದೆ ಎಂದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ ಮಾತನಾಡಿ, ಇಂದಿನ ಆಧುನಿಕತೆ ಭರಾಟೆಯಲ್ಲಿ ಸಾಮಾಜಿಕ ಜಾಲತಾಣ ಸಾಕಷ್ಟು ಪರಿಣಾಮ ಬೀರುತ್ತಿದೆ. ಸಣ್ಣ ಮಕ್ಕಳಿಂದ ಹಿಡಿದು ವಯೋವೃದ್ಧರ ವರೆಗೆ ಪ್ರತಿಯೊಬ್ಬರು ಮೊಬೈಲ್ ಬಳಕೆ ಮಾಡುತ್ತಿದ್ದಾರೆ. ಮಕ್ಕಳ ಹಕ್ಕುಗಳಿಗೆ ತೊಂದರೆಯಾದಲ್ಲಿ ಮಕ್ಕಳ ಸಹಾಯವಾಣಿಯ ಜೊತೆಗೆ 112ಗೂ ಸಹ ಕರೆ ಮಾಡಬಹುದಾಗಿದೆ ಎಂದು ತಿಳಿಸಿದರು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ವಿವೇಕಾನಂದ ಎಂ, ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ. ಮಾತನಾಡಿದರು. ಕೊಪ್ಪಳದ ಯುನಿಸೆಫ್‌ನ ರಾಘವೇಂದ್ರ ಭಟ್ ಅವರು ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ, ಮಿಷನ್ ವಾತ್ಸಲ್ಯ, ಪೋಕ್ಸೋ ಕಾಯ್ದೆ–2012, ಬಾಲ್ಯವಿವಾಹ ನಿಷೇಧ ಕಾಯ್ದೆ–2006 ಬಗ್ಗೆ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಹನಮಂತಗೌಡ ಪಾಟೀಲ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ ಎಂ, ಜಿಲ್ಲಾ ವಾರ್ತಾಧಿಕಾರಿ ಕಸ್ತೂರಿ ಪಾಟೀಲ ಸೇರಿದಂತೆ ಜಿಲ್ಲೆಯ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಇಸಿಓ, ಬಿಆರ್‌ಸಿ, ಬಿಆರ್‌ಪಿ, ಸಿಆರ್‌ಪಿ, ಡೈಟ್ ಪ್ರಾಚಾರ್ಯರು ಮತ್ತು ಉಪನ್ಯಾಸಕರು ಪಾಲ್ಗೊಂಡಿದ್ದರು.

## ಎಂಎ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳ ಸಾಧನೆ









ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.31–ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್. ನರಸಾಪೂರ ಕಲಾ ಮತ್ತು ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಇತಿಹಾಸ ಹಾಗೂ ಪ್ರಾಚ್ಯಶಾಸ್ತ್ರ ಸ್ನಾತಕೋತ್ತರ ಅಧ್ಯಯನ ವಿಭಾಗದ ವಿದ್ಯಾರ್ಥಿಗಳು ಜಮಖಂಡಿಯ ಬಾಗಲಕೋಟ ವಿಶ್ವವಿದ್ಯಾಲಯವು ಕಳೆದ ಸೆಪ್ಟಂಬರ್–ಅಕ್ಟೋಬರ್‌ನಲ್ಲಿ ನಡೆಸಿದ ಎಂಎ ಎರಡನೇ ಸೆಮೆಸ್ಟರ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ತಿಳಿಸಿದ್ದಾರೆ.

ಪರೀಕ್ಷೆಗೆ ಹಾಜರಾದ ಎಲ್ಲ 19 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, 15 ವಿದ್ಯಾರ್ಥಿಗಳು ಡಿಸ್ಟಿಂಗಶನ್‌ದಲ್ಲಿ ಹಾಗೂ 4 ವಿದ್ಯಾರ್ಥಿಗಳು ಪ್ರಥಮ ವರ್ಗದಲ್ಲಿ ತೇರ್ಗಡೆಯಾಗಿದ್ದಾರೆ. ಶ್ರುತಿ ನಾಯಕ (ಶೇ.75) ಪ್ರಥಮ, ಸಯ್ಯದಾ ಇಪ್ತೆಸಾಮ ಖಾಜಿ(ಶೇ.73.5)ದ್ವಿತೀಯ, ಕಾವೇರಿ ಬಡಿಗೇರ ಹಾಗೂ ಸೋನಿಯಾಪತಂಗೆ(ಶೇ.72.66) ತೃತೀಯ ಸ್ಥಾನ ಪಡೆದಿದ್ದಾರೆ.

ಸಂಸ್ಥೆಯ ಕಾರ್ಯಾಧ್ಯಕ್ಷೆ ಶ್ರೀಮತಿ ಶ್ರೀಲತಾ ಹೆರಂಜಲ್, ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ, ಕಾಲೇಜು ಉಪವಿಭಾಗ ಅಧ್ಯಕ್ಷ ಡಾ.ಪಿ.ಆರ್.ಜೋಶಿ ಹಾಗೂ ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ ಸಾಧಕ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

## ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನಕ್ಕೆ ಚಾಲನೆ

ಕಲಬುರಗಿ,ಜ.31:2024–25 ಸಾಲಿಗೆ ಜನವರಿ 30 ರಿಂದ ಫೆಬ್ರವರಿ 13 ರವರೆಗೆ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನದ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ ಅವರು ಬುಧವಾರ ಕಲಬುರಗಿ ನಗರದ ಮಹಾತ್ಮಾ ಗಾಂಧಿ ಕುಷ್ಠರೋಗ ಕಾಲೋನಿಯಲ್ಲಿ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿದರು.

ಕುಷ್ಠರೋಗಿಗಳಿಗೆ ಹಣ್ಣು, ಊಟ, ಮತ್ತು ಶಾಲು, ಔಷಧೋಪಚಾರ, ಎಂ.ಸಿ.ಆರ್. ಪಾದರಕ್ಷೆಗಳು ಮತ್ತು ಸೆಲ್ಫ್ ಕೇರ್ ಕಿಟ್‌ಗಳನ್ನು ವಿತರಿಸುವ ಮೂಲಕ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಆಚರಿಸಲಾಯಿತು. ಇದೇ ಸಂದರ್ಭದಲ್ಲಿ ಎಲ್ಲರಿಗೂ ಪ್ರತಿಜ್ಞಾ ವಿಧಿ ಭೋಧಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳಾದ ಡಾ.ಸಿದ್ದು ಪಾಟೀಲ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಿವಶರಣಪ್ಪ, ಜಿಲ್ಲಾ ಕಾಲರಾ ನಿಯಂತ್ರಣಾಧಿಕಾರಿ ಡಾ.ವಿವೇಕಾನಂದ ರೆಡ್ಡಿ ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿಗಳ ಕಚೇರಿಯ ಹಿರಿಯ ವೈದ್ಯಾಧಿಕಾರಿ ಡಾ.ವಿಜಯಲಕ್ಷ್ಮಿ ವಲ್ಯಾಪೂರೆ ಹಾಗೂ ತಾಲೂಕಾ ಆರೋಗ್ಯ ಅಧಿಕಾರಿಗಳಾದ ಮಾರುತಿ ಕಾಂಬಳೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಮಾಣಿಕೇಶ್ವರಿ ಕಾಲೋನಿ ವೈದ್ಯಾಧಿಕಾರಿ ಡಾ.ಶೈಲಜಾ, ಜಿಲ್ಲಾ ಕುಷ್ಠರೋಗ ಅಧಿಕಾರಿಗಳ ಕಚೇ–ರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ನಾಳೆ ಬೀದರ್‌ನ ಚನ್ನಬಸವೇಶ್ವರ ಗುರುಕುಲದಲ್ಲಿ ಸ್ಕಾಲರ್‌ಶೀಪ್ ಪ್ರವೇಶ ಪರೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.31: ಬೀದರ್ ನಗರದ ರಾಂಪೂರೆ ಬ್ಯಾಂಕ್ ಕಾಲೋನಿಯಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ನಡಿ ನೂತನ ಆರಂಭಿಸಿರುವ ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಫೆ.2 ರಂದು ಭಾನುವಾರ ಸ್ಕಾಲರ್‌ಶೀಪ್ ಪ್ರವೇಶಪರೀಕ್ಷೆ ಏರ್ಪಡಿಸಲಾಗಿದೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ತಿಳಿಸಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.

ಅಂದು ಬೆಳಿಗ್ಗೆ 9 ಗಂ–ಟೆಗೆ ಸ್ಕಾಲರ್‌ಶೀಪ್ ಪ್ರವೇಶ ನಡೆಯಲಿದ್ದು,ಈಗಾಗಲೇ ಜಿಲ್ಲೆಯ ವಿವಿಧ ಕಡೆಗಳಿಂದ 1200ಕ್ಕೂ ಅಧಿಕ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಸಿದ್ದಾರೆ.

ಆಯ್ಕೆಯಾದ ಮೊದಲ 25 ವಿದ್ಯಾರ್ಥಿಗಳಿಗೆ ಎರಡು ವರ್ಷ ಉಚಿತ ಪಿಯುಸಿ ಶಿಕ್ಷಣ ಮತ್ತು ಸ್ಪರ್ಧಾತ್ಮಕ ತರಬೇತಿ ನೀಡಲಾಗುವುದು. ನಂತರ ಕ್ರಮವಾಗಿ 26 ರಿಂದ 50 ವಿದ್ಯಾರ್ಥಿಗಳಿಗೆ ಕಾಲೇಜಿನ ಶುಲ್ಕದಲ್ಲಿ ಅರ್ಧದಷ್ಟು ರಿಯಾಯತಿ ನೀಡಲಾಗುವುದು ಎಂದರು.



ಬೀದರ್‌ನಲ್ಲಿ ಗುರುಕುಲ ಮಾದರಿ ಶಿಕ್ಷಣ

ಬೀದರ್ ನಗರದಲ್ಲಿ ನೂತನವಾಗಿ ಆರಂಭ ಆಗಲಿರುವ ಚನ್ನಬಸವೇಶ್ವರ ಗುರುಕುಲ ಪದವಿ ಪೂರ್ವ ವಿಜ್ಞಾನ ಕಾಲೇಜಿನಲ್ಲಿ ಜಿಲ್ಲೆಯ ಮಕ್ಕಳಿಗೆ&ಟಿಛಿ;ಕರಡ್ಯಾಳ ಚನ್ನಬಸವೇಶ್ವರ ಗುರುಕುಲ ಮಾದರಿಯಲ್ಲಿಯೇ ಶಿಕ್ಷಣ ಸೌಲಭ್ಯ ಒದಗಿಸಲಾಗುತ್ತಿದೆ ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ತಿಳಿಸಿದರು.

ಜಿಲ್ಲೆಯ ಭಕ್ತರು, ಹಿತೈಷಿಗಳು ಮತ್ತು ಪಾಲಕರ ಒತ್ತಾಸೆ ಮೇರೆಗೆ ಪೂಜ್ಯರು ಬೀದರ್ ನಗರದಲ್ಲಿ ಪದವಿ ಪೂರ್ವ ಕಾಲೇಜು ಆರಂಭಿಸಿದ್ದಾರೆ.

ಇಲ್ಲಿಯು ನುರಿತ ಉಪನ್ಯಾಸಕರನ್ನು ನೇಮಿಸಿಕೊಂಡು ಗುರುಕುಲ ಮಾದರಲ್ಲಿ ಅಗತ್ಯ ಮೂಲ ಸೌಲಭ್ಯಗಳೊಂದಿಗೆ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ. ಇದರಲ್ಲಿ ಯಾವುದೇ ವ್ಯತ್ಯಾಸ ಇರುವುದಿಲ್ಲ. ಫೆ.2 ರಂದು ನಡೆಯುವ ಸ್ಕಾಲರ್‌ಶೀಪ್ ಪ್ರವೇಶ ಪರೀಕ್ಷೆ 400 ಅಂಕ 100 ಪ್ರಶ್ನೆಗಳಿಂದ ಕೂಡಿರುತ್ತದೆ. ಹೆಚ್ಚು ಅಂಕ ಪಡೆಯುವ 25 ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ಮತ್ತು ನಂತರದ 25 ವಿದ್ಯಾರ್ಥಿಗಳಿಗೆ ಶುಲ್ಕದಲ್ಲಿ ಅರ್ಧ ರಿಯಾಯತಿ ನೀಡಲು ಆಡಳಿತ ಮಂಡಳಿ ನಿರ್ಧರಿಸಿದೆ ಹೆಚ್ಚಿನ ಮಾಹಿತಿಗಾಗಿ ಲೋಕೇಶ ಉಡಬಾಳೆ 9738451506ಗೆ ಸಂಪರ್ಕಿಸಬಹುದಾಗಿ ಎಂದು ತಿಳಿಸಿದರು.

ಗಡಿ ಜಿಲ್ಲೆ ಬೀದರ್‌ನ್ನು ಶೈಕ್ಷಣಿಕವಾಗಿ ರಾಜ್ಯ ರಾಷ್ಟ್ರ ಮಟ್ಟದಲ್ಲಿ ನಂಬರ್ ಓನ್ ಸ್ಥಾನಕ್ಕೇರಿಸುವ ಇರಾದೆ ತಮ್ಮದ್ದಾಗಿದೆ. ಈಗಾಗಲೇ ಕಳೆದ ಸಾಲಿನ ನೀಟ್‌ನಲ್ಲಿ ಬೀದರ್ ಜಿಲ್ಲೆ ರಾಜ್ಯದಲ್ಲಿ ಮೂರನೇ ಸ್ಥಾನಕ್ಕೇರಿರುವುದು ಹೆಮ್ಮೆ ತರಿಸಿದೆ.

ಹಾಗಾಗಿ ಬೀದರ್‌ನ್ನು ಶೈಕ್ಷಣಿಕ ಕ್ಷೇತ್ರವನ್ನಾಗಿಸಲು ಎಲ್ಲ ರೀತಿಯ ಪ್ರಯತ್ನ ಮಾಡಲಾಗುತ್ತಿದೆ. ಕಳೆದ ಹತ್ತಾರೂ ವರ್ಷಗಳಿಂದ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ನಡಿ ನಡೆಯುವ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಮೂಲಕ ಪ್ರತಿಭಾವಂತ ನೂರು ಮಕ್ಕಳಿಗೆ ಪ್ರತಿವರ್ಷ ಉಚಿತ ಶಿಕ್ಷಣ ಕಲ್ಪಿಸಲಾಗುತ್ತಿದೆ.

ಅದೇ ಮಾದರಿಯಲ್ಲಿ ಬೀದರ್ ನಗರದಲ್ಲಿ ನೂತನವಾಗಿ ಆರಂಭಿಸಿರುವ ಚನ್ನಬಸವೇಶ್ವರ ಗುರುಕುಲ ಪದವಿ ಪೂರ್ವ ಕಾಲೇಜಿನಲ್ಲಿ ಗುಣಾತ್ಮಕ ಶಿಕ್ಷಣ ಕಲ್ಪಿಸಲಾಗುವುದು. ಇದರ ಸದುಪಯೋಗ ಜಿಲ್ಲೆಯ ಪಾಲಕರು ಪಡೆದು ಕೊಂಡು ಹೆಚ್ಚೆಚ್ಚು ವಿದ್ಯಾರ್ಥಿಗಳನ್ನು ದಾಖಲು ಮಾಡಬೇಕು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಹಿರೇಮಠ ಸಂಸ್ಥಾನದ ಕಾರ್ಯದರ್ಶಿ ಮಹಾಲಿಂಗ ಸ್ವಾಮೀಜಿ, ಆಡಳಿತಾಧಿಕಾರಿ ಮೋಹನ ರೆಡ್ಡಿ, ಪ್ರಾಚಾರ್ಯ ಬಸವರಾಜ ಮೊಳಕೀರೆ ಇದ್ದರು

# ನರೇಂದ್ರಾಚಾರ್ಯ ಭಕ್ತರಿಂದ ಅನೇಕ ಸಾಮಾಜಿಕ ಸೇವೆ: ಚಂದ್ರಶೇಖರ ನಿರ್ಣೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜ.31:ನರೇಂದ್ರಾಚಾರ್ಯ ಭಕ್ತರಿಂದ ಲಕ್ಷಗಟ್ಟಲೆ ಜನ ರಕ್ತದಾನ ಸೇವೆ ಮಾಡಲಾಗಿದೆ, ಸ್ವಚ್ಛತೆ ಅಭಿಯಾನ, ಬಡ ಕುಟುಂಬದ ಹೆಣ್ಣು ಮಕ್ಕಳಿಗೆ ಇಂದು ಹೊಲಿಗೆ ಯಂತ್ರ ವಿತರಣೆ ಎಂತಹ ಅನೇಕ ಸಾಮಾಜಿಕ ಸೇವೆ ಮಾಡುತ್ತಿದ್ದಾರೆ ಎಂದು ಕಮಲಾನಗರ ಪಿ. ಎಸ್. ಐ ಚಂದ್ರಶೇಖರ ನಿರ್ಣೆ ಹೇಳಿದರು.

ಪಟ್ಟಣದ ಹೊರವಲಯದಲ್ಲಿ ಶುಕ್ರವಾರ ಸ್ವ–ಸ್ವರೂಪ ಸಂಪ್ರದಾಯ ಬೀದರ ಜಿಲ್ಲಾ ಸೇವಾ ಸಮಿತಿ ವತಿಯಿಂದ ಆಯೋಜನೆ ಮಾಡಿರುವ ಶ್ರೀ ಸ್ವಾಮಿ ನರೇಂದ್ರಾಚಾರ್ಯ ಮಹಾರಾಜರ ಪಾದುಕೆ ದರ್ಶನ ಮತ್ತು ಹೊಲಿಗೆ ಯಂತ್ರ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಾರಾಷ್ಟ್ರ, ಆಂದ್ರಪ್ರದೇಶ, ತೆಲಂಗಣಾ ರಾಜ್ಯದ ಕರ್ನಾಟಕ ರಾಜ್ಯದ ಬೀದರ ಜಿಲ್ಲೆ, ಭಾಲ್ಕಿ, ಹುಮನಾಬಾದ್, ಔರಾದ್, ಕಮಲನಗರ ತಾಲ್ಲೂಕಿನ ಬಾಲೂರು, ಸಾವಳಿ, ಡೋಣಗಾಂವ್, ತೇ–ೂರಣಾ, ಕಮಲನಗರ, ಡಿಗ್ಗಿ, ಖತಗಾಂವ್, ಚ್ಯಾಂಡೇಶ್ವರ, ವಿವಿಧ ಗ್ರಾಮಗಳಿಂದ ಭಕ್ತರು ಈ ಪಾದುಕೆ ದರ್ಶನದಲ್ಲಿ ಸಮ್ಮೀಲನಗೊಂಡಿರುವುದು ವಿಶೇಷವಾಗಿತ್ತು.

ನಾ ಣ್ ೀ ಜ ಧ ಾ ವ್ ಂ ದ್ ಮಹಾರಾಜರು ಮಾತನಾಡಿ, ಭಕ್ತಿಯಿಂದ ಪರೋಪಕಾರ, ಮಾನ ವೀಯುತೆ ಹಾಗೂ ಸದ್ಗುಣಗಳು ಅರಳುವವು. ಹೀಗಾಗಿ ನಮ್ಮ ಮನಸ್ಸು ಹಾಗೂ ಇಂದ್ರೀಯಗಳನ್ನು ಅಧ್ಯಾತ್ಮದತ್ತ ಒಲವು ಬೆಳೆಸಿಕೊಳ್ಳಬೇಕು ಎಂದರು.

ಅಂಧಶ್ರದ್ಧೆ ಮನುಷ್ಯನನ್ನು ಅಜ್ಞಾನ ದತ್ತ ಕರೆದುಕೊಂಡು ಹೋಗಲಿದೆ. ಅಧ್ಯಾತ್ಮ, ಯೋಗ,



ಜ್ಞಾನಗಳು ಸನ್ಮಾರ್ಗದತ್ತ ಕ–ರೆದುಕೊಂಡು ಹೋಗಲಿವೆ. ನರೇಂದ್ರಾಚಾರ್ಯ ಸ್ವಾಮೀಜಿ ಅವರ ಅಧ್ಯಾತ್ಮ ಮಾರ್ಗದಲ್ಲಿ ನಡೆಯಬೇಕು ಎಂದು ತಿಳಿಸಿದರು.

ನರೇಂದ್ರಚಾರ್ಯ ಪಾದುಕೆ ಭವ್ಯ ಮೆರವಣಿಗೆ:

ಕಮಲನಗರ ಪಟ್ಟಣದ ಶಾಂತಿವರ್ಧಕ ಕಾಲೇಜ್ ಕ್ರಾಸ್ ದಿಂದ ಬಸ್ ತಂಗುದಾಣ ಮಾರ್ಗವಾಗಿ ಎಪಿಎಂಸಿ ಮಾರುಕಟ್ಟೆ, ಭಾಗಿರಥಿ ಪಬ್ಲಿಕ್ ಶಾಲೆ, ಭಾಗ್ಯವಂತಿ ಮಂದಿರ, ಶನಿದೇವ ಮಂದಿರದಿಂದ ಬಾರ್ಡರ ಆವರಣದವರೆಗೂ ಭವ್ಯ ಮೆರವಣಿಗೆ ಸಾಗಿತು. ಮಹಿಳೆಯರು ನೃತ್ಯ, ಹರಿಭಜನೆ, ಡೊಳ್ಳು ಕುಣಿತ, ಭಜನೆ ಮತ್ತಿತರ ವಾದ್ಯಗಳ ಸಡಗರವು ಮೆರವಣಿಗೆಗೆ ಕಳೆ ಕಟ್ಟಿತು.ಸಾವಿರಾರೂ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಪಾದುಕೆ ದರ್ಶನ ಕೈಗೊಂಡರು.ಕಾರ್ಯಕ್ರಮದಲ್ಲಿ ನೂರಾರು ಭಕ್ತರು ಪೂರ್ಣ ಕುಂಭ ತಲೆಮೇಲೆ ಇಟ್ಟಿಕೊಂಡು ಮೆರವಣಿಗೆಯಲ್ಲಿ ಪಾಲ್ಗೊಂಡರು.

ಸಿಪಿಐ ಅಮರೆಪ್ಪ ಶಿವಬಲ ಮಾತನಾಡಿ, ಇಂದು ಕಮಲನಗರದಲ್ಲಿ ಹಬ್ಬದ ವಾತಾವರಣ ಸ್ರಷ್ಟಿಯಾಗಿದೆ. ಎಲ್ಲಕ್ಕಿಂತ ದೊಡ್ಡ ದರ್ಶನ ಮನುಷ್ಯತ್ವ ಅದನ್ನು ಎಲ್ಲರೂ ಬೆಳೆಸಿಕೊಳ್ಳಬೇಕು ಎಂದು ನುಡಿದರು. ಹಾಗೂ ಎಲ್ಲರೂ ಸುರಕ್ಷತೆ ಬಗ್ಗೆ ಹೆಚ್ಚಿನ ಗಮನ ಹರಿಸಬೇಕೆಂದು ಕಿವಿ ಮಾತು ಹೇಳಿದರು.

ಸ್ವ–ಸ್ವರೂಪ ಸಂಪ್ರದಾಯ ಬೀದರ ಜಿಲ್ಲಾ ಸೇವಾ ಸಮಿತಿ ಜಿಲ್ಲಾ ನಿರೀಕ್ಷಕ ವಿಠ್ಠಲ. ಎಂ ಮಾರ್ಗದರ್ಶನದಲ್ಲಿ ಸಿಪಿಐ ಅಮರೆಪ್ಪ ಶಿವಬಲ ಮೆರವಣಿಗೆಗೆ ಚಾಲನೆ ನೀಡಿದರು. ಪಿಎಸ್‌ಐ ಚಂದ್ರಶೇಖರ ನಿರ್ಣೆಕರ್, ಹಾಗೂ ಸಿಬ್ಬಂದಿ ಮೆರವಣಿಗೆ ಬಿಗಿಬಂದೋಬಸ್ತ್ ಮಾಡಲಾಗಿತು.

ಸ್ವ –ಸರೂಪಿ ಸಮಿತಿಯ ಜಿಲ್ಲಾ ಅಧ್ಯಕ್ಷ ಲಕ್ಕುಂಡೆ ಅಧ್ಯಕ್ಷ ಭಾಷಣ ಮಾಡಿದರು.

ಬಾಲಾಜಿ ತೇಲಂಗೆ, ಗೋವಿಂದ ದೇಶಮುಖ, ನಾಗರೀಕ ಸೇವಾ ಸಮಿತಿ ತಾಲ್ಲೂಕು ಅಧ್ಯಕ್ಷ ದಿಲೀಪ ಮುಧಾಳೆ, ಉತ್ತಮರಾವ ಮಾನಕರೆ, ಸುರೇಶ ಚಾಂಗುಣೆ, ಮಹಾದೇವ ಸ್ವಾಮಿ, ಶ್ರೀಮಠ ಚಾರಿಟೇಬಲ್ ಅಧ್ಯಕ್ಷ ಮನೋಜಕುಮಾರ ಹಿರೇಮಠ, ಸೇರಿದಂತೆ ಜಿಲ್ಲಾ ಸೇವಾ ಸಮಿತಿ ಪ್ರಮುಖರು ಹಾಗೂ ಸದಸ್ಯರು ಮತ್ತಿತರ ತಾಲೂಕಿನಿಂದ ಬಂದ ಭಕ್ತರು ಪಾದುಕೆ ದರ್ಶನದಲ್ಲಿ ಪಾಲ್ಗೊಂಡಿದ್ದರು.

# ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಮನವಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಕರ್ನಾಟಕ ನಿವೃತ್ತನೌಕರರ ವೇದಿಕೆ ಕೇಂದ್ರ ಸಮಿತಿ, ಬೆಂಗಳೂರು ಆದ ನಾವುಗಳು ಈ ಮೂಲಕ ತಮ್ಮಲ್ಲಿ ವಿನಂತಿಸಿಕೊಳ್ಳುತ್ತಿರುವುದೇನೆಂದರೆ, ದಿನಾಂಕ : 1-7-2022ರಂದು ಬೆಂಗಳೂರ ಅವಧಿಯಲ್ಲಿ 25 ತಿಂಗಳು ಸೇವೆಸಲ್ಲಿಸಿ ನಿವೃತ್ತರಾದ ನೌಕರರಿಗೆ 7 ನೇ ವೇತನ ಆಯೋಗದ ಅನುಷ್ಟಾನದಲ್ಲಿ ನಿವೃತ್ತಿ ಉಪಲಬ್ಧಗಳನ್ನು ಪಾವತಿಸುವ ಸಂದರ್ಭದಲ್ಲಿ ಆರ್ಥಿಕ ನಷ್ಟವಾಗಿರುತ್ತದೆ. ಈ ವಿಸೆಯಲ್ಲಿ ನಾವುಗಳು ತಮ್ಮಲ್ಲಿ ಕೇಳಿಕೊಳ್ಳುವುದೇನೆಂದರೆ ಪ್ರಸ್ತುತ ಸೇವೆಯಲ್ಲಿರುವ ಅಧಿಕಾರಿ ನೌಕರರಂತೆ ನಾವು

ದಿನಾಂಕ1-7-2022ರಿಂದಲೇ ಪಡೆಯಬೇಕಿದ್ದ ನಿವೃತ್ತಿವೇತನದ ವ್ಯತ್ಯಾಸವನ್ನು(ಂಡಿಡಿಜಚಿಡಿ) ಕೇಳುತ್ತಿರುವುದಿಲ್ಲ, ಐದಲಾಗಿ ನಾವು ಕೇಳುತ್ತಿರುವುದು 7 ನೇ ವೇತನ ಆಯೋಗದ ವರದಿಯಂತೆ ಪರಿಷ್ಕೃತ ವೇತನದ ಮೇಲೆ ನಿವೃತ್ತಿ ಆರ್ಥಿಕ ಸೌಲಭ್ಯಗಳಾದ ಡಿ.ಸಿ.ಆರ್.ಟಿ. ಕಮ್ಯುಟೇಶನ್ ಹಾಗೂ ಗಳಿಕೆ ರಜೆ ನಗದೀಕರಣಗಳ ಸೌಲಭ್ಯಗಳ ಲೆಕ್ಕಾಚಾರದ ವ್ಯತ್ಯಾಸದ ಮೊತ್ತವನ್ನು ಮಾತ್ರ (One Time Settlement) ಕೊಡಬೇಕೆಂದು ಹೇಳುತ್ತಿದ್ದೇವೆ.

ಈ ನಮ್ಮ ಬೇಡಿಕೆ ಕುರಿತು ನಾವುಗಳು ಮಾನ್ಯ ಮುಖ್ಯಮಂತ್ರಿಗಳಿಗೆ ಒತ್ತಾಯಿಸಿ-ಆಗ್ರಹಿಸಿ ಬೆಳಗಾವಿಯಲ್ಲಿ ಜರುಗಿದ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣಸೌಧದ ಮುಂದೆ ದಿನಾಂಕ 16-12-2024 ರಂದು ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಆಗಮಿಸಿದ್ದ 20,000 ಕ್ಕೂ ಅಧಿಕ ನೌಕರರು ಸಮಾವೇಶಗೊಂಡ ಸಂದರ್ಭದಲ್ಲಿ ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಮಾನ್ಯಶ್ರೀ ಸತೀಶ ಪಾರಪಿಹೊಳಿಯವರು ಘನ ಸರಕಾರದ ವತಿಯಿಂದ ನಮ್ಮ ಮನವಿಯನ್ನು ಸ್ವೀಕರಿಸಿದ ಸಂದರ್ಭದಲ್ಲಿ ಮಾನ್ಯ ಸಚಿವರೊಂದಿಗೆ ಆಗಮಿಸಿದ್ದ ಪಿ. ಸಿ. ಜಾಫರ್ ಸರಕಾರದ ಕಾರ್ಯದರ್ಶಿಗಳು (ಆ. & ಸಂ.) ಆರ್ಥಿಕ ಇಲಾಖೆ, ಬೆಂಗಳೂರು ಇವರು ಆಗಮಿಸಿದ ಸಂದರ್ಭದಲ್ಲಿ ಅಧಿವೇಶನದ ನಂತರ ಬೆಂಗಳೂರಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ಜೊತೆ ಸಭೆ ಆಯೋಜಿಸಿ ನಿಮ್ಮ ವೇದಿಕೆಯ ಮುಖಂಡರನ್ನು ಮಾತುಕತೆಗೆ ಆಹ್ವಾನಿಸುತ್ತೇವೆ. ಆಗ ತಾವು ಬಂದು ತಮ್ಮ ಆಹವಾಲು ಮಂಡಿಸಿರಿ ಎಂದು ತಿಳಿಸಿದ್ದರು.

ಅಲ್ಲದೇ ಸತೀಶ ಜಾರಕಿಹೊಳಿ ಮಾನ್ಯ ಸಚಿವರು ಮುಖ್ಯಮಂತ್ರಿಗಳನ್ನು ಸುವರ್ಣ ವಿಧಾನಸೌಧದಲ್ಲಿ ಭೇಟಿಯಾಗಲು ವ್ಯವಸ್ಥೆ ಮಾಡಿದಂತೆ ನಮ್ಮ ವೇದಿಕೆಯ ನಿಯೋಗವು ದಿನಾಂಕ 16-12-2024 ರಂದು ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಮಾನ್ಯ ಮುಖ್ಯಮಂತ್ರಿಗಳನ್ನು ಭೇಟಿಯಾದಾಗ ಮಾನ್ಯ ಮುಖ್ಯಮಂತ್ರಿಗಳು ಈ ಅಧಿವೇಶನದ ನಂತರ ಸಭೆ ಕರೆದು ಚರ್ಚಿಸಿ ನಿರ್ಧರಿಸೋಣ ಎಂದು ಹೇಳಿದ್ದರು.

ಆದರೆ ಈ ವರೆಗೂ ಮಾನ್ಯ ಮುಖ್ಯಮಂತ್ರಿಗಳು ಸಭೆ ಏರ್ಪಾಡು ಮಾಡಿರುವುದಿಲ್ಲ.

ಆದ್ದರಿಂದ ನಮ್ಮ ಬೇಡಿಕೆ ಈಡೇರಿಕೆ ಬಗ್ಗೆ ಚರ್ಚಿಸಲು ಮಾನ್ಯ ಮುಖ್ಯಮಂತ್ರಿಗಳು ನಮ್ಮ ವೇದಿಕೆಯ ಮುಖಂಡರುಗಳೊಂದಿಗೆ ಒಂದು ವಾರದೊಳಗೆ ದಿನಾಂಕ ನಿಗದಿಗೊಳಿಸಿ ಒಂದು ಸಭೆ ಏರ್ಪಾಡು ಮಾಡಿಸಿ ನಮಗೆ ತಿಳಿಸಲು ದಿನಾಂಕ30-01-2025 ಮಹಾತ್ಮಾ ಗಾಂಧೀಜಿ ಅವರ ಪುಣ್ಯತಿಥಿ ಹಾಗೂ ಹುತಾತ್ಮರ ದಿನಾಚರಣೆ ಸಂದರ್ಭದಲ್ಲಿ ಈ ಮೂಲಕ ಶೇಶಿಧರ್ ಪಾಟೀಲ್ ತಾಲೂಕಾ ಸಂಚಾಲಕರು, ರೇವಣಸಿದ್ಧಯ್ಯಾ ಮಠಪತಿ, ಸಹ ಸಂಚಾಲಕರು, ಜಿಲ್ಲಾ ಪಂಚಾಯತ ಸಂಚಾಲಕ ಮಾರುತಿ ಪೂಜಾರಿ, ಸಂಗಣ್ಣ ಬಿಧಾರೆಡ್ಡಿ, ಮಾಂತೇಶ ಸಜ್ಜನ್, ಅಶೋಕ ಹಿರೇಮಠ, ಬಸಪ್ಪಾ ರೆಡ್ಡಿ, ಪ್ರಭುರಡ್ಡಿ, ಮಲ್ಲಿಕಾರ್ಜುನ ಚಂದಾಪೂರೆ, ಬಸಪ್ಪ ದೇವಣಿ, ಪಂಡಿತ ಬಾಳೂರೆ, ಕಂಠೇಪ್ಪ ಹಲ್ಬರ್ಗಾ, ರೇವಣಪ್ಪ ಸಜ್ಜನ್, ಫಖ್ರೊದ್ದಿನ್, ಮಸ್ತಾನ ಸಾಬ್, ಶರಣಪ್ಪ, ಮಧುಮತಿ, ಮುನಿರ್ ಬೇಗ್ ರಾಮಣ್ಣ ರೇಕುಳಗಿ ಇನ್ನಿತರರು ಮನವಿ ಪತ್ರವನ್ನು ಕಳಕಳಿಯಿಂದ ಕೋರಿದ್ದಾರೆ.

# ವ್ಯಕ್ತಿ ಕಣ್ಮರೆ



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ :-ತಾಲೂಕಿನ ಹಿರನಾಗಾಂವ ಗ್ರಾಮದ ಕಾಣೆ-ಯಾದ ವ್ಯಕ್ತಿ ಇಸ್ಮಾಯಿಲ್ ತಂದೆ ಸಾಯಬಣಾ ಹಣಕುಣಿ ವಯಸು 80. ಕೂಲಿ ಕೆಲಸ. ಹಿರನಾಗಾಂವ ಗ್ರಾಮದ ತಮ್ಮ ಮನೆಯಿಂದ ದಿನಾಂಕ 5 - 8 - 2023 ರಂದು ಬೆಳ್ಳಗೆ 5:30 ಗಂಟೆಗೆ ಹೋದವರು ಮರಳಿ ಮನೆಗೆ ಬರದೆ ಕಾಣೆಯಾಗಿರುತ್ತಾರೆ. ಈ ಬಗ್ಗೆ ಕಾಣೆಯಾದ ವ್ಯಕ್ತಿಯ ಮಗನಾದ ಮಲ್ಲಪ್ಪ ತಂದೆ ಇಸ್ಮಾಯಿಲಪಾ ಹಣಕುಣಿ ಸಾ. ಇವರು ನೀಡಿದ ದೂರಿನ ಮೇರೆಗೆ ದಿನಾಂಕ 27 - 8 - 2023 ರಂದು 14:30 ಗಂಟೆಗೆ ಮುಡಬಿ ಪೊಲೀಸ್ ಠಾಣೆಯಲ್ಲಿ ಗುನ್ನೆನಂ56/2023 ಕಲಂ ಕಾಣೆಯಂತೆ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯ ಚಹರೆದುಂಡು ಮುಖ ಗೋಧಿ ಮೈಬಣ 5.6 ಅಡಿ ಎತ್ತರ ಇದ್ದು ಕನ್ನಡ ಭಾಷೆ ಮಾತಾಡುತ್ತಾರೆ. ಮನೆಯಿಂದ ಹೋಗುವಾಗ ಕೆಂಪು ಬಣ್ಣದ ರುಮಾಲು. ಬಿಳಿ ಬಣ್ಣದ ಶ್ವೇಟರ್ ಹಾಗೂ ಬೀಳಿ ಬಣ್ಣದ ಧೋತಿ ಧರಿಸಿರುತ್ತಾರೆ. ಕಾಣೆ-ಯಾದ ವ್ಯಕ್ತಿಯ ಮಾಹಿತಿ ಸಿಕ್ಕಿಲ್ಲ ಕೆಳಕಂಡ ವಿಳಾಸಕ್ಕೆ ಮುಡಬಿ ಪೊಲೀಸ್ ಠಾಣೆಗೆ ನಂ 9480803462. ಹಾಗೂ ಮಂಠಾಳ ಪೊಲೀಸ್ ಠಾಣೆ-ಯ ನಂ 9480803438. ಹುಮನಾಬಾದ ಪೊಲೀಸ್ ಠಾಣೆಯ 9480803422 ಸಂಪರ್ಕಿಸಲು ತಿಳಿಸಿದ್ದಾರೆ.

# ಸಂಚಾರಿ ನಿಯಮಗಳನ್ನು ಪಾಲಿಸಿ ಅಮೂಲ್ಯ ಜೀವ ಉಳಿಸಿಕೊಳ್ಳಿ; ಎಸ್ಪಿ:- ಪ್ರದೀಪ ಗುಂಟಿ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಸಂಚಾರ ನಿಯಮದ ಉಲ್ಲಂಘನೆಯಿಂದ ಪ್ರಾಣಾಪಾಯ ಸಂಭವಿಸುತ್ತದೆ. ಹಾಗಾಗಿ ತಮ್ಮ ಅತ್ಯಮೂಲ್ಯ ಜೀವ ಉಳಿಸಿಕೊಳ್ಳಲು ವಾಹನ ಚಾಲಕರು ಸಂಚಾರ ನಿಯಮಗಳನ್ನು ತಪ್ಪದೆ ಪಾಲಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಸೆಕ್ಯುರ ಹೆದ್ದಾರಿಗಳ ಅಂಗ ಸಂಸ್ಥೆಯಾದ ಡೆಕ್ಕನ್ ಟೋಲ್ ವೇಸ್ ಲಿಮಿಟೆಡ್ (ಡಿಟಿಎಲ್) ವತಿಯಿಂದ ತಾಲೂಕಿನ ಮಂಗಲಗಿ ಟೋಲ್ ಪ್ಲಾಜಾದಲ್ಲಿ ರಸ್ತೆ ಸುರಕ್ಷತೆ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಂಚಾರ ನಿಯಮ ಅರಿತು ಇತರರಿಗೂ ಅದರ ಬಗ್ಗೆ ಜಾಗೃತಿ ಮೂಡಿಸಬೇಕು. ಚಾಲನೆ ಪರವಾನಿಗೆ (ಲೈಸೆನ್ಸ್) ಇಲ್ಲದೆ ಹಾಗೂ ಹೆಲ್ಮೆಟ್ ರಹಿತ ಚಾಲನೆ ಅಪರಾಧವಾಗುತ್ತದೆ. ರಸ್ತೆಯಲ್ಲಿ ಅಪಘಾತಗಳು ಸಂಭವಿಸಿದಾಗ ನಿಮ್ಮ ಸಹಾಯ ಹಸ್ತವನ್ನು ಚಾಚಿ ನೆರವಾಗಬೇಕು. ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕು. ನಾಲ್ಕು ಚಕ್ರದ ವಾಹನ ಚಾಲನೆ ವೇಳೆ ಕಡ್ಡಾಯವಾಗಿ ಸೀಟ್ ಬೆಲ್ಟ್ ಧರಿಸಬೇಕು. ಇದ-ರಿಂದ ಅನಾಹುತವನ್ನು ತಪ್ಪಿಸಬಹುದು ಎಂದು ಹೇಳಿದರು. ಸುರಕ್ಷಿತ ಚಾಲನೆ ಜೀವದ ಸಂರಕ್ಷಣೆ ಎಂಬುದು ನಿಮ್ಮ ಗಮನದಲ್ಲಿ ಇರಲಿ. 18 ವರ್ಷ ವಯೋಮಿತಿ ದಾಟಿದ, ವಾಹನ ಪರವಾನಗಿಯನ್ನು ಹೊಂದಿದ ಸವಾರರು ನಗರ ಪ್ರದೇಶಗಳಲ್ಲಿ ವೇಗ ಮಿತಿಯನ್ನು ಗಮನಿಸಿ ವಾಹನವನ್ನು ಚಲಾಯಿಸಬೇಕು. ರಸ್ತೆ ನಿಯಮಗಳನ್ನು ಮತ್ತು ಸಂಚಾರ ನಿಯಮಗಳನ್ನು ತಪ್ಪದೆ ಪಾಲಿಸಬೇಕೆಂದು ತಿಳಿಸಿದರು. (ಎಐ) ಪ್ರಾಧಿಕಾರದವರು ವಿವಿಧ ಸುರಕ್ಷತಾ ಉಪಕ್ರಮಗಳ ಕುರಿತು ತಕ್ಷಣ ಕ್ರಮ ಕೈಗೊಂಡಿದ್ದಕ್ಕಾಗಿ ಅವರನ್ನು ಶ್ಲಾಘಿಸಿದರು. ಈ ಸಂದರ್ಭದಲ್ಲಿ ಕಲ್ಬುರ್ಗಿ ಪ್ರೊಜೆಕ್ ಡೈರೆಕ್ಟರ್

ಮಹೇಶ್ ಬಿ. ಪಾಟೀಲ್, ಡಿ.ಟಿ.ಎಲ್. ಯೋಜನಾ ಮುಖ್ಯಸ್ಥ ರಾಜೇಶ್ ವಿಚಾರೆ, ಇಂಡಿಪೆಂಡೆಂಟ್ ಇಂಜಿನಿಯರ್ ಸಂಜೋಗ್ ಡೋಂಗ್ರೆ, ಹುಮನಾಬಾದ ಡಿವೈಎಸ್ಪಿ ಜೆ.ಎಸ್. ನ್ಯಾಮೇಗೌಡರ, ಚಿಟಗುಪ್ಪ ಸಿಪಿಐ ಶ್ರೀನಿವಾಸ ಅಲ್ಲಾಪುರ, ಪ್ರೌಢ ಶಾಲೆ ವಿದ್ಯಾರ್ಥಿಗಳು ಹಾಗೂ ಮಂಗಲಗಿ ಟೋಲ್ ಪ್ಲಾಜಾ ಕಂಪನಿಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಪ್ರಯಾಣಿಕರು ಹೆಲ್ಮೆಟ್ ಮತ್ತು ಸುರಕ್ಷತಾ ಬೆಲ್ಟ್ ಗಳನ್ನು ಧರಿಸುವಂತೆ ವಿನಂತಿಸುವ ಯಮ ಧರ್ಮರಾಜ ಪಾತ್ರವು ವಿಶೇಷ ಆಕರ್ಷಣೆವಾಗಿತ್ತು. ಶಾಲಾ ಮಕ್ಕಳು ರಸ್ತೆ ಸುರಕ್ಷತೆ ಬಗ್ಗೆ ಕಿರು ನಾಟಕ ಪ್ರದರ್ಶನ ಮತ್ತು ಹಲವು ರೀತಿಯ ನೃತ್ಯ ಮಾಡುವ ಮೂಲಕ ರಸ್ತೆ ಸುರಕ್ಷತೆ ಬಗ್ಗೆ ತಿಳಿಸಿಕೊಟ್ಟರು. ಇದೇ ಸಂದರ್ಭದಲ್ಲಿ ಟೋಲ್ ಪ್ಲಾಜಾ ಕಂಪನಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಉಚಿತ ಆರೋಗ್ಯ ತಪಾಸಣೆ ಜರುಗಿತ್ತು.

# ಬದುಕುವ ವಿಧಾನ ಕಲಿಸಿದ ಶರಣರು :ಶ್ರೀಗಳು.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಇಲ್ಲಿನ ತಿಂಗಳ ಅನುಭವಮಂಟಪ ಹಾಗೂ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಮತ್ತು ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಆಚರಿಸಲಾಯಿತು. ದಿವ್ಯಸಾನಿಧ್ಯ ವಹಿಸಿ, ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರು ಮಾತನಾಡಿ ಶರಣರು ನಮಗೆ ಬದುಕಿನ ಉತ್ತಮ ವಿಧಾನವನ್ನು ಕಲಿಸಿದ್ದಾರೆ. ಮನುಷ್ಯನ ಬದುಕು ಸುಂದರಗೊಳಿಸುವ ಮತ್ತು ಸುಖಿಯಾಗಿಸುವ ಮೌಲ್ಯಗಳನ್ನು ಶರಣರು ತಮ್ಮ ವಚನಗಳ ಮೂಲಕ ನಮಗೆ ನೀಡಿದ್ದಾರೆ. ದಯೆ, ಕರುಣೆ, ಪ್ರೀತಿ, ಕಾಯಕ, ಭಕ್ತಿ, ದಾಸೋಹ, ಸಮಾನತೆ ಈ ಮೌಲ್ಯಗಳನ್ನು ನಾವು ಅಳವಡಿಸಿಕೊಂಡರೆ ನಮ್ಮ ಬದುಕು ಸುಂದರವಾಗುತ್ತದೆ. ಶಿವಯೋಗಿ ಸಿದ್ಧರಾಮೇಶ್ವರರು, ಅಂಬಿಗರ ಚೌಡಯ್ಯನವರು ನಮಗೆ ಮೌಲ್ಯಯುತ ಜೀವನದ ಮಾರ್ಗವನ್ನು ತೋರಿಸಿದ್ದಾರೆ. ಸಿದ್ಧರಾಮೇಶ್ವರರು ಕಾಯಕ ಮತ್ತು ಯೋಗದಲ್ಲಿ ಪ್ರವೀಣಕರಾಗಿದ್ದರು. ಅವರು ಹೃದಯ ತುಂಬ ಬಸವಭಕ್ತಿ ತುಂಬಿಕೊಂಡಿದ್ದರು. ಅಂಬಿಗರ ಚೌಡಯ್ಯನವರು ತಮ್ಮ ಗಣಾಚಾರದ ಮೂಲಕ ಸಮಸಮಾಜದ ನಿರ್ಮಾಣಕ್ಕಾಗಿ ದುಡಿದ ಶರಣ. ಅವರ ಬದುಕಿನ ಮೌಲ್ಯಗಳು ನಮ್ಮ ಬದುಕಿಗೆ ದಾರಿದೀಪವಾಗಿವೆ ಎಂದರು ಹೇಳಿದರು. ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠದ ಪೂಜ್ಯ ಶ್ರೀ ಜಗದ್ಗುರು ಶಾಂತಭೀಷ್ಮ ಚೌಡಯ್ಯ ಮಹಾಸ್ವಾಮಿಗಳು ಉದ್ಘಾಟಿಸಿ ,ಮಾತನಾಡಿ ಚೌಡಯ್ಯನವರ ಜೀವನ ದರ್ಶನವನ್ನು ಮಂಡಿಸಿದರು. ನೇತೃತ್ವ ವಹಿಸಿದ ಭಾಲ್ಕಿಯ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು ಮಾತನಾಡಿ ಅನುಭವಮಂಟಪದಲ್ಲಿ ಪ್ರತಿ ತಿಂಗಳು ನಡೆಯುವ ಅನುಭವಮಂಟಪ ಕಾರ್ಯಕ್ರಮದ ಉದ್ದೇಶವನ್ನು ತಿಳಿಸಿ ಆಶಯ ನುಡಿ ನುಡಿದರು. ಅಧ್ಯಕ್ಷತೆ ವಹಿಸಿದ ಪೂಜ್ಯಶ್ರೀ ಶಿವಾನಂದ ಸ್ವಾಮಿಗಳು ಶರಣರ ವಚನಗಳನ್ನು ಹೇಳಿ ವಚನದ ಮಹತ್ವ ತಿಳಿಸಿದ'ರು. ಹುಮನಾಬಾದ ಹಿರಿಯ ಸಾಹಿತಿಗಳಾದ ಡಾ.ಸೋಮನಾಥ ಯಾಳವಾರ ಮಾತನಾಡಿ ಸಿದ್ಧರಮೇಶ್ವರ ಕಂಡ ಬಸವಣ್ಣನವರ ಎಂಬ ವಿಷಯದ ಕುರಿತು ಅನುಭಾವ ನೀಡಿದರು. ಸಿದ್ದರಾಮೇಶ್ವರರು ಬಸವಣ್ಣನವರನ್ನು ಮನಸ್ಸು ಮತ್ತು ಭಾವದಲ್ಲಿ ತುಂಬಿಕೊಂಡು ಅನೇಕ ರೀತಿಯಲ್ಲಿ ಹಾಡಿ ಹೊಗಳಿದ್ದಾರೆ. ಸಿದ್ಧರಾಮೇಶ್ವರರು ತಮ್ಮ ವಚನಗಳಲ್ಲಿ ಬಸವಣ್ಣನವರ ಮಹಾದರ್ಶನವೆ ಮಾಡಿಸುತ್ತಾರೆ. ಅವರ ಹಾಗೆ ಬಸವಣ್ಣನವರ ವ್ಯಕ್ತಿತ್ವ ಕಟ್ಟಲು ಬೇರೆಯವರಿಗೆ ಸಾಧ್ಯವಾಗಲಿಲ್ಲ. ಅಷ್ಟೊಂದು ಪರಿಪೂರ್ಣವಾಗಿ ಸಿದ್ಧರಾಮೇಶ್ವರರು ಬಸವಣ್ಣನವರ ಸಮಗ್ರ ಘನವ್ಯಕ್ತಿತ್ವವನ್ನು ನಮ್ಮ ಮುಂದೆ ತೆರೆದಿಟ್ಟಿದ್ದಾರೆ ಎಂದು ಅನುಭಾವ ನೀಡಿದರು.

ಮಾಣಿಕರಾವ ವಾಡೇಕರ್, ಶಾಂತಾರಾಮ ರಾಜೋಳೆ. . ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷರಾದ ಎಂ.ಡಿ.ಶಬೀರೋದ್ದಿನ್ ಮತ್ತು ಉಪಾಧ್ಯಕ್ಷರಾದ ಲಕ್ಷ್ಮಿ ಬಾಯಿ ಪುಲೆ ಇವರಿಗೆ ಸನ್ಮಾನಿಸಲಾಯಿತು. ಆಸ್ಟ್ರೇಲಿಯಾದಿಂದ ಆಗಮಿಸಿದ ವೀರೇಶ ಹಿರೇಮಠ ವಚನ ಗಾಯನ ಮಾಡಿ ತಮ್ಮ ಅನುಭವ ಹಂಚಿಕೊಂಡರು . ವೀರಣ್ಣ ಕುಂಬಾರ ನಿರೂಪಿಸಿದರು. ರಾಜು ಜುಬರೆ ಸ್ವಾಗತಿಸಿದರು. ಶರಣೆ ವಿದ್ಯಾವತಿ ವಿಶ್ವನಾಥ ಸಜ್ಜನಶಟ್ಟಿ ಪ್ರಸಾದ ವ್ಯವಸ್ಥೆ ಮಾಡಿದರು.

# ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಜಿಲ್ಲಾ ಪೌರ ನೌಕರರ ಸಂಘದ 2025ನೇ ವರ್ಷದ ಹೊಸ ಕ್ಯಾಲೆಂಡರ್ ಮತ್ತು ಡೈರಿ ಬಿಡುಗಡೆಯನ್ನು ಶುಕ್ರವಾರ ಪೌರ ನೌಕರರ ಸಂಘ ಶಾಖೆ ಚಿಟಗುಪ್ಪ ವತಿಯಿಂದ ಇಲ್ಲಿಯ ಪುರಸಭೆ ಸಭಾಂಗಣದಲ್ಲಿ ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ ರವರ ಅಮೃತ ಹಸ್ತದಿಂದ ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಪೌರ ನೌಕರರ ಸಂಘದ ಅಧ್ಯಕ್ಷ ನೀಲಕಂಠ, ಉಪಾಧ್ಯಕ್ಷ ಧನರಾಜ ಹಾಗೂ ಪುರಸಭೆಯ ಸಿಬ್ಬಂದಿ ವರ್ಗದವರು ಮತ್ತು ಪೌರ ಕಾರ್ಮಿಕರು ಉಪಸ್ಥಿತರಿದ್ದರು.

# ಫೆ. ೩ ರಿಂದ ಕೊಪ್ಪಳ ನಗರದಲ್ಲಿ ಇ ಆಸ್ತಿ ತಂತ್ರಾಂಶದ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.31: ಇ-ಆಸ್ತಿ ತಂತ್ರಾಂಶದ ಕುರಿತು ಕೊಪ್ಪಳ ನಗರಸಭೆಯಿಂದ ಫೆಬ್ರವರಿ 3 ರಿಂದ 13 ರವರೆಗೆ ನಗರದ ವಿವಿಧ ವಾರ್ಡಗಳಲ್ಲಿ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ನಗರಸಭೆ ಪೌರಾಯುಕ್ತರಾದ ಗಣಪತಿ ಪಾಟೀಲ್ ತಿಳಿಸಿದ್ದಾರೆ.

ಕೊಪ್ಪಳ ನಗರಸಭೆ ವ್ಯಾಪ್ತಿಯಲ್ಲಿ ಇ-ಆಸ್ತಿ ತಂತ್ರಾಂಶವನ್ನು ಸರಳೀಕರಣಗೊಳಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕಾಗಿರುವುದರಿಂದ ಸಾರ್ವಜನಿಕರಿಂದ ಆಸ್ತಿ ಕಣಜ ತಂತ್ರಾಂಶದಲ್ಲಿ ಅವಶ್ಯವಿರುವ ದಾಖಲೆಗಳ ಪ್ರತಿಗಳನ್ನು ಪಡೆದು ಮುಂಬರುವ ದಿನಗಳಲ್ಲಿ ಸರ್ಕಾರದಿಂದ "ಬಿ" ಖಾತಾ ಉತಾರ ವಿತರಿಸಬೇಕಾಗಿರುವುದರಿಂದ ಕೊಪ್ಪಳ ನಗರಸಭೆ ವ್ಯಾಪ್ತಿಯ ಆಸ್ತಿ ತೆರಿಗೆ ಪಾವತಿದಾರರಿಗೆ ಆಸ್ತಿಗಳ ದಾಖಲೆಗಳನ್ನು ಸಂಗ್ರಹಿಸುವ ಹಾಗೂ ಆಸ್ತಿ ಕಣಜ ತಂತ್ರಾಂಶದಲ್ಲಿ ದಾಖಲೆಗಳನ್ನು ಕಾಲೋಚಿತಗೊಳಿಸಬೇಕಾಗಿರುವುದರಿಂದ ಶಿಬಿರಗಳನ್ನು ಕೊಪ್ಪಳ ನಗರದ ವಿವಿಧ ಸ್ಥಳಗಳಲ್ಲಿ ಆಯೋಜಿಸಲಾಗಿದೆ. ಆಯಾ ವಾರ್ಡಿನ ಸಾರ್ವಜನಿಕರು ಶಿಬಿರ ಸ್ಥಳಕ್ಕೆ ಭೇಟಿ ನೀಡಿ ತಮ್ಮ ತಮ್ಮ ಆಸ್ತಿಗಳ ದಾಖಲಾತಿಗಳನ್ನು ಅಲ್ಲಿ ನಿಯೋಜಿಸಿರುವ ಸಿಬ್ಬಂದಿ ಅಥವಾ ಅಧಿಕಾರಿಗಳಿಗೆ ನೀಡಬೇಕು.

*ಶಿಬಿರ ದಿನಾಂಕ & ಸ್ಥಳ;* 1 ರಿಂದ 3ನೇ ವಾರ್ಡಗಳ ಶಿಬಿರವು ಫೆಬ್ರವರಿ 3 ರಂದು ನಗರದ ಕಾತರಕಿ ರಸ್ತೆಯ ಸಿರಸಪ್ಪಯ್ಯನಮಠದ ಹತ್ತಿರದಲ್ಲಿ ನಡೆಯಲಿದೆ. 4 ಮತ್ತು 12ನೇ ವಾರ್ಡಗಳ ಶಿಬಿರವು ಫೆ. 4ರಂದು ಸಾಲಾರಜಂಗ್ ರಸ್ತೆಯ ಜೆ.ಪಿ ಮಾರುಕಟ್ಟೆಯಲ್ಲಿ ಹಮ್ಮಿಕೊಳ್ಳಲಾಗಿದೆ. 5 ರಿಂದ 9ನೇ ವಾರ್ಡಗಳ ಶಿಬಿರವು ಫೆ. 5ರಂದು ಗಡಿಯಾರ ಕಂಬದ ಹತ್ತಿರ ಇರುವ ಹಿರೇಮಸೂತಿ ಸಮೀಪದಲ್ಲಿ ನಡೆಲಿದೆ. 10, 11, 13, 14, 15 & 16ನೇ ವಾರ್ಡಗಳ ಶಿಬಿರವು ಫೆ. 6ರಂದು ಕುಂಬಾರ ಓಣಿಯ ಪ್ಯಾಟಿ ಈಶ್ವರ ದೇವಸ್ಥಾನದ ಹತ್ತಿರದಲ್ಲಿ ಏರ್ಪಡಿಸಿದೆ.

# ಸೇಡಂಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಭೇಟಿ

ಕಲಬುರಗಿ,ಜ.31:ಕೇಂದ್ರದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರು ಹೈದ್ರಾಬಾದ್‌ದಿಂದ ರಸ್ತೆ ಮೂಲಕ ಫೆಬ್ರವರಿ 1 ರಂದು ಶನಿವಾರ ರಾತ್ರಿ 9.50 ಗಂಟೆಗೆ ಸೇಡಂಗೆ ಆಗಮಿಸಿ ವಾಸವದತ್ತಾ ಸಿಮೆಂಟ್ ಅತಿಥಿ ಗೃಹದಲ್ಲಿ ವಾಸ್ತವ್ಯ ಮಾಡುವರು.

ಫೆಬ್ರವರಿ 2 ರಂದು ರವಿವಾರ ಬೆಳಿಗ್ಗೆ 10.40 ಗಂಟೆಗೆ ನೀಲಹಳ್ಳಿಯ ಪ್ರಕೃತಿ ನಗರದಲ್ಲಿ ಹಮ್ಮಿಕೊಳ್ಳಲಾದ ಆಹಾರ ಆರೋಗ್ಯ ಸಮ್ಮೇಳನದಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 1 ಗಂಟೆಗೆ ನೀಲಹಳ್ಳಿಯಿಂದ ರಸ್ತೆ ಮೂಲಕ ಹೈದ್ರಾಬಾದ್‌ಗೆ ಪ್ರಯಾಣಿಸುವರು.



ಬಸವಕಲ್ಯಾಣ: ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದಲ್ಲಿ ಶುಕ್ರವಾರ ರಂದು ಬೆಳಗ್ಗೆ ಪೂಜ್ಯಶ್ರೀ ಲಿಂಗೈಕ್ಯ ಕರಬಸಯ್ಯ ಸ್ವಾಮಿ ಹಿರೇಮಠ ಅವರ 9ನೇ ಪುಣ್ಯ ಸ್ಮರಣೋತ್ಸವ ನಿಮಿತ್ಯ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು, ಪೂಜ್ಯಶ್ರೀ ಲಿಂಗೈಕ್ಯ ಕರಬಸಯ್ಯ ಸ್ವಾಮಿಯವರ ಸಮಾಧಿಗೆ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ.ಕೆ. ಹಿರೇಮಠ ಹಾರಕೂಡ, ಮಲ್ಲಿನಾಥ ಹಿರೇಮಠ ಹಾರಕೂಡ, ಪಿ. ಕೆ. ಹಿರೇಮಠ, ಅಲ್ಲಮಪ್ರಭು ಹಿರೇಮಠ, ಹೇಮಲತಾ ಎಂ. ಹಿರೇಮಠ ಸೇರಿದಂತೆ ಇನ್ನಿತರರು. ಉಪಸ್ಥಿತರಿದ್ದರು.

# ಸಿದ್ಧರಾಮೇಶ್ವರರು 12ನೇ ಶತಮಾನದ ಪ್ರಸಿದ್ಧ ಸಮಾಜ ಸೇವಕರು: ಅರವಿಂದ ಎಸ್ ವಡ್ಡರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜ.31: ಶಿವಯೋಗಿ ಸಿದ್ಧರಾಮೇಶ್ವರರು 12ನೇ ಶತಮಾನದ ಪ್ರಸಿದ್ಧ ಸಮಾಜ ಸೇವಕರಾಗಿದ್ದರು ಎಂದು ಗಜೇಂದ್ರಗಡ ಎಸ್.ಎಸ್.ಭೂಮರೆಡ್ಡಿ ಕಾಲೇಜಿನ ಕನ್ನಡ ಪ್ರಾಧ್ಯಾಪಕರಾದ ಅರವಿಂದ ಎಸ್ ವಡ್ಡರ ಹೇಳಿದರು.

ಅವರು ಶುಕ್ರವಾರ ನಗರದ ಸಾಹಿತ್ಯ ಭವನದಲ್ಲಿ ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿದರು.

12ನೇ ಶತಮಾನಕ್ಕೂ ಪೂರ್ವದಲ್ಲಿ ಈ ನಾಡಿನಲ್ಲಿ ಮೌಢ್ಯತೆ,ರಾಜ್ಯಪ್ರಭುತ್ವದೊಳಗೆ ಗುಲಾಮಗಿರಿಯ ಅಟ್ಟಹಾಸ ನಡೆದಿತ್ತು. ಜಾತಿ ವ್ಯವಸ್ಥೆಯು ತುಂಬಿ ತುಳುಕಿ ಜನರು ಶೋಷಣೆಗೆ ಒಳಗಾಗಿದ್ದರು. ಇಂತಹ ಸಂದರ್ಭದಲ್ಲಿ 12ನೇ ಶತಮಾನದ ಬಸವಾದಿ ಶರಣರ ಹೋರಾಟದಿಂದ ಕಲ್ಯಾಣ ಕ್ರಾಂತಿ ಉಘಮವಾಯಿತು. ಈ ಹೋರಾಟವು ಪ್ರಪಂಚದ ಅತೀದೊಡ್ಡಕಲ್ಯಾಣಕ್ರಾಂತಿಯಾಗಿದೆ. ಸಮಾಜದ ಸುಧಾರಣೆಯ ಪ್ರತಿಫಲವಾಗಿ ವಚನ ಸಾಹಿತ್ಯ ಹುಟ್ಟಿಕೊಂಡಿತು. ಅನೇಕ ಶರಣರು ತಮ್ಮ ವಚನಗಳ ಮೂಲಕ ಸಮಾಜಕ್ಕೆ ಬೆಳಕನ್ನು ನೀಡಿದ್ದಾರೆ. ಅಂತಹ ಮಹನೀಯರುಗಳಲ್ಲಿ ಬಸವಣ್ಣನವರ ಅನುಭವ ಮಂಟಪದಲ್ಲಿ ವಿಶಿಷ್ಟ ವಚನಕಾರರಾಗಿ ರೂಪುಗೊಂಡವರು ಮಹಾನ್ ಶರಣ ಶಿವಯೋಗಿ ಸಿದ್ಧರಾಮೇಶ್ವರರು ಎಂದರು.

ಕ್ರಾಂತಿಕಾರಿ ಧೋರಣೆಗಳಿಂದ ಸಮಾಜ ತಿದ್ದುವ ಕಾರ್ಯ ಮಾಡುವುದರ ಜೊತೆಗೆ ಸಮಾಜ ಮುಖಿ ಕಾಯಕ ಮಾಡುವುದರ ಮೂಲಕ ಕಾಯಕ ಯೋಗಿ ಎನಿಸಿಕೊಂಡವರು ಶಿವಯೋಗಿ ಸಿದ್ಧರಾಮೇಶ್ವರರು. ಅವರ ಬದುಕಿನ ಚಿಂತನೆಗಳನ್ನು ನಾವು ತಿಳಿದುಕೊಳ್ಳಬೇಕು ಮತ್ತು ಇತರರಿಗೂ ತಿಳಿಸಬೇಕು. ಈ ಹಿನ್ನೆಲೆಯಲ್ಲಿ ಜಯಂತಿ ಕಾರ್ಯಕ್ರಮಗಳನ್ನು ಸರ್ಕಾರದಿಂದ ಆಚರಣೆ ಮಾಡಲಾಗುತ್ತದೆ. ಶರಣರು ಯಾವುದೇ ಒಂದು ಜಾತಿ, ಸಮುದಾಯಕ್ಕೆ ಸಿಮೀತವಾಗಿರದೆ,ಸಮಸ್ತಮಾನವ ಕುಲಕ್ಕೆ ಆದರ್ಶವಾಗಿದ್ದಾರೆ. ಮಹನೀಯರ ಜಯಂತಿ ಆಚರಣೆಯ ಜೊತೆಗೆ, ಅವರ ತತ್ವಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಜಯಂತಿ ಆಚರಣೆಯು ಜಾಗೃತಿ ಕಾರ್ಯಕ್ರಮಗಳಾಗಬೇಕು. ಅಂದಾಗ ಇಂತಹ ಕಾರ್ಯಕ್ರಮಗಳಿಗೆ ನಿಜವಾಗಿಯೂ ಅರ್ಥ ಬರುತ್ತದೆ ಎಂದು ಹೇಳಿದರು.

ಭೋವಿ ಸಮಾಜದ ಕೊಪ್ಪಳ ಜಿಲ್ಲಾಧ್ಯಕ್ಷರಾದ ಸುಂಕಪ್ಪ ಮಾಲಗಿತ್ತಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ, ಸಮಾಜದ ಮುಖಂಡರಾದ ಮಾಸ್ತೆಪ್ಪ ಕಟ್ಟಿಮನಿ, ರಾಮಣ್ಣ ಪೂಜಾರ,ರಮೇಶ ಬಸಾಪಟ್ಟಣ, ರಾಮಣ್ಣ ಅಳವಂಡಿ, ಉಚ್ಚಪ್ಪ ಭೋವಿ, ಎಕಪ್ಪ ರ್‍ಯಾವಣಕಿ, ಲಕ್ಷ್ಮಣ ಪೂಜಾರ, ಹೊನ್ನಪ್ಪ ಭೋವಿ,ದುರ್ಗಪ್ಪ ಮ್ಯಾಗೇರಿ, ರಾಮು ಹಾಗೂ ಹಲವು ಮುಖಂಡರು ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

*ಸಿದ್ರಾಮೇಶ್ವರರ ಭಾವಚಿತ್ರಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಪುಷ್ಪಾರ್ಚನೆ:* ಕೊಪ್ಪಳ ಜಿಲ್ಲಾ ಪ್ರವಾಸದಲ್ಲಿದ್ದ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್ ತಂಗಡಗಿ ಅವರು ಶಿವಯೋಗಿ ಸಿದ್ರಾಮೇಶ್ವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವು ಮೂಲಕ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ,ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ್,ಮಾಜಿ ಸಂಸದರಾದ ಕರಡಿ ಸಂಗಣ್ಣ ಹಾಗೂ ಇತರೆ ಜನಪ್ರತಿನಿಧಿಗಳು, ಅಧಿಕಾರಿಗಳು ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಸ್ಮರಣಾರ್ಥ ಮೌನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.31: ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಸ್ಮರಣಾರ್ಥ ಜಿಲ್ಲಾಡಳಿತದ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಮೌನಾಚರಣೆ ಮೂಲಕ ಹುತಾತ್ಮರಾದವರಿಗೆ ಗೌರವ ಸಲ್ಲಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ನಲಿನ್ ಅತುಲ್,ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ,ಜಿಲ್ಲಾ ತರಬೇತಿ ಕೇಂದ್ರದ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ,ಪಶು ಇಲಾಖೆ ಉಪನಿರ್ದೇಶಕ ಡಾ ಪಿ.ಎಂ.ಮಲ್ಲಯ್ಯ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ ನಂದಕುಮಾರ ಸೇರಿದಂತೆ ಜಿಲ್ಲಾಧಿಕಾರಿ ಕಛೇರಿ ಹಾಗೂ ಜಿಲ್ಲಾಮಟ್ಟದ ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# 5 ರಂದು ಕೊಪ್ಪಳದಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಜ.31: ಕೊಪ್ಪಳ ಜೆಸ್ಕಾಂನಿಂದ ಇ.ಎಚ್.ಟಿ.,ಹೆಚ್.ಟಿ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆಯನ್ನು ಫೆಬ್ರವರಿ 5 ರಂದು ಬೆಳಗ್ಗೆ 10.30 ಗಂಟೆಗೆ ನಗರದ ಕಾರ್ಯ ಮತ್ತು ಪಾಲನಾ ವಿಭಾಗ ಕಚೇರಿಯಲ್ಲಿ ಆಯೋಜಿಸಲಾಗಿದೆ. ಸಭೆಯ ಅಧ್ಯಕ್ಷತೆಯನ್ನು ಕೊಪ್ಪಳ ಜೆಸ್ಕಾಂ ಕಾರ್ಯ ಮತ್ತು ಪಾಲನಾ ವೃತ್ತ ಕಚೇರಿಯ ಅಧೀಕ್ಷಕ ಅಭಿಯಂತರರು ವಹಿಸುವರು. ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಇ.ಹೆಚ್.ಟಿ., ಹೆಚ್.ಟಿ ವಿದ್ಯುತ್ ಗ್ರಾಹಕರು ಈ ಸಭೆಗೆ ಹಾಜರಾಗಬೇಕು ಎಂದು ಕೊಪ್ಪಳ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಕೊಪ್ಪಳ ವೃತ್ತ ಕಚೇರಿಯ ಪ್ರಕಟಣೆ ತಿಳಿಸಿದೆ.

# ಡಾ.ಶಿವಕುಮಾರ ಸ್ವಾಮೀಜಿ ಅವರ ದಾಸೋಹ ತತ್ವ ವಿಶ್ವಕ್ಕೆ ಮಾದರಿ



ಸಿದ್ಧಗಂಗಾ ಮಠದಲ್ಲಿ ಕಲಿತ ಹಳೆಯ ವಿದ್ಯಾರ್ಥಿಗಳು ಸಂಘವನ್ನು ಕಟ್ಟಿಕೊಂಡು ಪೂಜ್ಯರ ಪುಣ್ಯಸ್ಮರಣೆ ನಿಮಿತ್ತ ದಾಸೋಹ ಏರ್ಪಡಿಸಿ ಮಠದ ಋಣ ತೀರಿಸುವ ಪ್ರಯತ್ನ ಮಾಡುತ್ತಿರುವುದು ಸಂತಸದ ಸಂಗತಿ.
– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.31:ಸಿದ್ಧಗಂಗಾ ಮಠದ ಶತಾಯಷಿ ಡಾ.ಶಿವಕುಮಾರ ಸ್ವಾಮೀಜಿ ಅವರ ದಾಸೋಹ ತತ್ವ ವಿಶ್ವಕ್ಕೆ ಮಾದರಿಯಾಗಿದೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ಪಟ್ಟಣದ ಮಹಾತ್ಮ ಗಾಂಧಿ ವೃತ್ತದಲ್ಲಿ ಸಿದ್ಧಗಂಗಾ ಮಠದ ಹಳೆಯ ವಿದ್ಯಾರ್ಥಿ ಮತ್ತು ಹಿತೈಷಿಗಳ ಸಂಘ ಭಾಲ್ಕಿ ವತಿಯಿಂದ ಶತಾಯಷಿ ಡಾ.ಶಿವಕುಮಾರ ಸ್ವಾಮೀಜಿ ಅವರ 6ನೆಯ ಪುಣ್ಯಸ್ಮರಣೆ ನಿಮಿತ್ತ ಶುಕ್ರವಾರ ಆಯೋಜಿಸಿದ್ದ ದಾಸೋಹ ದಿನ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಶತಾಯಷಿ ಡಾ.ಶಿವಕುಮಾರ ಸ್ವಾಮೀಜಿ ಅವರು ತಮ್ಮ ಜೀವಿತಾವಧಿಯಲ್ಲಿ ಅನೇಕ ವಿಧಾಯಕ ಕಾರ್ಯಗಳ ಮೂಲಕ ನಾಡು ಬೆಳಗಿಸುವ ಕೆಲಸ ಮಾಡಿದ್ದಾರೆ.

ಮಠದಲ್ಲಿ ಏನು ಇಲ್ಲದ ಸಂದರ್ಭದಲ್ಲಿ ಭಕ್ತರಿಂದ&; ದಾಸೋಹವನ್ನು ಸಂಗ್ರಹಿಸಿ ರಾಜ್ಯದ ಬಡಮಕ್ಕಳು,ನಿರ್ಗತಿಕರು, ದುರ್ಬಲ ವರ್ಗದವರಿಗೆ ಅನ್ನ, ಅಕ್ಷರ, ಆಶ್ರಯ ಕಲ್ಪಿಸಿರುವುದು ನಮ್ಮೆಲ್ಲರಿಗೂ ಮಾದರಿಯಾಗಿ ನಿಲ್ಲುತ್ತದೆ. ಒಂದು ಸರಕಾರ ಮಾಡಬಹುದಾದ ಕೆಲಸ ಕಾರ್ಯಗಳನ್ನು ಸಿದ್ಧಗಂಗಾ ಮಠದ ಮೂಲಕ ಪೂಜ್ಯರು ಮಾಡಿ ತೋರಿಸಿರುವುದು ಹೆಮ್ಮೆಯ ಸಂಗತಿ. ಅಂತಹ ಪೂಜ್ಯರ ಆದರ್ಶ, ದಾಸೋಹ ಗುಣವನ್ನು ಇಂದಿನ ಯುವ ಸಮುದಾಯ ನಿಜ ಜೀವನದಲ್ಲಿ ಆಚರಣೆಗೆ ತಂದಾಗ ಜೀವನ ಸಾರ್ಥಕ ಆಗುತ್ತದೆ ಎಂದು ತಿಳಿಸಿದರು.

ಮೇಹಕರ್–ತಡೋಳಾ ಶ್ರೀಮಠದ ರಾಜೇಶ್ವರ ಶಿವಾಚಾರ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿದ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್ ಮಾತನಾಡಿ, ಸಿದ್ಧಗಂಗಾ ಮಠದ ಶತಾಯಷಿ ಡಾ.ಶಿವಕುಮಾರ ಸ್ವಾಮೀಜಿ ಜೀವನ ಮತ್ತು ಸಾಧನೆಯನ್ನು ಎಲ್ಲರೂ ತಿಳಿದುಕೊಂಡು ಅವರು ನೀಡಿರುವ ಸಂದೇಶ ಎಲ್ಲರೂ ಆಚರಣೆಗೆ ತರುವ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ಮಾತನಾಡಿ, ಸಿದ್ಧಗಂಗಾ ಮಠದಲ್ಲಿ ಪ್ರತಿದಿನ ಹತ್ತಾರೂ ಸಾವಿರ ಮಕ್ಕಳಿಗೆ ಉಚಿತ ಅನ್ನದಾಸೋಹ ಕಲ್ಪಿಸುತ್ತಿರುವುದು ಹೆಮ್ಮೆಯ ಸಂಗತಿ. ಪೂಜ್ಯರ ಕಾಯಕ ಮತ್ತು ದಾಸೋಹ ತತ್ವ ಸದಾಕಾಲಕ್ಕೂ ಪ್ರೇರಣೆಯಾಗಿ ನಿಲ್ಲುತ್ತವೆ ಎಂದು ತಿಳಿಸಿದರು. ತಾಲೂಕು ವಚನ ಸಾಹಿತ್ಯ ಪರಿಷತ್ತು ಅಧ್ಯಕ್ಷ ಗುಂಡಪ್ಪ ಸಂಗಮಕರ್ ಮಾತನಾಡಿದರು. ಸಿದ್ಧಗಂಗಾ ಮಠದ ಹಳೆಯ ವಿದ್ಯಾರ್ಥಿ ಮತ್ತು ಹಿತೈಷಿಗಳ ಸಂಘದ ಜಿಲ್ಲಾಧ್ಯಕ್ಷ ಶಿವಕುಮಾರ ಪಾಟೀಲ್ ತೇಗಂಪೂರ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಸಿದ್ಧಗಂಗಾ ಮಠದ ಹಳೆಯ ವಿದ್ಯಾರ್ಥಿ ಸಂಘದ ತಾಲೂಕು ಅಧ್ಯಕ್ಷ ಸೋಮನಾಥ ತುಗಶೆಟ್ಟೆ, ಪ್ರಮುಖರಾದ ಈಶ್ವರ ರುಮ್ಮಾ, ಚಂದ್ರಕಾಂತ ಫುಲೆ, ಬ್ರಿಜಪಾಲಸಿಂಗ ಠಾಕೂರ್, ಅಮರ ಹರಪಳ್ಳೆ, ಅರವಿಂದ ಕುಲಕರ್ಣಿ, ಓಂಕಾರ ವಗ್ಗೆ, ವಿಜಯ ವಾಲೆ, ಸಿದ್ದು ಉಮ್ಮರಗೆ, ವೀರೇಶ ಚೀಲಶೆಟ್ಟೆ, ಲೋಕೇಶ ಭೂರೆ, ಆಕಾಶ ರೆಡ್ಡಿ, ಡಿಗಂಬರ ಫಾರ್ಗೆ ಸೇರಿದಂತೆ ಹಲವರು ಇದ್ದರು. ದೀಪಕ ಠಮಕೆ ನಿರೂಪಿಸಿ ವಂದಿಸಿದರು.

# ಆರೋಗ್ಯ ಶಿಬಿರಗಳು ಬಡವರಿಗೆ ಅನುಕೂಲ : ಮಹಾಂತಯ್ಯನಮಠ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.31: ಕುಕನೂರ ಉಚಿತವಾಗಿ ನಡೆಯುವ ಆರೋಗ್ಯ ಶಿಬಿರಗಳು ಜನ ಸಾಮಾನ್ಯರಿಗೆ ಅನುಕೂಲವಾಗುತ್ತವೆ ಎಂದು ಕೊಪ್ಪಳದ ಉದ್ಯಮಿ ಶರಣಯ್ಯ ಮಹಾಂತಯ್ಯನಮಠ ಹೇಳಿದರು.

ಅವರು ಕುಕನೂರ ಪಟ್ಟಣದ ಅನ್ನದಾನೀಶ್ವರ ಶಾಖಾಮಠದಲ್ಲಿ ಶ್ರೀ ಮಠದ ಪೂಜ್ಯರ 2ನೇ ವರ್ಷದ ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ಬಸವ ಅಕ್ಯು ಅಕಾಡೆಮಿ ವತಿಯಿಂದ ನಡೆದ ಉಚಿತ ಆರೋಗ್ಯ ಶಿಬಿರ ಉದ್ಘಾಟಿಸಿ ಮಾತನಾಡುತ್ತಾ ಈ ನಾಡಿನ ಮಠ ಮಾನ್ಯಗಳು ಸಾಮಾಜಿಕವಾಗಿ,ಧಾರ್ಮಿಕವಾಗಿ ಮತ್ತು ಶೈಕ್ಷಣಿಕವಾಗಿ ಸಾಕಷ್ಟು ಸೇವೆ ಮಾಡುತ್ತಾ ಬರುತ್ತೀವೆ, ಮಠಗಳಿಗೆ ಭಕ್ತರ ಕಲ್ಯಾಣವೇ ಮುಖ್ಯ ಆದ್ದರಿಂದ ಮಠ ಮಾನ್ಯಗಳಿಗೆ ಉಳ್ಳವರು ಸಹಾಯ ಸಹಕಾರ ನೀಡಬೇಕು ಎಂದರು. ನಂತರ ಮಾತನಾಡಿದ ಶ್ರೀಮಠದ ಕಾರ್ಯದರ್ಶಿ ಗದಿಗೆಪ್ಪ ಪವಾಡಶೆಟ್ಟಿ ನಮ್ಮ ಶ್ರೀಮಠ ಹಲವಾರು ಕಾರ್ಯಕ್ರಮಗಳನ್ನ ಪೂಜ್ಯರ 2ನೇ ವರ್ಷದ ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ಹಮ್ಮಿಕೊಂಡಿದೆ ಇದಕ್ಕೆಲ್ಲ ಭಕ್ತರ ಸಹಕಾರ ದೊಡ್ಡದು, ಪೂಜ್ಯರ ಮಾರ್ಗದರ್ಶನದಲ್ಲಿ ಭಕ್ತರ ಕಾಣಿಕೆಯಿಂದ ಶ್ರೀಮಠ ಅಭಿವೃದ್ಧಿಗೊಳ್ಳುತ್ತಿದೆ ಎಂದರು.

ಕೊಪ್ಪಳದ ಉದ್ಯಮಿ ಶರಣಯ್ಯ ಮಹಾಂತಯ್ಯನಮಠ ಅವರನ್ನ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ವೀರಯ್ಯ ತೋಂಟದಾರ್ಯ ಮಠ, ದೇವಪ್ಪ ಸೋಬಾನದ, ಲಕ್ಷ್ಮಣ ಕಾಳಿ, ಬಸಪ್ಪ ಬಂಗಿ, ಶರಣಪ್ಪ ಗುತ್ತಿ, ಸಂಗಮೇಶ ಕಲ್ಮಠ , ಬಸವರಾಜ ಈಬೇರಿ, ಶಶಿದರ ಬಿ ಮತ್ತು ಬಸವ ಅಕ್ಯು ಅಕಾಡೆಮಿ ಸದಸ್ಯರು ಇದ್ದರು.

# ಖಾಲಿಯಿರುವ ಶಿಕ್ಷಕರ ಹುದ್ದೆ ಭರ್ತಿಗೆ ಆದ್ಯತೆ ಇರಲಿ: ನಮೋಶಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.31: ಎಸ್ಎಸ್ಎಲ್ಸಿ ಫಲಿತಾಂಶ ಸುಧಾರಣೆಯಾಗಲು ಸರ್ಕಾರ ಕಲ್ಯಾಣ ಕರ್ನಾಟಕ ಭಾಗದಲ್ಲಿಯ ಖಾಲಿ ಇರುವ ಹುದ್ದೆಗಳ ಭರ್ತಿಗೆ ಆದ್ಯತೆ ನೀಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಶಶೀಲ.ಜಿ.ನಮೋಸಿ ಹೇಳಿದರು.

ಪಟ್ಟಣದ ಪುರಭವನದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗು ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ತಾಲೂಕು ಘಟಕದ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಆಯೋಜಿಸಿದ್ದ ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ಸುಧಾರಣಾ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಆರ್ಟಿಕಲ್ 371ಜೆ ಪ್ರಕಾರ ಕಲ್ಯಾಣ ಕರ್ನಾಟಕ ಭಾಗಕ್ಕೆ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಆರ್ಥಿಕ ಇಲಾಖೆಯ ಅನುಮತಿ ಬೇಕಿಲ್ಲ. ಆದರೆ ಸರ್ಕಾರ 371ಜೆ ಅನುಸಂಧಾನ ಸರಿಯಾಗಿ ಜಾರಿಮಾಡುತ್ತಿಲ್ಲ. 371ಜೆ ರೂಲ್ಸಗಳಲ್ಲಿ ತುಂಬಾ ಗೊಂದಲಗಳಿವೆ. ಈ ಗೊಂದಲೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಸಾಕಷ್ಟು ಪ್ರಯತ್ನ ಮಾಡಿ 371ಜೆ ಗೆ 2023 ರ ಫೆ.2 ರಂದು ಹೊಸ ರೂಲ್ಸಗಳನ್ನು ಸೇರಿಸಲಾಗಿದೆ. ಇದರ ಪರಿಣಾಮವಾಗಿ ಇಲ್ಲಿಯ ಶಿಕ್ಷಕರ ಬಡ್ತಿಯಲ್ಲಿ ಸಹಕಾರ ವಾಗುವುದು ಎಂದು ಹೇಳಿದರು.

ಉಪನಿರ್ದೇಶಕ ಸಲೀಂ ಪಾಷಾ ಮಾತನಾಡಿ, ಎಸ್.ಎಸ್.ಎಲ್.ಸಿ ಫಲಿತಾಂಶ ಉತ್ತಮ ಪಡಿಸುವ ನಿಟ್ಟಿನಲ್ಲಿ ಶಿಕ್ಷಕರು, ಮುಖ್ಯ ಶಿಕ್ಷಕರು ಹೆಚ್ಚಿನ ಶ್ರಮಪಡಬೇಕು ಎಂದು ಹೇಳಿದರು. ಎಸ್ಎಸ್ಎಲ್ಸಿ ನೋಡಲ್ ಅಧಿಕಾರಿ ಸಯ್ಯದ್ ಫುರಕಾನ್ ಪಾಶಾ ಮಾತನಾಡಿ, ಮುಖ್ಯ ಶಿಕ್ಷಕರ ಮತ್ತು ಸಹಶಿಕ್ಷಕರ ನಡುವೆ ಉತ್ತಮ ಹೊಂದಾಣಿಕೆ ಇದ್ದರೆ ಶಾಲೆಯ ವ್ಯವಸ್ಥೆ ಸರಿಯಾಗಿರುತ್ತದೆ. ಹೀಗಾಗಿ ಶಿಕ್ಷಕರು ಮತ್ತು ಮುಖ್ಯಶಿಕ್ಷಕರು ಸಮನ್ವಯದಿಂದ ಕಾರ್ಯನಿರ್ವಹಿಸಿ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಸಹಕರಿಸಬೇಕು ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಮನೋಹರ ಹೊಳಕರ, ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ರಾಜಕುಮಾರ ಜೊಳದಪಕೆ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಶೇಖ್ ಮಹಬೂಬ್ ಪಟೇಲ, ಜಿಲ್ಲಾ ಕಾರ್ಯದರ್ಶಿ ಜೀತೇಂದ್ರ ಬಿರಾದಾರ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ದತ್ತಾತ್ರಿ ಕಾಟಕರ, ಕಾರ್ಯದರ್ಶಿ ಬಾಲಾಜಿ ಕಾಂಬಳೆ, ದಿಲೀಪಕುಮಾರ ಬಿರಾದಾರ, ಸಂಘದ ನಿರ್ದೇಶಕಿ ಪುಷ್ಪಾವತಿ ಚಕುರ್ತೆ, ಇಸಿಓ ಮಲ್ಲಿಕಾರ್ಜುನ ಕನ್ನಾಳೆ, ಸಹದೇವ.ಜಿ,ಬಿಆರ್‌ಪಿ ಚೇತನಾ ಚನಶೆಟ್ಟಿ ಉಪಸ್ಥಿತರಿದ್ದರು.

ಸಹದೇವ ಗೌಡಗಾವೆ ಸ್ವಾಗತಿಸಿದರು. ರಾಜಕುಮಾರ ಬರಸೂರೆ ನಿರೂಪಿಸಿದರು. ದತ್ತು ಕಾಟಕರ ವಂದಿಸಿದರು.

ಪ್ರಾಥಮಿಕ,ಮತ್ತುಪೂರ್ವಪ್ರಾಥಮಿಕ ಹಂತದಲ್ಲಿಯ ಶಿಕ್ಷಣ ವ್ಯವಸ್ಥೆ ಸರಿಪಡಿಸಿದಾಗ ಮಾತ್ರ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಫಲಿತಾಂಶ ಉತ್ತಮ ಪಡಿಸಲು ಸಾಧ್ಯ. ಪ್ರಾಥಮಿಕ ಶಿಕ್ಷಣಕ್ಕೆ ಉತ್ತಮ ಮೇಲ್ವಿಚಾರಣೆ ನಡೆಸಿ ಅಲ್ಲಿಯ ಶಿಕ್ಷಣ ಪದ್ಧತಿ ಉತ್ತಮ ಪಡಿಸುವ ನಿಟ್ಟಿನಲ್ಲಿ ಎಲ್ಲರೂ ಶ್ರಮಪಡಬೇಕು.

– ಶಶೀಲ.ಜಿ.ನಮೋಶಿ, ವಿಧಾನ ಪರಿಷತ ಸದಸ್ಯರು.

# ಸೌಹಾರ್ದ ಭಾರತಕ್ಕಾಗಿ ಸಂಕಲ್ಪ ದಿನ



ಮಲ್ಲಮ್ಮ ನುಡಿ ಶಹಪುರ್:ಜ.31: ಇತ್ತೀಚಿನ ವರ್ಷಗಳಲ್ಲಿ ನಮ್ಮ ದೇಶದಲ್ಲಿ ವಿಜೃಂಭಿಸುತ್ತಿರುವ ಧಾರ್ಮಿಕ ಮೂಲಭೂತವಾದವು ದ್ವೇಷೋತ್ಪಾದನೆಯ ಸಾಧನವಾಗುತ್ತಿದೆ. ಅನೇಕರು ತಮ್ಮ ನಡೆ–ನುಡಿಗಳಲ್ಲಿ ಹಿಂಸಾರೂಪಿಗಳಾಗುತ್ತಿರುವುದು ಆತಂಕವುಂಟು ಮಾಡುತ್ತಿದೆ. ಮತ್ತು ಧರ್ಮದ ದುರಪಯೋಗ ಮಾಡಿಕೊಳ್ಳುವುದನ್ನೇ ಹುಸಿ ಕರ್ತವ್ಯವಾಗಿಸಿಕೊಂಡಿದ್ದು, ಕೆಲವರು ದೇಶವನ್ನು ಒಡೆಯುತ್ತಿದ್ದಾರೆ ಎಂದು ರೈತ ಮುಖಂಡ ಚೆನ್ನಪ್ಪ ಆನೇಗುಂದಿ ಅಸಮಾಧಾನ ವ್ಯಕ್ತಪಡಿಸಿದರು. ನಗರದ ಬಸವೇಶ್ವರ ವೃತ್ತದಲ್ಲಿ ಸೌಹಾರ್ದ ಸಂಘಟನೆಯ ಮಹಾತ್ಮ–ಹುತಾತ್ಮ ಸೌಹಾರ್ದ ಸಂಕಲ್ಪ ದಿನ, ಸೌಹಾರ್ದ ಗೀತೆಗಳ ಗಾಯನ ಪ್ರತಿಜ್ಞೆ ಸ್ವೀಕಾರ ಹಿನ್ನಲೆಯಲ್ಲಿ ಮಾತನಾಡಿದ ಅವರು, ಇತ್ತೀಚಿನ ಕೆಲವು ಸಾಮಾಜಿಕ ಬೆಳವಣಿಗೆಗಳನ್ನು ಗಮನಿಸಿದರೆ ಭಾರತೀಯ ಸಮಾಜದಲ್ಲಿ ಹಿಂಸೆ ಮತ್ತು ಕ್ರೌರ್ಯ ಒಂದು ವ್ಯಾಧಿಯಂತೆ ಹರಡುತ್ತಿರುವುದು ಸ್ಪಷ್ಟವಾಗುತ್ತದೆ. ಇದು ಸಾಂಸ್ಕೃತಿಕವಾಗಿ ವ್ಯಸನವಾಗಿ ಪರಿಣಮಿಸುತ್ತಿದೆ. ಗಾಂಧಿ ಹತ್ಯೆ ಸಮಕಾಲೀನ ಭಾರತದ ಒಂದು ಕರಾಳ ಗಳಿಗೆಯ ದುರ್ಘಟನೆ ಎಂದು ವಿಷಾಧ ವ್ಯಕ್ತಪಡಿಸಿದರು. ಮನುಷ್ಯ ಮನುಷ್ಯರಲ್ಲಿ ಬೇಧಬಾವ ಮಾಡುವುದನ್ನು ನಿಲ್ಲಬೇಕು. ಮಾನವ ಕುಲ ಒಂದು ಎನ್ನುವ ನೀತಿಯನ್ನು ಇಂದು ಎಲ್ಲರೂ ಅನುಸರಿಬೇಕು. ಸತ್ಯದ ಹಾದಿಯಲ್ಲೇ ನಡೆದು ಅಂತಿಮ ಕ್ಷಣದವರೆಗೂ ಸತ್ಯವನ್ನೇ

ಪ್ರಮಾಣೀಕರಿಸಿ ಅಹಿಂಸಾತ್ಮ ಸೌಹರ್ದತೆಗಾಗಿ ಬದುಕಿದ ಮಹಾತ್ಮ ಗಾಂಧಿ, ದ್ವೇಷಾಸೂಯೆ ಮತ್ತು ಕೋಮು ರಾಜಕಾರಣಕ್ಕೆ ಬಲಿಯಾಗಿದ್ದು ಸಮಕಾಲೀಕ ಭಾರತದ

ದುರಂತಗಳಲ್ಲೊಂದು ಎಂದರು.

# ಅಕ್ರಮ ಅಕ್ಕಿ ಸಾಗಣೆ ಮಾಡುತ್ತಿರುವ 6 ಆರೋಪಿಗಳ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜ.31:ತಾಲೂಕಿನ ಮಹಾರಾಷ್ಟ್ರಗಡಿ ಚೆಕಪೋಸ್ಟನಲ್ಲಿ ಅಕ್ರಮವಾಗಿ ಅಕ್ಕಿ ಸಾಗಣೆ ಮಾಡುತ್ತಿರುವ ಆರೋಪಿಗಳನ್ನು ಗುರುವಾರ ಎರಡೂ ಬೇರೆ ಸ್ಥಳದಲ್ಲಿ ಒಟ್ಟು 6 ಜನ ಆರೋಪಿ ಮತ್ತು ಮಾಲು ಸಮೇತ ಯಶಸ್ವಿಯಾಗಿ ಹಿಡಿಯಲಾಗಿದೆ.

ಸಿ.ಪಿ.ಐ ತಂಡ ಕಾರ್ಯಾಚರಣೆ: ಅಪರಪ್ಪ ಶಿವಬಲ ಪೊಲೀಸ ವೃತ್ತ ನಿರೀಕ್ಷಕರು ಕಮಲನಗರ ಹಾಗೂ ಶ್ರೀ ರವಿ ಸುರ್ಯವಂಶಿ ಆಹಾರ ಶಿರಸ್ಥೆದಾರರು ತಹಸಿಲ ಕಛೇರಿ ಔರಾದ (ಬಿ) ಮತ್ತು ಸಿಬ್ಬಂದಿಯವರಾದ ಲೋಕೇಶ ಸಿ.ಹೆಚ್.ಸಿ–915 ಮತ್ತು ಸಂತೋಷಕುಮಾರ ಸಿಪಿಸಿ–1290, ಪರಶುರಾಮ ಸಿಪಿಸಿ 1736, ನಾಗನಾಥ ಸಿಪಿಸಿ–1014 ರವರುಗಳು ಜಂಟಿಯಾಗಿ ದಾಳಿ ಮಾಡಿ ಸಾರ್ವಜನಿಕರಿಗೆ ಹಾಗೂ ವಿವಿಧ ಇಲಾಖೆಗಳಿಗೆ ಸರಬರಾಜು ಮಾಡುವ ಪಿ.ಡಿ.ಎಸ್ ಅಕ್ಕಿಯನ್ನು ಅಕ್ರಮವಾಗಿ ಸಾಗಾಣಿಕೆ ಮಾಡುತಿದ್ದ 3 ಜನ ಆರೋಪಿತರ ಮೇಲೆ ದಾಳಿ ಮಾಡಿ ಅಂದಾಜು 78,200/– ರೂ. ಮೌಲ್ಯದ 23 ಕ್ವಿಂಟಲ್ ಅಕ್ಕಿಯನ್ನು ಹಾಗೂ 4 ಲಕ್ಷ ರೂ. ಮೌಲ್ಯದ ಒಂದು ಅಶೋಕ ಲೈಲಾಂಡ್ ಗೂಡ್ಸ್ ವಾಹನವನ್ನು ವಶಕ್ಕೆ ಪಡೆದು ಕೊಂಡಿದ್ದಾರೆ.

ಪಿ.ಎಸ್.ಐ ತಂಡ ಕಾರ್ಯಾಚರಣೆ: ಚಂದ್ರಶೇಖರ ಪಿ.ಎಸ್.ಐ ಕಮಲನಗರ ಪೊಲೀಸ ಠಾಣೆ ಹಾಗೂ ಶ್ರೀ ರವಿ ಸುರ್ಯವಂಶಿ ಆಹಾರ ಶಿರಸ್ಥೆದಾರರು ತಹಸಿಲ ಕಛೇರಿ ಔರಾದ (ಬಿ) ಮತ್ತು ಸಿಬ್ಬಂದಿಯವರಾದ ಲೋಕೇಶ ಸಿ.ಹೆಚ್.ಸಿ–915 ಮತ್ತು ಸಂತೋಷಕುಮಾರ ಸಿಪಿಸಿ–1290, ಪರಶುರಾಮ ಸಿಪಿಸಿ 1736, ನಾಗನಾಥ ಸಿಪಿಸಿ–1014 ಹಾಗೂ ವೈಜಿನಾಥ ಸಿಪಿಸಿ–1332 ರವರುಗಳು ಜಂಟಿಯಾಗಿ ದಾಳಿ ಮಾಡಿ ಸಾರ್ವಜನಿಕರಿಗೆ ಹಾಗೂ ವಿವಿಧ ಇಲಾಖೆಗಳಿಗೆ ಸರಬರಾಜು ಮಾಡುವ ಪಿ.ಡಿ.ಎಸ್ ಅಕ್ಕಿಯನ್ನು ಅಕ್ರಮವಾಗಿ ಸಾಗಾಣಿಕೆ ಮಾಡುತಿದ್ದ 3 ಜನ ಆರೋಪಿತರ ಮೇಲೆ ದಾಳಿ ಮಾಡಿ ಅಂದಾಜು 57,800/–ರೂ. ಮೌಲ್ಯದ 17 ಕ್ವಿಂಟಲ್ ಅಕ್ಕಿಯನ್ನು ಹಾಗೂ 8 ಲಕ್ಷ ರೂ. ಮೌಲ್ಯದ ಒಂದು ಟೆಂಪೊ ಗೂಡ್ಸ್ ವಾಹನವನ್ನು ವಶಕ್ಕೆ ಪಡೆದು ಪ್ರತ್ಯೇಕವಾಗಿ ಎರಡು ಪ್ರಕರಣಗಳನ್ನು ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

ಈ ಉಭಯ ದಾಳಿಗಳಲ್ಲಿ ಯಶಸ್ವಿಯಾದ ಅಧಿಕಾರಿ ಹಾಗೂ ಸಿಬ್ಬಂದಿಯವರ ಕಾರ್ಯವನ್ನು ಪೊಲೀಸ ಅಧೀಕ್ಷಕರು ಬೀದರ ಮತ್ತು ಹೆಚ್ಚುವರಿ ಪೊಲೀಸ ಅಧೀಕ್ಷಕರು ಬೀದರ ರವರ ನಿರ್ದೇಶನದಂತೆ.ಶ್ರೀ ಶಿವಾನಂದ ಪವಾಡಶೆಟ್ಟಿ ಮಾನ್ಯ ಪೊಲೀಸ ಉಪಾಧೀಕ್ಷಕರು ಭಾಲ್ಕಿ ಉಪ ವಿಭಾಗ ಶ್ಲಾಘಿಸಿದ್ದಾರೆ.

# ಬ್ಯಾಂಕ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಿ:ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.31– ಬ್ಯಾಂಕುಗಳ ಅಭಿವೃದ್ಧಿಗೆ ಗ್ರಾಹಕರ ಸಹಕಾರ ಮುಖ್ಯವಾಗಿದೆ. ಗ್ರಾಹಕರು ಬ್ಯಾಂಕ ನೀಡುವ ಅತ್ಯುತ್ತಮ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮಾಜಿ ಶಾಸಕ, ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದರು.

ನಗರದ ಬಿ.ವಿ.ವಿ.ಸಂಘದ ವಾಣಿಜ್ಯ ಮಳಿಗೆಯಲ್ಲಿ ಇಸಾಫ ಸ್ಮಾಲ್ ಫೈನಾನ್ಸ್ ಬ್ಯಾಂಕಿನ 39ನೇ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಈಚಿನ ದಿನಗಳಲ್ಲಿ ಬ್ಯಾಂಕಗಳು ಆಧುನಿಕ ಸೌಲಭ್ಯಗಳೊಂದಿಗೆ ಅತ್ಯುತ್ತಮ ಸೇವೆಯನ್ನು ನೀಡುತ್ತಿವೆ. ಠೇವಣಿ ಮಾಡುವರಿಗೆ ಎಷ್ಟು ಮಹತ್ವ ಇರುತ್ತೋ, ಸಾಲ ತೆಗೆದುಕೊಳ್ಳವರಿಗೂ ಅಷ್ಟೇ ಮಹತ್ವ ಇರುತ್ತದೆ ಎಂದರು.

ಸಾಲಸೌಲಭ್ಯಗಳನ್ನು ನೀಡಿ ಗ್ರಾಹಕರ ಆರ್ಥಿಕ ಸ್ಥಿತಿಯನ್ನು ಉತ್ತಮಗೊಳಿಸುವುದರಿಂದ ಬ್ಯಾಂಕಿನ ಅಭಿವೃದ್ಧಿಗೂ ಅದು ಸಹಕಾರಿಯಾಗುತ್ತದೆ.ಬ್ಯಾಂಕಿನ ಸೌಲಭ್ಯಗಳನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಚರಂತಿಮಠ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬ್ಯಾಂಕಿನ ಕ್ಲಸ್ಟರ್ ಹೆಡ್ ಹೇಮಕುಮಾರ ಬಿ.ವಿ, ಬ್ಯಾಂಕು ನಡೆದು ಬಂದ ದಾರಿ ಮತ್ತು ಬ್ಯಾಂಕಿನಿಂದ ಸಾರ್ವಜನಿಕರ ಅನುಕೂಲಕ್ಕಾಗಿರುವ ಸೌಲಭ್ಯಗಳನ್ನು ತಿಳಿಸಿದರು.

ಬಿ.ವಿ.ವಿ.ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ರೀಜಿನಲ್ ಹೆಡ್ ಸ್ವರೂಪ ಎ, ಬ್ರಾಂಚ್ ಬ್ಯಾಂಕಿಂಗ್ ಸೌಥ್ ಹೆಡ್ ರಜೀಶ, ಅಕ್ಕನ ಬಳಗದ ಅಧ್ಯಕ್ಷೆ ನಿರ್ಮಲ ಹಲಕುರ್ಕಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಬಾಗಲಕೋಟೆ ಶಾಖೆಯ ಮ್ಯಾನೇಜರ ಅನಿತಾ ಸ್ಥಾವರಮಠ ಸೇರಿದಂತೆ ಅನೇಕರು ಇದ್ದರು.

# 9.60 ಕೋಟಿ ರೂ. ವೆಚ್ಚದ 9 ಕಾಮಗಾರಿಗಳಿಗೆ ಶಂಕುಸ್ಥಾಪನೆ.

## ಗುಣಮಟ್ಟ ಕಾಮಗಾರಿ ನಿಗದಿತ ಅವಧಿಯೊಳಗೆ ಮುಗಿಸಿ: ಶಾಸಕ ಚನ್ನಾರೆಡ್ಡಿ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ.31:ಗುಣಮಟ್ಟದ ಕಾಮಗಾರಿ ಕೈಗೊಳ್ಳುವ ಮೂಲಕ ನಿಗದಿತ ಅವಧಿಯಲ್ಲಿ ಕೆಲಸ ಮುಗಿಸುವಂತೆಯೇ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಶುಕ್ರವಾರ ಸಂಜೆ ಇಲ್ಲಿನ ಗಾಂಧಿ ಚೌಕ್ ನಲ್ಲಿ ಹಮ್ಮಿಕೊಂಡಿದ್ದ 2024–25ನೇ ಸಾಲಿನ ಕೆಕೆಆರ್ ಡಿಬಿ ಮೈಕ್ರೋ,ಸಿಎಂಡಿಕ್ಯೂ ಯೋಜನೆಯಡಿ ಮಂಜೂರಾದ ಸುಮಾರು 9.60 ಕೋಟಿ ರೂ. ವೆಚ್ಚದ ನಗರಕ್ಕೆ ಸಂಬಂಧಪಟ್ಟ ಒಂಬತ್ತು ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ನಗರದ ಬಹುತೇಕ ವಾರ್ಡಗಳಲ್ಲಿ ಮತ್ತು ಮುಖ್ಯರಸ್ತೆಗಳಲ್ಲಿ ನಡೆಯುವ ರಾಜಕಾಲುವೆ, ಚರಂಡಿ ನಿರ್ಮಾಣ, ರಸ್ತೆ ವಿಭಜಕ, ಇಂಟರ್ ಲಾಕ್ ನಿರ್ಮಾಣ, ಸಿಸಿ ರಸ್ತೆ, ಸ್ಟೋನ್ ಡಿವೈಡರ್ ಅಳವಡಿಸುವ ಕಾಮಗಾರಿಗಳಿಗೆ ಶಾಸಕರು ಚಾಲನೆ ನೀಡಲಾಗಿದ್ದು,

ಎಲ್ಲ ಕೆಲಸಗಳು ಸರಿಯಾಗಿ ಮಾಡುವ ಮೂಲಕ ಜನರಿಗೆ ಅನುಕೂಲ ಮಾಡಿಕೊಡಬೇಕೆಂದರು.

ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ವಿನಾಯಕ ಪಾಟೀಲ್, ಪೌರಾಯುಕ್ತ ಉಮೇಶ ಚವ್ಹಾಣ, ಇಂಜಿನಿಯರ್ ರಜನಿಕಾಂತ ಮತ್ತು ನಗರಸಭೆ ಸದಸ್ಯರು, ಇಲಾಖೆ ಅಧಿಕಾರಿಗಳು ಇದ್ದರು.

# ರಾಯಚೂರಿನಲ್ಲಿ ಶಿಕ್ಷಣ ಭಾಗಿದಾರರ ಸಮಾವೇಶ:

## ಫೆ. 7 ರೊಳಗಾಗಿ ನೋಂದಣಿಗೆ ಸೂಚನೆ

ಕಲಬುರಗಿ,ಜ.31:ಶಾಲಾ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ 2025ರ ಫೆಬ್ರವರಿ 14 ಹಾಗೂ 15 ರಂದು ಎರಡು ದಿನಗಳ ಕಾಲ ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ಕ್ಯಾಂಪಸ್‌ದಲ್ಲಿ Knowledge Conclave 2025 (Know-Con-2025) ಶಿಕ್ಷಣ ಭಾಗಿದಾರರ ಶಿಕ್ಷಣ ಸಮಾವೇಶವನ್ನು ಆಯೋಜಿಸಲಾಗುತ್ತಿದೆ ಎಂದು ಕಲಬುರಗಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ.ಆಕಾಶ್ ಎಸ್. ಅವರು ತಿಳಿಸಿದ್ದಾರೆ.

ಗುಣಾತ್ಮಕ ಶಿಕ್ಷಣಕ್ಕಾಗಿ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ನವೀನ ವಿಧಾನಗಳ ಮೂಲಕ ಪರಿವರ್ತನೆಯನ್ನು ತರಲು ಶಿಕ್ಷಣ ತಜ್ಞರು, ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಶಿಕ್ಷಣ ಭಾಗಿದಾರರನ್ನು ಒಗ್ಗೂಡಿಸುವುದು ಈ ಸಮಾವೇಶದ ಮುಖ್ಯ ಉದ್ದೇಶವಾಗಿದೆ.

# ಸರ್ಕಾರ ಮತ್ತು ಸಾರ್ವಜನಿಕರ ಮಧ್ಯೆ ಪತ್ರಕರ್ತರು ಸೇತುವೆಯಾಗಿರಬೇಕು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.31:ಪತ್ರಕರ್ತರು ಸಾರ್ವಜನಿಕ ಸಮಸ್ಯೆಗಳ ಪರಿಹಾರದ ನಿಟ್ಟಿನಲ್ಲಿ ಸರ್ಕಾರ ಮತ್ತು ಸಾರ್ವಜನಿಕರ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸಬೇಕು ಎಂದು ಕಲಬುರಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಜಡಿಯಪ್ಪ ಜಿ. ತಿಳಿಸಿದರು.

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಪತ್ರಕರ್ತರ ಸಂಪಾದಕರ ಸಂಘದ ಕಲಬುರಗಿ ಜಿಲ್ಲಾ ಘಟಕದ ವತಿಯಿಂದ ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕಲಬುರಗಿಯಲ್ಲಿ ಸಣ್ಣ, ಮಧ್ಯಮ ಮತ್ತು ರಾಜ್ಯ ಮಟ್ಟದ ಎಲ್ಲ ಪತ್ರಕರ್ತರು ಒಗ್ಗಟ್ಟಿನಿಂದ ಇರುವುದು ಬಹಳ ಸಂತೋಷ ಹಾಗೂ ಸಮಾಧಾನದ ಸಂಗತಿ ಎಂದರು.

ಜೈಭೀಮ ಗದೆ ಕನ್ನಡ ದಿನ ಪತ್ರಿಕೆಯ ಸಂಪಾದಕ ಶಂಕರ ಕೋಡ್ಲಾ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಲಬುರಗಿ ಜಿಲ್ಲಾ ಘಟಕದ ಅಧ್ಯಕ್ಷ ಬಾಬುರಾವ ಯಡ್ರಾಮಿ ಮಾತನಾಡಿದರು.ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯ ಡಾ. ಶಿವರಂಜನ ಸತ್ಯಂಪೇಟೆ ವೇದಿಕೆಯಲ್ಲಿದ್ದರು. ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಪತ್ರಕರ್ತರ ಸಂಪಾದಕರ ಸಂಘದ ಕಲಬುರಗಿ ಜಿಲ್ಲಾ ಘಟಕದ ಅಧ್ಯಕ್ಷ ಹಾಗೂ ಕಲಬುರ್ಗಿ ಕನ್ನಡಿ ದಿನ ಪತ್ರಿಕೆಯ ಸಂಪಾದಕ ಸಿದ್ರಾಮಪ್ಪ ಮಾಲಿಬಿರಾದಾರ ಅಧ್ಯಕ್ಷತೆ ವಹಿಸಿದ್ದರು.

ಮೋಹರೆ ಹನುಮಂತರಾಯ ಪ್ರಶಸ್ತಿ ಪುರಸ್ಕೃತ ಕರ್ನಾಟಕ ಸಂಧ್ಯಾಕಾಲ ಕನ್ನಡ ದಿನ ಪತ್ರಿಕೆಯ ಸಂಪಾದಕ ಡಿ. ಶಿವಲಿಂಗಪ್ಪ, ಆಂದೋಲನ ಪತ್ರಿಕೆ ಪ್ರಶಸ್ತಿ ಪುರಸ್ಕೃತ ನೃಪತುಂಗ ಕನ್ನಡ ದಿನ ಪತ್ರಿಕೆಯ ಸಂಪಾದಕ ಶಿವರಾಯ ದೊಡ್ಡಮನಿ, ಮಾಧ್ಯಮ ಮಾನ್ಯತಾ ಸಮಿತಿಗೆ ನೇಮಕಗೊಂಡ ಕನ್ನಡ ಬಂಧು ಕನ್ನಡ ದಿನ ಪತ್ರಿಕೆಯ ಸಂಪಾದಕ ಗುರುರಾಜ ಕುಲಕರ್ಣಿ, ಎಸ್.ಎಸ್ಸಿ ಪತ್ರಿಕೆಗಳ ಸಂಘದ ವಿಶೇಷ ಪ್ರಶಸ್ತಿ ಪುರಸ್ಕೃತ ಹ್ಯದ್ರಾಬಾದ ಕರ್ನಾಟಕ ಮುಂಜಾವು ಕನ್ನಡ ದಿನ ಪತ್ರಿಕೆಯ ಸಂಪಾದಕ ಸುರೇಶ ಶಿಂಧೆ, ಕೆಯುಡಬ್ಲೂ ಜೆ ವಿಶೇಷ ಪ್ರಶಸ್ತಿ ಪುರಸ್ಕೃತ ಜನತಾ ಟೈಮ್ಸ್ ಕನ್ನಡ ದಿನ ಪತ್ರಿಕೆಯ ಸಂಪಾದಕ ಶರಣಬಸಪ್ಪ ಜಿಡಗೆ, ಬಸವೇಶ್ವರ ಬ್ಯಾಂಕ್ ನ ನಿರ್ದೇಶಕರಾಗಿ ಚುನಾಯಿತರಾದ ಶಾಸನ ಕನ್ನಡ ದಿನ ಪತ್ರಿಕೆಯ ಸತೀಶ ಜೇವರ್ಗಿ ಮುಂತಾದವರನ್ನು ಸಂಘದ ವತಿಯಿಂದ ಸನ್ಮಾನಿಸಲಾಯಿತು.

ಹಿರಿಯ ಪತ್ರಕರ್ತ ಸಿದ್ದಣ್ಣ ಮಾಲಗಾರ ನಿರೂಪಿಸಿದರು. ಶೂದ್ರಶಕ್ತಿ ಕನ್ನಡ ದಿನ ಪತ್ರಿಕೆಯ ಸಂಪಾದಕ ಬಿ.ವಿ. ಚಕ್ರವರ್ತಿ ಪ್ರಾಸ್ತಾವಿಕ ಮಾತನಾಡಿದರು. ಸಂಘದ ಪ್ರಧಾನ ಕಾರ್ಯದರ್ಶಿ ಸತ್ಯಕಾಮ ಕನ್ನಡ ದಿನ ಪತ್ರಿಕೆಯ ಸಂಪಾದಕ ಆನಂದ ಮಣ್ಣೂರ ಸ್ವಾಗತಿಸಿದರು. ಇಲ್ಲಿಯ ಜನ ಕನ್ನಡ ದಿನ ಪತ್ರಿಕೆಯ ಸಂಪಾದಕ ಚಂದ್ರಕಾಂತ ಹಾವನೂರ ವಂದಿಸಿದರು.

# ತಾಯಿ ಕಾರ್ಡ್ ನೀಡಿ, ಪ್ರತಿದಿನ ಕಬ್ಬಿಣಾಂಶ ಮಾತ್ರೆ ಸೇವನೆ ಖಚಿತಪಡಿಸಿ: ಜಿಪಂ ಸಿಇಒ ಸಂಕನೂರು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.31:ಗರ್ಭಿಣಿ ಮಹಿಳೆ ಎಂದು ತಿಳಿದ ಕೂಡಲೇ ಉಚಿತವಾಗಿ ತಾಯಿಕಾರ್ಡ್ ಒದಗಿಸಬೇಕು. ಪ್ರತಿದಿನ ಒಂದರಂತೆ ಆರು ತಿಂಗಳು ಅವಧಿಯಲ್ಲಿ ಕನಿಷ್ಠ 180 ಕಬ್ಬಿಣಾಂಶ ಮಾತ್ರೆಗಳನ್ನು ನುಂಗುತ್ತಿರುವ ಬಗ್ಗೆ ಮನೆ ಭೇಟಿ ಮೂಲಕ ನಿರಂತರ ನಿಗಾವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರು ಅವರು ತಿಳಿಸಿದರು.

ಶುಕ್ರವಾರದಂದು ಜಿಲ್ಲಾ ಪಂಚಾಯತ್ ನ ವಿಡಿಯೋ ಸಂವಾದ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವೈದ್ಯರು ಆರೋಗ್ಯ ತಪಾಸಣೆ ಮಾಡಿದಾಗ ರಕ್ತದಲ್ಲಿ ಕಬ್ಬಿಣಾಂಶ ಪ್ರಮಾಣ ಕುರಿತು ಗರ್ಭಿಣಿ ಮಹಿಳೆಯರಿಗೆ ಮಾಹಿತಿ ನೀಡಬೇಕು. ಕಬ್ಬಿಣಾಂಶ ಹಾಗೂ ಕ್ಯಾಲ್ಸಿಯಂ ಮಾತ್ರೆಗಳನ್ನು ನುಂಗುವುದರಿಂದ ಮಗುವಿನ ಬೆಳವಣಿಗೆ ಸರಿಯಾಗಿ ಆಗುವ, ಹೆರಿಗೆ ವೇಳೆ ರಕ್ತ ಕೊರತೆಯಾಗದಿರುವ ಕುರಿತು ತಿಳಿಸಬೇಕು ಎಂದರು.

ಗರ್ಭಿಣಿಯರಿಗೆ ಪ್ರತಿದಿನ ಮನೆಗೆ ತೆರಳಿ ಪೌಷ್ಟಿಕ ಆಹಾರ ಒದಗಿಸಲು ಕಾರ್ಯಯೋಜನೆ ಹಾಕಿಕೊಂಡು ಗಂಡಾಂತರ ಗರ್ಭಿಣಿಯರ ಸಂ–ಖ್ಯೆ ಕಡಿಮೆಯಾಗುವಂತೆ ವೈದ್ಯಾಧಿಕಾರಿಗಳು ಕ್ರಮವಹಿಸಬೇಕು ಎಂದು ಸೂಚಿಸಿದರು.

ಸನ್ಮಾನ:ಗರ್ಭಿಣಿಯರ ಆರೈಕೆಯನ್ನು ಸಿಬ್ಬಂದಿಯವರ ಮೂಲಕ ಉತ್ತೇಜಿಸಲು ಪ್ರತಿ ತಿಂಗಳು ಒಬ್ಬ ಪ್ರಾಥಮಿಕ ಸುರಕ್ಷಾಧಿಕಾರಿ, ಆಶಾ ಕಾರ್ಯಕರ್ತೆಯರನ್ನು ಗುರ್ತಿಸಿ ಸನ್ಮಾನಿಸಲು ನಿರ್ಧರಿಸಿ, ಪ್ರಸ್ತುತ ತಿಂಗಳು ಟಿ.ಅರುಣಜ್ಯೋತಿ ಹಾಗೂ ಎ.ಚೌಡಮ್ಮ ಅವರಿಗೆ ಸನ್ಮಾನಿಸಲಾಯಿತು.

ಹಾವು ಕಡಿತಕ್ಕೆ ಚಿಕಿತ್ಸೆ:ಹಾವು ಕಡಿತದ ಸಂದರ್ಭದಲ್ಲಿ ಕಡಿತಕ್ಕೊಳಗಾದವರಿಗೆ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಮಾರ್ಗಸೂಚಿ ಅನ್ವಯ 10 ವಾಯಿಲ್ ಆಂಟಿವೆನಮ್ ಲಸಿಕೆ ತಪ್ಪದೇ ನೀಡಬೇಕು.

ಅಂಧತ್ವಮುಕ್ತ ಬಳ್ಳಾರಿ:ಗ್ರಾಮೀಣ ಭಾಗದಲ್ಲಿ ಅಂಧತ್ವ ಗುರ್ತಿಸಿದ ಜನತೆಯನ್ನು ತಪ್ಪದೆ ಶಸ್ತ್ರಚಿಕಿತ್ಸೆಗೆ ಒಳಪಡಿಸಬೇಕು. ಪ್ರಸ್ತುತ ವರ್ಷ 9884 ಜನರಿಗೆ ಶಸ್ತ್ರಚಿಕಿತ್ಸೆ ಮಾಡಲಾಗಿದ್ದು, ಖಾಸಗಿ ಅಸ್ಪತ್ರೆಗಿಂತ ಸರಕಾರಿ ಆಸ್ಪತ್ರೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಾಡಿಸಲು ಸೂಚಿಸಬೇಕು. ಶಾಲೆಗಳಲ್ಲಿ ಮಕ್ಕಳಿಗೆ ದೃಷ್ಟಿದೋಷ ಪರಿಣಾಮಕಾರಿ ಗುರ್ತಿಸಬೇಕು. ಬಳಿಕ ಕನ್ನಡಕ ವಿತರಿಸಬೇಕು.

ಅಂಗಾಂಗ ದಾನ ನೋಂದಣಿ:ಜಿಲ್ಲೆಯಲ್ಲಿ ಈಗಾಗಲೇ 7092 ಅಂಗಾಂಗ ದಾನ ನೋಂದಣಿ ಮಾಡಿಸಿ ರಾಷ್ಟ್ರ ಮಟ್ಟದಲ್ಲಿ ಮುಂಚೂಣಿಯಲ್ಲಿದ್ದು, ಇನ್ನೂ ನೋಂದಣಿ ಸಹ ಮಾಡಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಇನ್ನು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸುವಂತೆ ಜಿಪಂ ಸಿಇಒ ಅವರು ಸೂಚಿಸಿದರು. ಅಲ್ಲದೆ ಡೆ–ಂಗ್ಯು ಮತ್ತು ಚಿಕುನ್‌ಗುನ್ಯಾ, ಕುಟುಂಬ ಕಲ್ಯಾಣ ವಿಧಾನಗಳು, ಕ್ಷಯರೋಗ ಕಾರ್ಯಕ್ರಮ, ತಾಯಿ ಮಗುವಿನ ಆರೈಕೆ, ಮಾನಸಿಕ ಆರೋಗ್ಯ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ., ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ, ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಡಾ.ಬಸವರಾಜ್ ದಮ್ಮೂರು, ಡಾ.ಅರುಣ್ ಕುಮಾರ್, ಡಾ.ಭರತ್, ಡಾ.ಮಂಜುನಾಥ ಜವಳಿ, ಡಾ.ಸುರೇಶ ಕುಮಾರ್, ಡಾ.ಪ್ರಿಯಾಂಕ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಡಿಎನ್‌ಒ ಗಿರೀಶ್, ಡಿಪಿಎಮ್ ವೆಂಕೋಬ್ ನಾಯ್ಕ್, ಮನೋಹರ, ಆಶಾಪ್ರೇಮ ಸೇರಿದಂತೆ ಇತರರು ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.